**ಸಂಪುಟ:** 06 **ಸಂಚಿಕೆ:** 178 **ಪುಟಗಳು:** 08 ಬುಧವಾರ 09 ಸೆಪ್ಟೆಂಬರ್ 2026 www.udayavahini.in epaper.udayavahini.in Udaya vahini news Udaya vahini news Udayavahini news youtube udayavahininews@gmail.com

ಸಂಪಾದಕರು: ಟಿ. ಹೊಂಬೇಗೌಡ RNI No. KARKAN/2021/80833 9448225696 +91 8035841833 ₹5

# ಉದಯ ವಾಹಿನಿ


ಸರ್ವ ಸಮಾನತೆಯ ಕನ್ನಡ ದಿನಪತ್ರಿಕೆ

**ಮುಂಜಾನೆ ಮಾತು**

ಸಂಬಂಧಗಳು ಹಾಳಾಗುವುದು, ದೊಡ್ಡ - ದೊಡ್ಡ ಕಲಹಗಳಿಂದಲ್ಲ.. ಹಿಂದೆ ಮಾತಾಡುವ ಹವ್ಯಾಸದಿಂದ ಅಂತಹವರಿಗೊಂದು ದೊಡ್ಡ ನಮಸ್ಕಾರ.

# ಕರುನಾಡಿಗೆ ಮತ್ತೆ ಶಾಕ್

**ಕಾವೇರಿ ನೀರು ನಿರ್ವಹಣಾ ಸಮಿತಿ ಆದೇಶದ ಬಗ್ಗೆ ಮಾಧ್ಯಮಗಳು ಪ್ರಶ್ನೆ ಮಾಡಿದ್ದು, ಈ ವೇಳೆ ವಿಧಾನಸೌಧದ ಮೆಟ್ಟಿಲಿನ ಮೇಲೆ ನಿಂತು ಏನು ಉತ್ತರ ನೀಡದೆ ಹಣೆ ಚಚ್ಚಿಕೊಂಡು ಒಳಗೆ ಹೋಗಿದ್ದಾರೆ. ಕೆಆರ್‌ಎಸ್‌ನಲ್ಲಿ ನೀರಿನ ಮಟ್ಟ ಕಡಿಮೆ ಆಗಿದ್ದು, ಸರ್ಕಾರಕ್ಕೂ ಸಂಕಷ್ಟ ಸ್ಥಿತಿ ಆಗಿದೆ.ಈ ಬಗ್ಗೆ ಮಾತಾಡಿದ ಜಲಸಂಪನ್ಮೂಲ ಸಚಿವ ಚಲುವರಾಯಸ್ವಾಮಿ ಅವರು, ಕಾವೇರಿ ನೀರು ನಿರ್ವಹಣೆ ಸಮಿತಿಯಲ್ಲಿ 6 ಸಾವಿರ ಕ್ಯೂಸೆಕ್ ನೀರು ಬಿಡುವಂತೆ ಆದೇಶ ಆಗಿದೆ. ನಮಗೆ ಒಳಹರಿವು 3800 ಕ್ಯೂಸೆಕ್ ಇದೆ ಅಷ್ಟೇ. ಈಗಾಗಲೇ ವಾತಾವರಣ ಬದಲಾವಣೆ ಆಗಿದ್ದು, ಬಿಸಿ ವಾತಾವರಣ ಸೃಷ್ಟಿ ಆಗ್ತಿದೆ. CWMA ಸಭೆ ಇದೆ ACS ಗೌರವ್ ಗುಪ್ತಾ ಅವರಿಗೆ ಅಟೆಂಡ್ ಆಗಲು ಹೇಳಿದ್ದು, CWMA ಆದೇಶ ನೋಡಿ ನಿರ್ಧಾರ ಮಾಡ್ತೇವೆ. ಸುಪ್ರೀಂಗೆ ಅಪೀಲು ಮಾಡೋದು ಅನಿವಾರ್ಯ ಎಂದು ಸಚಿವರು ತಿಳಿಸಿದ್ದಾರೆ.**





**ತಮಿಳುನಾಡಿಗೆ ಕಾವೇರಿ 'ಶೂನ್ಯ ನೀರು' ಬಿಡುವ ನಿಟ್ಟಿನಲ್ಲಿ ಪ್ರಯತ್ನ**

**1** ತಮಿಳುನಾಡಿಗೆ ಕಾವೇರಿ 'ಶೂನ್ಯ ನೀರು' ಬಿಡುವ ನಿಟ್ಟಿನಲ್ಲಿ ಪ್ರಯತ್ನ

**2** ಜಲಸಂಪನ್ಮೂಲ ಸಚಿವ ಎನ್ ಚಲುವರಾಯಸ್ವಾಮಿ ಮಹತ್ವದ ಹೇಳಿಕೆ

**3** ಕಾವೇರಿ ನೀರು ನಿಯಂತ್ರಣ ಪ್ರಾಧಿಕಾರದ ಆದೇಶದ ವಿರುದ್ಧ ಸುಪ್ರೀಂಕೋರ್ಟ್ ಕದ ತಟ್ಟಲು ಚಿಂತನೆ

## ಅಧಿಕಾರಿಗಳಿಗೆ ತರಾಟೆ

ಉತ್ತರ ಕರ್ನಾಟಕದ ಜೀವನಾಡಿಯಾದ ಕೃಷ್ಣಾ ಭಾಗ್ಯ ಜಲ ನಿಗಮದ ಪ್ರಗತಿ ಪರಿಶೀಲನಾ ಸಭೆಯಲ್ಲಿ ಜಲಸಂಪನ್ಮೂಲ ಸಚಿವ ಎನ್. ಚಲುವರಾಯಸ್ವಾಮಿ ಅವರು ಅಧಿಕಾರಿಗಳ ಕಾರ್ಯವೈಖರಿಯನ್ನು ಸಂಪೂರ್ಣವಾಗಿ ಅವಲೋಕಿಸಿದರು. 24 ಸಾವಿರ ಹೆಕ್ಟೇರ್ ಪ್ರದೇಶಕ್ಕೆ ಒದಗಿಸಲಾದ ಹನಿ ನೀರಾವರಿ ನಿರೀಕ್ಷಿತ ಯಶಸ್ಸು ಕಾಣದಿರುವ ಬಗ್ಗೆ ತೀವ್ರ ಅಸಮಾಧಾನ ವ್ಯಕ್ತಪಡಿಸಿದ ಸಚಿವ ಚಲುವರಾಯಸ್ವಾಮಿ, ಗುತ್ತಿಗೆದಾರರ ವಿರುದ್ಧ ಕಠಿಣ ಕ್ರಮಕ್ಕೆ ಸೂಚಿಸಿದರು. ಗುತ್ತಿಗೆ ಪಡೆದವರು ಸರಿಯಾಗಿ ನೀರು ಪೂರೈಸುತ್ತಿಲ್ಲ ಹಾಗೂ ಕಾಯ್ದೆಯ ಪ್ರಕಾರ ಐದು ವರ್ಷಗಳ ನಿರ್ವಹಣಾ ನಿಯಮವನ್ನು ಉಲ್ಲಂಘಿಸುತ್ತಿದ್ದಾರೆ ಎಂಬುದನ್ನು ಗಂಭೀರವಾಗಿ ಪರಿಗಣಿಸಿದ ಅವರು, ಅಧಿಕಾರಿಗಳು ಹಾಗೂ ಸ್ಥಳೀಯ ಜನಪ್ರತಿನಿಧಿಗಳೊಂದಿಗೆ ಖುದ್ದು ಸ್ಥಳ ಪರಿಶೀಲನೆ ನಡೆಸುವ ತೀರ್ಮಾನ ಪ್ರಕಟಿಸಿದರು.ಕೇವಲ ನ್ಯಾಯಾಲಯದ ನೆಪವೊಡ್ಡಿ ಕಾಮಗಾರಿ ವಿಳಂಬ ಮಾಡುವುದನ್ನು ಸಹಿಸುವುದಿಲ್ಲ, ಪ್ರತಿಯೊಂದು ಸಮಸ್ಯೆಗೂ ತ್ವರಿತ ಪರಿಹಾರ ಒದಗಿಸಲೇಬೇಕು ಎಂದು ಅಧಿಕಾರಿಗಳಿಗೆ ಖಡಕ್ ನಿರ್ದೇಶನ ನೀಡಿದರು.

• **ಉದಯವಾಹಿನಿ, ಬೆಂಗಳೂರು**

ತಮಿಳುನಾಡಿಗೆ ನಿತ್ಯ 6 ಸಾವಿರ ಕ್ಯೂಸೆಕ್ಸ್ ಕಾವೇರಿ ನೀರು ಹರಿಸುವಂತೆ ಪ್ರಾಧಿಕಾರ ನೀಡಿರುವ ಆದೇಶ ಅಸಂಬದ್ಧವಾಗಿದ್ದು, ಅತ್ಯಂತ ನೋವು ಹಾಗೂ ಬೇಸರ ತಂದಿದೆ ಎಂದು ಜಲಸಂಪನ್ಮೂಲ ಸಚಿವ ಎನ್. ಚಲುವರಾಯಸ್ವಾಮಿ ಆಕ್ರೋಶ ವ್ಯಕ್ತಪಡಿಸಿದ್ದಾರೆ.

ಮಾಧ್ಯಮಗಳೊಂದಿಗೆ ಮಾತನಾಡಿದ ಅವರು, ಕಾವೇರಿ ನೀರು ನಿರ್ವಹಣಾ ಸಮಿತಿ ಸಭೆಯಲ್ಲಿ ನಮ್ಮ ರಾಜ್ಯದ ಅಧಿಕಾರಿಗಳು ವಾಸ್ತವ ಸ್ಥಿತಿಯ ಬಗ್ಗೆ ಪ್ರಬಲವಾಗಿವಾದ ಮಂಡಿಸಿದ್ದಾರೆ. ತಮಿಳುನಾಡು 17 ಸಾವಿರ ಕ್ಯೂಸೆಕ್ಸ್ ನೀರಿಗೆ ಬೇಡಿಕೆ ಇಟ್ಟಿತ್ತು. ಆದರೆ ಕಳೆದ ಒಂದು ವಾರದಿಂದ ಕಾವೇರಿ ಜಲಾನಯನ ಪ್ರದೇಶದಲ್ಲಿ ನೀರಿನ ಒಳಹರಿವು ಗಣನೀಯವಾಗಿ ಕಡಿಮೆಯಾಗಿದೆ. ಇಂತಹ ಸಂಕಷ್ಟದ ಸ್ಥಿತಿಯಲ್ಲಿ 6 ಸಾವಿರ ಕ್ಯೂಸೆಕ್ಸ್ ನೀರು ಹರಿಸುವುದೂ ನಮಗೆ ಅಸಾಧ್ಯ. ನಾವು 'ಶೂನ್ಯ ನೀರು' ಬಿಡುವ ನಿಟ್ಟಿನಲ್ಲಿ ಸತತ ಪ್ರಯತ್ನ ನಡೆಸುತ್ತಿದ್ದೇವೆ, ಎಂದರು. ದೆಹಲಿಯಲ್ಲಿ ಕುಳಿತು ಆದೇಶ ನೀಡುವ ಪ್ರಾಧಿಕಾರಗಳ ಕಾರ್ಯವೈಖರಿಯನ್ನು ತರಾಟೆಗೆ ತೆಗೆದುಕೊಂಡ ಸಚಿವರು, ದೆಹಲಿಯಲ್ಲಿ ಕುಳಿತು ಆಡಳಿತ ನಡೆಸುವ ಸಾಂವಿಧಾನಿಕ ಹಾಗೂ ಆಡಳಿತಾತ್ಮಕ ಪೀಠಗಳಿಗೆ ನೆಲಮಟ್ಟದ ವಾಸ್ತವ ಸ್ಥಿತಿ ಅರ್ಥವಾಗುತ್ತಿಲ್ಲ. ಈ ಹಿಂದೆಯೂ ವಾಸ್ತವ ಅರಿಯದೆ ಇದೇ ರೀತಿಯ ಆದೇಶಗಳನ್ನು ನೀಡಿರುವ ನಿದರ್ಶನಗಳಿವೆ.

ಮೂರು ಗಂಟೆಗೆ ಕಾವೇರಿ ನೀರು ನಿರ್ವಹಣಾ ಪ್ರಾಧಿಕಾರದ ಸಭೆ ನಡೆಯಲಿದ್ದು, ಅಲ್ಲಿಯೂ ನಮಗೆ ಹೆಚ್ಚಿನ ಸಮಾಧಾನ ಸಿಗುವುದು ಅನುಮಾನ. ಹೀಗಾಗಿ ಸಿಡಬ್ಲ್ಯೂಎಂಎ ಸಭೆಯ ಬಳಿಕ ಮುಖ್ಯಮಂತ್ರಿಗಳೊಂದಿಗೆ ಚರ್ಚಿಸಿ, ನಾಳೆಯೇ ಸುಪ್ರೀಂಕೋರ್ಟ್‌ಗೆ ಅರ್ಜಿ ಸಲ್ಲಿಸಲು ಸರ್ಕಾರ ಗಂಭೀರ ಚಿಂತನೆ ನಡೆಸಿದೆ, ಎಂದು ಮಾಹಿತಿ ನೀಡಿದರು. ರಾಜ್ಯದ ಜಲಾಶಯಗಳ ನೀರಿನ ಸಂಗ್ರಹದ ಕುರಿತು ವಿವರಿಸಿದ ಅವರು, ಪ್ರಸ್ತುತ ಡ್ಯಾಂಗಳಲ್ಲಿರುವ ನೀರಿನ ಪೈಕಿ ಶೇ.50 ರಷ್ಟನ್ನು ಕೇವಲ ಕುಡಿಯುವ ನೀರಿನ ಉದ್ದೇಶಕ್ಕೆ ಮೀಸಲಿಡಲಾಗಿದೆ.

ಭದ್ರಾ ಹಾಗೂ ಕೃಷ್ಣಾ ಮೇಲ್ದಂಡೆ ಯೋಜನೆಯಿಂದ ರೈತರ ಬೆಳೆಗಳಿಗೆ ಅಗತ್ಯಕ್ಕೆ ತಕ್ಕಂತೆ ನೀರು ಒದಗಿಸಲಾಗಿದೆ. ಚಿತ್ರದುರ್ಗ ಭಾಗದಲ್ಲಿ ಕುಡಿಯುವ ನೀರಿನ ಸಮಸ್ಯೆ ಬಾರದಂತೆ ನದಿಯ ಮೂಲಕ ನೀರು ಹರಿಸಲಾಗಿದೆ. ಎಲ್ಲೆಡೆ ಕೆರೆ-ಕುಂಟೆಗಳನ್ನು ತುಂಬಿಸಿ ಜನ-ಜಾನುವಾರುಗಳಿಗೆ ಸಮಸ್ಯೆಯಾಗದಂತೆ ಡ್ಯಾಂಗಳಿಂದ ನಿಯಂತ್ರಿತವಾಗಿ ನೀರು ನಿರ್ವಹಣೆ ಮಾಡಲಾಗುತ್ತಿದೆ, ಎಂದರು.



**ಕಾವೇರಿ ಕಾನೂನು ಸಮರ**

ಇದೇ ವೇಳೆ ವಿರೋಧ ಪಕ್ಷದ ನಾಯಕರ ಪಾದಯಾತ್ರೆಯ ಕುರಿತು ವ್ಯಂಗ್ಯವಾಡಿದ ಸಚಿವ ಚಲುವರಾಯಸ್ವಾಮಿ, ಬಿಜೆಪಿಯವರು ಯಾರ ಹರಕ್ಕೆ ಬಿದ್ದು ಪಾದಯಾತ್ರೆ ನಡೆಸುತ್ತಿದ್ದಾರೆ ಎಂಬುದು ಇಡೀ ರಾಜ್ಯದ ಜನತೆಗೆ ಗೊತ್ತಿದೆ. ಈಗಾಗಲೇ ಆರ್. ಅಶೋಕ್ ಅವರಿಗೆ ಕಾಲು ನೋವು ಕಾಣಿಸಿಕೊಂಡಿದೆ. ಅಲ್ಲಿರುವ ನಾಯಕರೂ ನಮ್ಮ ಸ್ನೇಹಿತರೇ ಆಗಿದ್ದು, ಪಾದಯಾತ್ರೆ ಮಾಡುವವರ ಆರೋಗ್ಯ ಕೆಡದಿರಲಿ. ಪಾದಯಾತ್ರೆ ಮುಗಿದ ಮೇಲೂ ಅವರ ಆರೋಗ್ಯ ಸ್ಥಿರವಾಗಿರಲಿ ಎಂದು ಆಶಿಸುತ್ತೇನೆ ಎಂದು ಟಾಂಗ್ ನೀಡಿದರು.

## ರೈತರ ಹಿತರಕ್ಷಣೆಗೆ ಸರ್ಕಾರ ಬದ್ಧ



ಸರ್ಕಾರ ಸದಾ ರೈತರ ರಕ್ಷಣೆಗೆ ಬದ್ಧವಾಗಿದೆ. ಹೇಮಾವತಿ ಜಲಾನಯನ ಭಾಗದಲ್ಲಿ ಕೆರೆಗಳನ್ನು ತುಂಬಿಸಲು ಕ್ರಮ ಕೈಗೊಳ್ಳಲಾಗಿದ್ದು, ಹಾರಂಗಿ ಹಾಗೂ ಕೆಆರ್‌ಎಸ್ ಜಲಾಶಯಗಳ ಮೂಲಕವೂ ಅಗತ್ಯ ನೀರನ್ನು ಹರಿಸಲಾಗಿದೆ ಎಂದು ಸಚಿವರು ಸ್ಪಷ್ಟಪಡಿಸಿದರು.ಜೊತೆಗೆ, ಯುಕೆಪಿ 1, 2 ಹಾಗೂ 3ನೇ ಹಂತದ ಯೋಜನೆಗಳಿಗೆ ಸಂಬಂಧಿಸಿದಂತೆ ನ್ಯಾಯಾಲಯದಲ್ಲಿರುವ ಪ್ರಕರಣಗಳನ್ನು ಶೀಘ್ರವೇ ಇತ್ಯರ್ಥಪಡಿಸಲು ಪ್ರತ್ಯೇಕ ಕಡತ ಸಿದ್ಧಪಡಿಸಿ, ಅದಕ್ಕೆ ಅಗತ್ಯವಿರುವ ಆರ್ಥಿಕ ನೆರವು ನೀಡುವುದಾಗಿ ಭರವಸೆ ನೀಡಿದರು. ಇದೇ ವೇಳೆ, ವಿಜಯಪುರ ಭಾಗದ ತೋಟಗಾರಿಕಾ ರೈತರಿಗೆ ಯಾವುದೇ ರೀತಿಯಲ್ಲಿ ನೀರಿನ ಕೊರತೆಯಾಗದಂತೆ ಎಚ್ಚರವಹಿಸಲು ಸಚಿವರು ಸೂಚಿಸಿದರು. ನಂದವಾಡಗಿ, ಕೆರೂರು, ಬೂದಿಹಾಳ, ಭಗವತಿ, ಪಾಮನಕಲ್ಲೂರು ಹಾಗೂ ಚಡಚಣ ಸೇರಿದಂತೆ ಪ್ರಮುಖ ಏತ ನೀರಾವರಿ ಯೋಜನೆಗಳಿಗೆ ವೇಗ ನೀಡಬೇಕು ಮತ್ತು ಅನಿವಾರ್ಯ ಕಾರಣಗಳಿಂದ ಸ್ಥಗಿತಗೊಂಡಿರುವ ಕಾಮಗಾರಿಗಳಿಗೆ ಮರು ಟೆಂಡರ್ ಕರೆದು ಸಾರ್ವಜನಿಕ ಹಣ ಪೋಲಾಗದಂತೆ ನೋಡಿಕೊಳ್ಳಬೇಕು ಎಂದು ಆದೇಶಿಸಿದರು.

## ಕುಡಿಯುವ ನೀರಿಗೆ ಶೇ50 ರಷ್ಟು ಮೀಸಲು

ರಾಜ್ಯದ ಜಲಾಶಯಗಳ ನೀರಿನ ಸಂಗ್ರಹದ ಕುರಿತು ವಿವರಿಸಿದ ಅವರು, ಪ್ರಸ್ತುತ ಡ್ಯಾಂಗಳಲ್ಲಿರುವ ನೀರಿನ ಪೈಕಿ ಶೇ. 50ರಷ್ಟನ್ನು ಕೇವಲ ಕುಡಿಯುವ ನೀರಿನ ಉದ್ದೇಶಕ್ಕೆ ಮೀಸಲಿಡಲಾಗಿದೆ. ಭದ್ರಾ ಕೃಷ್ಣಾ ಮೇಲ್ದಂಡೆ ಯೋಜನೆಯಿಂದ ರೈತರ ಬೆಳೆಗಳಿಗೆ ಅಗತ್ಯಕ್ಕೆ ತಕ್ಕಂತೆ ನೀರು ಒದಗಿಸಲಾಗಿದೆ ಎಂದರು. ಚಿತ್ರದುರ್ಗ ಭಾಗದಲ್ಲಿ ಕುಡಿಯುವ ನೀರಿನ ಸಮಸ್ಯೆ ಬಾರದಂತೆ ನದಿಯ ಮೂಲಕ ನೀರು ಹರಿಸಲಾಗಿದೆ. ಎಲ್ಲೆಡೆ ಕೆರೆ-ಕುಂಟೆಗಳನ್ನು ತುಂಬಿಸಿ ಜನ-ಜಾನುವಾರುಗಳಿಗೆ ಸಮಸ್ಯೆಯಾಗದಂತೆ ಡ್ಯಾಂಗಳಿಂದ ನಿಯಂತ್ರಿತವಾಗಿ ನೀರು ನಿರ್ವಹಣೆ ಮಾಡಲಾಗುತ್ತಿದೆ ಎಂದು ಮಾಹಿತಿ ನೀಡಿದರು.

ರಾಜ್ಯದಲ್ಲಿ ನೀರಿನ ಕೊರತೆಯಿರುವ ಬಗ್ಗೆ ಪ್ರಾಧಿಕಾರಕ್ಕೆ ಮನವರಿಕೆ ಮಾಡಿಕೊಡಲು ಅಧಿಕಾರಿಗಳ ತಂಡ ದೆಹಲಿಗೆ ತೆರಳಿತ್ತು. ನಿನ್ನೆಯಷ್ಟೇ ಸರ್ಕಾರದ ಅಪರ ಮುಖ್ಯ ಕಾರ್ಯದರ್ಶಿಗಳು ಈ ಕುರಿತು ಮಹತ್ವದ ಸಭೆ ನಡೆಸಿ ಸಿದ್ಧತೆಗಳನ್ನು ಪರಿಶೀಲಿಸಿದ್ದಾರೆ ಎಂದು ಸಚಿವರು ವಿವರ ನೀಡಿದ್ದರು. ನೀರಿನ ವಿಚಾರವಾಗಿ ಪದೇಪದೇ ಅರ್ಜಿ ಸಲ್ಲಿಸುತ್ತಿದ್ದ ತಮಿಳುನಾಡಿಗೆ ಸರ್ವೋಚ್ಚ ನ್ಯಾಯಾಲಯವೂ 'ಪ್ರತಿ ಬಾರಿಯೂ ಕೋರ್ಟ್ ಮೆಟ್ಟಿಲೇರಬೇಡಿ ಎಂದು ಬುದ್ಧಿವಾದ ಹೇಳಿದೆ. ರಾಜ್ಯದ ಪಾಲಿನ ನೀರನ್ನು ತಮಿಳುನಾಡು ಕೃಷಿ ಚಟುವಟಿಕೆಗಳಿಗೆ ಅತಿಯಾಗಿ ಬಳಸಿಕೊಂಡಿರುವ ಅಂಶವನ್ನು ಇಂದು ಸಲ್ಲಿಸಲಿರುವ ಮೇಲ್ಮನವಿಯಲ್ಲಿ ಪ್ರಮುಖವಾಗಿ ಪ್ರಸ್ತಾಪಿಸಿ ಪ್ರಾಧಿಕಾರಕ್ಕೆ ಮನವರಿಕೆ ಮಾಡಿಕೊಡಲಾಗುವುದು ಎಂದು ಸಚಿವರು ವಿವರಿಸಿದ್ದರು.

## ಶೀಘ್ರದಲ್ಲೇ ಇನ್ನೂ 25 ತಾಲ್ಲೂಕುಗಳು ಬರಪೀಡಿತ ಪ್ರದೇಶಗಳೆಂದು ಘೋಷಣೆ: ಡಿಸಿಎಂ ಜಿ.ಪರಮೇಶ್ವರ್

• **ಉದಯವಾಹಿನಿ, ಬೆಂಗಳೂರು**

ರಾಜ್ಯದಲ್ಲಿ ಬರ ಪರಿಶೀಲನೆ ಮುಕ್ತಾಯವಾಗಿಲ್ಲ. ಹಂತ ಹಂತವಾಗಿ ನಡೆಯುತ್ತಿದೆ. ಮೊದಲ ಹಂತದಲ್ಲಿ 101 ತಾಲ್ಲೂಕು ಗಳನ್ನು ಬರಪೀಡಿತ ಪ್ರದೇಶಗಳೆಂದು ಘೋಷಣೆ ಮಾಡಲಾಗಿದ್ದು, ಎರಡನೇ ಹಂತದ ಪರಿಶೀಲನೆ ನಡೆಯುತ್ತಿದೆ. 25 ತಾಲ್ಲೂಕುಗಳು ಬರ ಪೀಡಿತ ಪ್ರದೇಶಗಳೆಂದು ಘೋಷಣೆಗೆ ಅರ್ಹತೆ ಪಡೆದಿದ್ದು, ಶೀಘ್ರದಲ್ಲೇ ಘೋಷಣೆ ಮಾಡಲಾಗುವುದು ಎಂದು ಉಪಮುಖ್ಯಮಂತ್ರಿಗಳು ಹಾಗೂ ಕಂದಾಯ ಸಚಿವರಾದ ಡಾ.ಜಿ.ಪರಮೇಶ್ವರ್ ಹೇಳಿದ್ದಾರೆ. ಸದಾಶಿವನಗರದ ನಿವಾಸದ ಬಳಿ ಮಾತನಾಡಿದ ಅವರು, ಬರ ಪೀಡಿತ ಪ್ರದೇಶಗಳ ಘೋಷಣೆ ಪ್ರಕ್ರಿಯೆ ವಿಳಂಬವಾಗಿಲ್ಲ. ಮುಂಗಾರು ಹಿಂಗಾರು ಕಡಿಮೆ ಆಗುವವರೆಗೂ ಪರಿಶೀಲನೆ ಮುಂದುವರಿಯುತ್ತದೆ. ಕಳೆದ ಬಾರಿ ಸುಮಾರು 200 ತಾಲ್ಲೂಕುಗಳನ್ನು ಬರಪೀಡಿತ ಪ್ರದೇಶಗಳೆಂದು ಘೋಷಣೆ ಮಾಡಲಾಗಿತ್ತು. 200ಕ್ಕೂ ಹೆಚ್ಚು ತಾಲ್ಲೂಕುಗಳು ಬರಪೀಡಿತ ಪ್ರದೇಶಗಳೆಂದು ಘೋಷಿಸಲ್ಪಡುವ ಪರಿಸ್ಥಿತಿ ಇದೆ. ಕರಾವಳಿ ಪ್ರದೇಶವನ್ನು ಹೊರತುಪಡಿಸಿ ಉಳಿದೆಲ್ಲೆಡೆ ಬರ ಪರಿಸ್ಥಿತಿ ಇದೆ . ಶಾಸಕರು ತಮ್ಮ ತಾಲ್ಲೂಕು ಬೇಕೆಂದೇ ಬರ ಪೀಡಿತ ಪ್ರದೇಶ ಎಂದು ಘೋಷಣೆ ಮಾಡಿಲ್ಲ ಎಂದು ಆರೋಪಿಸಿ ಪ್ರತಿಭಟನೆ ನಡೆಸುತ್ತಿರುವ ವಿಚಾರವಾಗಿ ಪ್ರತಿಕ್ರಿಯಿಸಿದ ಪರಮೇಶ್ವರ ಅವರು, ತೀವ್ರ ಬರ ಇದ್ದರೂ ತಮ್ಮ ತಾಲ್ಲೂಕು ಗಳನ್ನು ಬರಪೀಡಿತ ಪ್ರದೇಶ ಎಂದು ಘೋಷಣೆ ಮಾಡಿಲ್ಲ ಎಂದು ಯಾರೂ ಆತಂಕಪಡುವ ಅಗತ್ಯವಿಲ್ಲ.

## ವೃತ್ತಿಪರ ಕೋರ್ಸ್‌ಗಳಲ್ಲಿ ಗ್ರಾಮೀಣ ಶಾಲಾ ವಿದ್ಯಾರ್ಥಿಗಳಿಗೆ ಶೇ.7.5 ಒಳಮೀಸಲಾತಿ: ಕರಡು ನಿಯಮ ಪ್ರಕಟ

• **ಉದಯವಾಹಿನಿ, ಬೆಂಗಳೂರು**

ವೃತ್ತಿಪರ ಕೋರ್ಸ್‌ಗಳ ಪ್ರವೇಶಾತಿಯಲ್ಲಿ ಗ್ರಾಮೀಣ ಶಾಲಾ ವಿದ್ಯಾರ್ಥಿಗಳಿಗೆ ಶೇಕಡಾ 7.5ರಷ್ಟು ಒಳಮೀಸಲಾತಿ ಕಲ್ಪಿಸುವ ಕರಡು ತಿದ್ದುಪಡಿ ನಿಯಮವನ್ನು ರಾಜ್ಯ ಸರ್ಕಾರ ಪ್ರಕಟಿಸಿದೆ. ಉನ್ನತ ಶಿಕ್ಷಣ ಇಲಾಖೆ ಈ ಕರಡು ನಿಯಮ ಅಧಿಸೂಚನೆಯನ್ನು ಹೊರಡಿಸಿದ್ದು, ಸಾರ್ವಜನಿಕರಿಂದ ಆಕ್ಷೇಪಣೆ, ಅಭಿಪ್ರಾಯ ಸಂಗ್ರಹಕ್ಕೆ 15 ದಿನಗಳ ಸಮಯಾವಕಾಶ ನೀಡಿದೆ. 2006ರ ಕರ್ನಾಟಕ ವೃತ್ತಿಪರ ಶಿಕ್ಷಣ ಸಂಸ್ಥೆಗಳ ಸರಕಾರಿ ಸೀಟುಗಳ ಪ್ರವೇಶ ನಿಯಮಾವಳಿಗೆ ತಿದ್ದುಪಡಿ ತರಲು ಚಾಲ್ತಿಯಲ್ಲಿರುವ ಶೇಕಡಾ 15ರಷ್ಟು ಸರ್ಕಾರಿ ಸೀಟುಗಳಲ್ಲಿ ಶೇಕಡಾ 7.5ರಷ್ಟು ಗ್ರಾಮೀಣ ಶಾಲೆಗಳಲ್ಲಿ ವ್ಯಾಸಂಗ ಮಾಡಿದ ವಿದ್ಯಾರ್ಥಿಗಳಿಗೆ ಒಳ ಮೀಸಲಾತಿ ನೀಡಲು ನಿಯಮಕ್ಕೆ ತಿದ್ದುಪಡಿ ತರಲು ಮುಂದಾಗಿದೆ. ಕರ್ನಾಟಕ ವೃತ್ತಿಪರ ಶಿಕ್ಷಣ ಸಂಸ್ಥೆಗಳ ಸರಕಾರಿ ಸೀಟುಗಳ ಪ್ರವೇಶ ನಿಯಮ 2026 ಕರಡನ್ನು ಪ್ರಕಟಿಸಿದೆ. ತಿದ್ದುಪಡಿ ನಿಯಮದಂತೆ ಕರ್ನಾಟಕದ ಗ್ರಾಮೀಣ ಪ್ರದೇಶಗಳಲ್ಲಿರುವ, ಶಾಲಾ ಶಿಕ್ಷಣ ಮತ್ತು ಪದವಿಪೂರ್ವ ಶಿಕ್ಷಣ ಇಲಾಖೆ ನಿರ್ವಹಿಸುತ್ತಿರುವ ಸರ್ಕಾರಿ ಶಾಲೆಗಳಲ್ಲಿ ಶಾಲಾ ಶಿಕ್ಷಣ ಇಲಾಖೆಯು ನಿರ್ವಹಿಸುವ ಸರ್ಕಾರಿ ಪದವಿ ಪೂರ್ವ ಕಾಲೇಜುಗಳಲ್ಲಿ 1ನೇ ತರಗತಿಯಿಂದ 10ನೇ ತರಗತಿಯವರೆಗೆ ವ್ಯಾಸಂಗ ಮಾಡಿರುವ ಅರ್ಹ ಗ್ರಾಮೀಣ ಅಭ್ಯರ್ಥಿಗಳಿಗೆ ಶೇ.7.5% ಸ್ಥಾನಗಳನ್ನು ಅಡ್ಡಲಾಗಿ ಮೀಸಲಿಡಲಾಗುವುದು. ಕ. ಗ್ರಾ.ಪ್ರದೇಶಗಳಲ್ಲಿರುವ ಶಿಕ್ಷಣ ಸಂಸ್ಥೆಗಳು ಶಾಲೆಗಳಲ್ಲಿ 1ನೇ ತರಗತಿಯಿಂದ 10ನೇ ತರಗತಿಯವರೆಗೆ ವ್ಯಾಸಂಗ ಮಾಡಿರುವ ಅರ್ಹ ಗ್ರಾ. ವಿದ್ಯಾರ್ಥಿಗಳಿಗೆ ಶೇ.ಏಳೂವರೆ (7.5%) ಸ್ಥಾನಗಳು ಅಡ್ಡಲಾಗಿ ಮೀಸಲಿರಲಿವೆ.

## ದರ್ಶನ್ ಸಲ್ಲಿಸಿದ್ದ ಅರ್ಜಿ ಭಾಗಶಃ ಅಂಗೀಕಾರ

• **ಉದಯವಾಹಿನಿ, ಬೆಂಗಳೂರು**

ಪ್ರದೋಷ್ ಮಾಫಿ ಸಾಕ್ಷಿ ಪ್ರಕ್ರಿಯೆ ಪ್ರಶ್ನಿಸಿ ಕೊಲೆ ಆರೋಪಿ ದರ್ಶನ್ ಸಲ್ಲಿಸಿದ್ದ ಅರ್ಜಿ ಹೈಕೋರ್ಟ್ ಭಾಗಶಃ ಅಂಗೀಕಾರ ಮಾಡಿದೆ. ಹೈಕೋರ್ಟ್ ನ್ಯಾ.ನಾಗಪ್ರಸನ್ನ ಅವರಿದ್ದ ಪೀಠ ಈ ಆದೇಶ ಹೊರಡಿಸಿದೆ. ಪ್ರದೋಷ್ ಮಾಫಿ ಸಾಕ್ಷಿ ಪ್ರಕ್ರಿಯೆಯನ್ನು ಪ್ರಶ್ನಿಸಿ ಸಲ್ಲಿಸಿದ್ದ ದರ್ಶನ್ ಅರ್ಜಿಯನ್ನು ಭಾಗಶ: ಅಂಗೀಕಾರ ಮಾಡಿದೆ. ಜೊತೆಗೆ ಯಾವುದೇ ವಾದ-ಪ್ರತಿವಾದಕ್ಕೆ ಅವಕಾಶ ನೀಡದೇ ಒಂದು ವಾರದಲ್ಲಿ ಹೊಸ ಆದೇಶ ನೀಡಲು ಸೆಷನ್ಸ್ ಕೋರ್ಟ್‌ಗೆ ಸೂಚನೆ ನೀಡಿದೆ. ಪ್ರದೋಷ್ ಮಾಫಿ ಸಾಕ್ಷಿ ಪ್ರಕ್ರಿಯೆ ಸಂಬಂಧ ಸೆಷನ್ ಕೋರ್ಟ್ ಈ ಹಿಂದೆ ನೀಡಿದ್ದ ಆದೇಶವನ್ನು ಮಾರ್ಪಡಿಸಿ, ಮುಂದಿನ ಒಂದು ವಾರದಲ್ಲಿ ಹೊಸ ಆದೇಶ ನೀಡಬೇಕಿದೆ. ಈ ಹಿಂದೆ ಸೆಷನ್ಸ್ ಕೋರ್ಟ್‌ನಲ್ಲಿ ಪ್ರದೋಷ್ ಸನ್ನಡತೆಯ ಬಗ್ಗೆ ಪ್ರೊಬೇಷನರಿ ಅಧಿಕಾರಿ ವರದಿ ಸಲ್ಲಿಸಿದ್ದರು. ಇದನ್ನ ಪ್ರಶ್ನಿಸಿ ದರ್ಶನ್ ಕೋರ್ಟ್ ಮೊರೆ ಹೋಗಿದ್ದರು. ಅರ್ಜಿಯಲ್ಲಿ ಪ್ರೊಬೆಷನರಿ ಅಧಿಕಾರಿ ಸಜಾಬಂಧಿ ಬಗ್ಗೆ ವರದಿ ಕೊಡಬೇಕಿತ್ತು. ಆದರೆ ಪ್ರದೋಷ್ ವಿಚಾರಣಾಧೀನ ಆರೋಪಿ. ಹೀಗಾಗಿ ಆತನ ನಡವಳಿಗೆ ಬಗ್ಗೆ ವರದಿ ನೀಡುವ ಅವಕಾಶ ಇಲ್ಲ. ಹೀಗಾಗಿ ಪ್ರೊಬೆಷನರಿ ಅಧಿಕಾರಿ ಸಲ್ಲಿಸಿದ ವರದಿಯನ್ನು ರದ್ದು ಮಾಡಲು ದರ್ಶನ್ ಮನವಿ ಮಾಡಿದ್ದರು.

## 2 ದಿನ ಪೊಲೀಸ್ ಕಸ್ಟಡಿಗೆ ಪ್ರಜ್ವಲ್ ರೇವಣ್ಣ

• **ಉದಯವಾಹಿನಿ, ಬೆಂಗಳೂರು**

ಪರಪ್ಪನ ಅಗ್ರಹಾರ ಜೈಲಿನಲ್ಲಿ ಮೊಬೈಲ್ ಬಳಕೆ ಮಾಡಿದ ಆರೋಪಕ್ಕೆ ಸಂಬಂಧಿಸಿದಂತೆ ಮಾಜಿ ಸಂಸದ ಪ್ರಜ್ವಲ್ ರೇವಣ್ಣನನ್ನು ಎರಡು ದಿನಗಳ ಕಾಲ ಪೊಲೀಸ್ ಕಸ್ಟಡಿಗೆ ನೀಡಲಾಗಿದೆ. ಪ್ರಜ್ವಲ್‌ನನ್ನು 42ನೇ ಎಸಿಎಂಎಂ ನ್ಯಾಯಾಲಯದ ಮುಂದೆ ಹಾಜರುಪಡಿಸಲಾಗಿತ್ತು. ಪ್ರತಾಪ್ ಎ1 ಆರೋಪಿ ಪ್ರಜ್ವಲ್ ರೇವಣ್ಣ ಎ2 ಆರೋಪಿಯಾಗಿದ್ದು, ತನಿಖೆಗೆ ಅಗತ್ಯವಿರುವ ಹಿನ್ನೆಲೆಯಲ್ಲಿ ಜೈಲಿನಲ್ಲಿರುವ ಪ್ರಜ್ವಲ್ ರೇವಣ್ಣ ಹಾಗೂ ಪ್ರತಾಪ್ ಅವರನ್ನು ಕಸ್ಟಡಿಗೆ ಪಡೆದು ವಿಚಾರಣೆ ನಡೆಸಲು ಅನುಮತಿ ನೀಡಬೇಕೆಂದು ಕೋರಿದ್ದರು. ಇದೀಗ ಕೋರ್ಟ್ ಪೊಲೀಸ್ ಅರ್ಜಿಯನ್ನು ಪರಿಗಣಿಸಿ 2 ದಿನ ಪೊಲೀಸ್ ಕಸ್ಟಡಿಗೆ ಆದೇಶ ನೀಡಿದೆ. ಜೈಲಿನಲ್ಲಿ ಪ್ರಜ್ವಲ್ ಬಳಿ ಮೊಬೈಲ್, ಪೆನ್ ಡ್ರೈವ್, ನೋಟ್ ಬುಕ್ ಪತ್ತೆ ಯಾಗಿತ್ತು. ಪರಪ್ಪನ ಅಗ್ರಹಾರ ಪೊಲೀಸ್ ಠಾಣೆಯಲ್ಲಿ ಪ್ರಕರಣ ದಾಖಲಾಗಿತ್ತು. ವಶಪಡಿಸಿಕೊಂಡ ಮೊಬೈಲ್, ಪೆನ್ ಡ್ರೈವ್‌ಗಳನ್ನು ಪೊಲೀಸರು ರಿಟ್ರೀವ್ ಗೆ ಕಳುಹಿಸಿದ್ದರು.

## ಮಹದೇವಪ್ಪಣ್ಣ ನನಗೆ ತಂದೆ ಸಮಾನ, ಅವರೇ ಆ ಮನೆಯಲ್ಲಿರಲಿ

• **ಉದಯವಾಹಿನಿ, ಬೆಂಗಳೂರು**

ನಮ್ಮ ನಡುವೆ ಯಾವುದೇ ಮನೆ ಗಲಾಟೆ ಇಲ್ಲ. ತಪ್ಪು ಮಾಹಿತಿ ಹೇಗೆ ಹರಡಿತೋ ಗೊತ್ತಿಲ್ಲ ಎಂದು ಸಾರಿಗೆ ಸಚಿವ ಬೈರತಿ ಸುರೇಶ್ ಹೇಳಿದ್ದಾರೆ. ಸರ್ಕಾರಿ ನಿವಾಸ ಹಂಚಿಕೆ ವಿಚಾರವಾಗಿ ಮಾಜಿ ಸಚಿವ ಡಾ. ಎಚ್.ಸಿ. ಮಹದೇವಪ್ಪ ಮತ್ತು ತನ್ನ ಮಧ್ಯೆ ಕಿತ್ತಾಟ ನಡೆಯುತ್ತಿದೆ ಎಂಬ ವಿಚಾರಕ್ಕೆ ಸಂಬಂಧಿಸಿದಂತೆ ಬೈರತಿ ಸುರೇಶ್ ವಿಧಾನಸೌಧದಲ್ಲಿ ಸ್ಪಷ್ಟನೆ ನೀಡಿದ್ದಾರೆ.

ನಮ್ಮ ನಡುವೆ ಯಾವುದೇ ಮನೆ ಗಲಾಟೆ ಇಲ್ಲ. ತಪ್ಪು ಮಾಹಿತಿ ಹೇಗೆ ಹರಡಿತೋ ಗೊತ್ತಿಲ್ಲ. ಮನೆ ಹಂಚಿಕೆ ಮಾಡುವುದು ಮುಖ್ಯಮಂತ್ರಿಗಳ ವಿವೇಚನೆಗೆ ಬಿಟ್ಟ ವಿಚಾರ. ಖಾಲಿ ಇದ್ದ ಕಾರಣ ಆ ಮನೆಯನ್ನು ನನಗೆ ಹಂಚಿಕೆ ಮಾಡಲಾಗಿತ್ತು. ಇದರಲ್ಲಿ ವಿವಾದವೇನಿದೆ ಎಂಬುದು ನನಗೆ ಗೊತ್ತಿಲ್ಲ ಎಂದು ಅವರು ಹೇಳಿದರು. ಮಹದೇವಪ್ಪ ಅವರೊಂದಿಗೆ ಉತ್ತಮ ಬಾಂಧವ್ಯ ಹೊಂದಿರುವುದಾಗಿ ಹೇಳಿದ ಸುರೇಶ್, ನಾನು ಮಹದೇವಪ್ಪಣ್ಣ ಅವರ ಮನೆಗೆ ನೂರು ಸಲ ಹೋಗಿ ಊಟ ಮಾಡಿದ್ದೇನೆ. ಅವರು ನನ್ನ ಸ್ನೇಹಿತರಲ್ಲ, ನನಗಿಂತ ದೊಡ್ಡವರು, ಅವರ ಮುಂದೆ ನಾನು ಮಗನ ಸಮಾನ ಎಂದರು. ಮನೆಯ



ಗೋಡೆ ಒಡೆಸಿದ್ದು ನಾನಲ್ಲ, ಅದು ನನ್ನ ಮನೆಯೂ ಅಲ್ಲ, ಸಂಬಂಧಪಟ್ಟ ಇಲಾಖೆಯವರು ಮಾಡಿರುವ ಕೆಲಸ. ಕಳೆದ ತಿಂಗಳು 15ನೇ ತಾರೀಖಿಗೆ ಮನೆ ಖಾಲಿ ಮಾಡಲಾಗಿದೆ ಎಂದು ಪತ್ರ ಬಂದಿತ್ತು.

ಸಿಎಂ ಅವರು ಅವರನ್ನೇ ಮುಂದುವರಿಯಲು ಸೂಚಿಸಿದರೆ, ಉಳಿದ ಒಂದೂಮುಕ್ಕಾಲು ವರ್ಷ ಅವರೇ ಇರಲಿ, ನನ್ನ ತಕರಾರಿಲ್ಲ. ಅವರು ಅಂಬೇಡ್ಕರ್ ಅನುಯಾಯಿ, ನಾನೂ ಅಂಬೇಡ್ಕರ್ ಅನುಯಾಯಿ ಎಂದರು. ಅದು ಹಿಂದುಳಿದ ವರ್ಗಗಳ ಒಕ್ಕೂಟದ ಕಾರ್ಯಕ್ರಮ.

ಯಾರನ್ನು ಕರೆಯಬೇಕು ಎಂಬುದನ್ನು ಸಂಘಟಕರೇ ನಿರ್ಧರಿಸುತ್ತಾರೆ. ಜಿ. ಪರಮೇಶ್ವರ್ ಅವರು ಉಪಮುಖ್ಯಮಂತ್ರಿಯಾಗಿದ್ದ ಕಾರಣ ಅವರನ್ನು ಉದ್ಘಾಟನೆಗೆ ಕರೆದಿರಬಹುದು. ಸತೀಶ್ ಜಾರಕಿಹೊಳಿ ಹಾಗೂ ಮಹದೇವಪ್ಪ ಅವರನ್ನೂ ಕರೆಯಬೇಕಿತ್ತು, ಯಾಕೆ ಕರೆದಿಲ್ಲವೋ ಗೊತ್ತಿಲ್ಲ ಎಂದು ತಿಳಿಸಿದರು.

## ಗೊಂದಲದ ಗೂಡಾದ ಎಸ್‌ಐಆರ್ ಪ್ರಕ್ರಿಯೆ ಅಧಿಕಾರಿಗಳಿಗೆ ಸಾರ್ವಜನಿಕರಿಂದ ಕ್ಲಾಸ್

• **ಉದಯವಾಹಿನಿ, ಬೆಂಗಳೂರು**

ಹೊರವಲಯದ ಜಿಗಣಿ ಸಮೀಪದ ಕಲ್ಲುಬಾಳು ಗ್ರಾಮ ಪಂಚಾಯಿತಿ ವ್ಯಾಪ್ತಿಯಲ್ಲಿ ಎಸ್‌ಐಆರ್ ಪ್ರಕ್ರಿಯೆಯು ತೀವ್ರ ಗೊಂದಲಕ್ಕೆ ಕಾರಣವಾಗಿದ್ದು, ಕಚೇರಿಗಳಿಗೆ ಅಲೆದಾಡಿ ಬೇಸತ್ತ ಸಾರ್ವಜನಿಕರು ಅಧಿಕಾರಿಗಳನ್ನು ತರಾಟೆಗೆ ತೆಗೆದುಕೊಂಡ ಘಟನೆ ನಡೆದಿದೆ. ಹೌದು, ಈಗಾಗಲೇ ಎಸ್‌ಐಆರ್ ಪ್ರಕ್ರಿಯೆ ಪೂರ್ಣಗೊಳಿಸಿ, ಅಗತ್ಯ ದಾಖಲೆಗಳನ್ನು ಸಲ್ಲಿಸಿದ್ದರೂ ಸಹ 'ನಿಮ್ಮ ವೋಟರ್ ಐಡಿ ಕ್ಯಾನ್ಸಲ್ ಆಗಿದೆ' ಎಂದು ಸಾರ್ವಜನಿಕರಿಗೆ ನೋಟಿಸ್ ಕಳುಹಿಸಲಾಗಿದೆ. ಸರ್ಕಾರ ನೀಡಿದ ಆಧಾರ್ ಕಾರ್ಡ್, ವೋಟರ್ ಐಡಿ ಸೇರಿದಂತೆ ಹತ್ತಾರು ಅಧಿಕೃತ ದಾಖಲೆಗಳನ್ನು ತೋರಿಸಿದರೂ ಅಧಿಕಾರಿಗಳು ಅವುಗಳನ್ನು ಪರಿಗಣಿಸಲು ನಿರಾಕರಿಸುತ್ತಿದ್ದಾರೆ ಎಂದು ಆರೋಪ ಕೇಳಿ ಬಂದಿದೆ. ಜೊತೆಗೆ 71 ವರ್ಷದ ಹಿರಿಯ ನಾಗರಿಕರಿಗೂ ಮಾರ್ಕ್ಸ್ ಕಾರ್ಡ್ ಹಾಗೂ ಜನ್ಮ ಪ್ರಮಾಣ ಪತ್ರ ತರಲು ಅಧಿಕಾರಿಗಳು ಪಟ್ಟು ಹಿಡಿದಿದ್ದು, ಈ ಇಳಿ ವಯಸ್ಸಿನಲ್ಲಿ



ಎಲ್ಲಿಂದ ತರುವುದು ಎಂದು ಹಿರಿಯ ನಾಗರಿಕರು ಆಕ್ರೋಶ ಹೊರಹಾಕಿದ್ದಾರೆ. ಇನ್ನು ಮತ್ತೊಬ್ಬ ನಿವಾಸಿ ಮಾತನಾಡಿ ನಾನು ಕರ್ನಾಟಕದಲ್ಲೇ ಹುಟ್ಟಿ ಬೆಳೆದ ನಿವಾಸಿಯಾಗಿದ್ದೇನೆ. ಆದರೆ ಈಗ ನನ್ನ ವಿಳಾಸ ತಮಿಳುನಾಡಿಗೆ ಬದಲಾಗಿದೆ ಎಂದು ಬಿಎಲ್‌ಒ ಹಾಗೂ ಅಧಿಕಾರಿಗಳು ಹೇಳುತ್ತಿದ್ದಾರೆ.

ಅಧಿಕಾರಿಗಳೇ ಎಡವಟ್ಟು ಮಾಡಿದ್ದಾರೆ. ಅಷ್ಟೇ ಅಲ್ಲದೆ, ತಮಿಳುನಾಡಿನಲ್ಲಿ ವಿಳಾಸ ರದ್ದು ಮಾಡಿಕೊಂಡು ಬನ್ನಿ ಎಂದು ನಿವಾಸಿಗಳಿಗೆ ಹೇಳುತ್ತಿದ್ದಾರೆ. ನಾವು ಎಲ್ಲಿ ಅಂತ ಹೋಗುವುದು, ದಯಮಾಡಿ ಚುನಾವಣಾ ಆಯೋಗ ಇದರ ಬಗ್ಗೆ ಪರಿಶೀಲನೆ ಮಾಡಬೇಕು ಎಂದು ಮನವಿ ಮಾಡಿಕೊಂಡಿದ್ದಾರೆ.

# ಮುಖ್ಯ ಫ್ಲೈಓವರ್‌ಗಳಲ್ಲಿ ಸಂಚಾರ ನಿರ್ಬಂಧ ಹಂತ ಹಂತವಾಗಿ ಜಾರಿ: ಪ್ರಿಯಾಂಕ್ ಖರ್ಗೆ

## ಸಂಚಾರ ದಟ್ಟಣೆ ಮತ್ತು ರಸ್ತೆ ಸುರಕ್ಷತೆ ಆಧರಿಸಿ ನಿರ್ಬಂಧಗಳ ಅನುಷ್ಠಾನ; ದ್ವಿಚಕ್ರ ವಾಹನ, ಆಟೋರಿಕ್ಷಾಗಳಿಗೆ ಸಂಚಾರಕ್ಕೆ ತಾತ್ಕಾಲಿಕ ಅವಕಾಶ

• **ಉದಯವಾಹಿನಿ, ಬೆಂಗಳೂರು**

ನಗರದಲ್ಲಿ ರಸ್ತೆ ಸುರಕ್ಷತೆಯನ್ನು ಹೆಚ್ಚಿಸುವುದು ಹಾಗೂ ವಾಹನ ಸಂಚಾರ ಸುಗಮಗೊಳಿಸುವ ಉದ್ದೇಶದಿಂದ ಐದು ಪ್ರಮುಖ ಫ್ಲೈಓವರ್‌ಗಳು/ಎಲಿವೇಟೆಡ್ ಕಾರಿಡಾರ್‌ಗಳಲ್ಲಿ ವಿವಿಧ ವರ್ಗದ ವಾಹನಗಳ ಸಂಚಾರಕ್ಕೆ ವಿಧಿಸಲಾಗಿರುವ ನಿರ್ಬಂಧಗಳನ್ನು ಹಂತ ಹಂತವಾಗಿ ಜಾರಿಗೊಳಿಸಲು ಬೆಂಗಳೂರು ಸಂಚಾರ ಪೊಲೀಸರು ನಿರ್ಧರಿಸಿದ್ದಾರೆ ಎಂದು ಗೃಹ, ಮಾಹಿತಿ ಹಾಗೂ ಜೈವಿಕ ತಂತ್ರಜ್ಞಾನ ಮತ್ತು ಇ-ಆಡಳಿತ ಸಚಿವ ಪ್ರಿಯಾಂಕ್ ಖರ್ಗೆ ತಿಳಿಸಿದ್ದಾರೆ. ಐದು ಪ್ರಮುಖ ಎಲಿವೇಟೆಡ್ ಕಾರಿಡಾರ್‌ಗಳಲ್ಲಿ ನಾಲ್ಕರಲ್ಲಿ ಈಗಾಗಲೇ ಸಂಚಾರ ನಿರ್ಬಂಧಗಳನ್ನು ಜಾರಿಗೊಳಿಸಿದ ಬಳಿಕ ಬೆಂಗಳೂರು ಸಂಚಾರ ಪೊಲೀಸರು ಪ್ರಾಥಮಿಕವಾಗಿ ಸ್ಥಳ ಪರಿಶೀಲನೆ ನಡೆಸಿದ್ದಾರೆ. ಪರಿಶೀಲನೆಯ ವೇಳೆ ಬಿಜಿಎಸ್ ಫ್ಲೈಓವರ್, ಪೀಣ್ಯ ಫ್ಲೈಓವರ್ ಮತ್ತು ಡಬಲ್ ಡೆಕ್ಕರ್ ಫ್ಲೈಓವರ್‌ಗಳಲ್ಲಿ ಸಂಚಾರವು ಸುಗಮವಾಗಿ ಮತ್ತು ಪರಿಣಾಮಕಾರಿಯಾಗಿ ನಡೆಯುತ್ತಿರುವುದು ಕಂಡುಬಂದಿದೆ ಎಂದು ಸಚಿವರು ಹೇಳಿದ್ದಾರೆ.

ಅಂತರರಾಷ್ಟ್ರೀಯ ವಿಮಾನ ನಿಲ್ದಾಣ ರಸ್ತೆಯ ಎಲಿವೇಟೆಡ್ ಕಾರಿಡಾರ್‌ನಲ್ಲಿ (ಸಂಜೀವನಗರ ಕ್ರಾಸ್‌ನಿಂದ ವಿದ್ಯಾಶಿಲ್ಪ ಜಂಕ್ಷನ್‌ವರೆಗೆ) ಏಕಕಾಲದಲ್ಲಿ ಸರಕು ವಾಹನಗಳು, ದ್ವಿಚಕ್ರ ವಾಹನಗಳು ಹಾಗೂ ಆಟೋರಿಕ್ಷಾಗಳಂತಹ ಹಲವು ವರ್ಗದ ವಾಹನಗಳನ್ನು ಪ್ರವೇಶ ಮಾರ್ಗಗಳಲ್ಲೇ ಕೆಳಗಿನ ರಸ್ತೆಗೆ ತಿರುಗಿಸುವುದರಿಂದ ಸಂಚಾರ ಸಂಘರ್ಷ, ಸರತಿ ಸಾಲು ಹಾಗೂ ದಟ್ಟಣೆ ಉಂಟಾಗುತ್ತಿರುವುದು



ಗಮನಕ್ಕೆ ಬಂದಿದೆ. ಇದರಿಂದ ಎಲಿವೇಟೆಡ್ ಕಾರಿಡಾರ್‌ಗೆ ಹೊಂದಿಕೊಂಡಿರುವ ಕೆಳಮಟ್ಟದ ರಸ್ತೆಯ ಸಂಚಾರದ ಮೇಲೂ ಹೆಚ್ಚುವರಿ ಪರಿಣಾಮ ಉಂಟಾಗುತ್ತಿದೆ ಎಂಬ ಮಾಹಿತಿಯನ್ನು ಪ್ರಿಯಾಂಕ್ ಖರ್ಗೆ ನೀಡಿದ್ದು, ಈ ಹಿನ್ನೆಲೆಯಲ್ಲಿ ವಿಮಾನ ನಿಲ್ದಾಣ ರಸ್ತೆಯ ಎಲಿವೇಟೆಡ್ ಕಾರಿಡಾರ್‌ನಲ್ಲಿ ಸಂಚಾರ ನಿರ್ಬಂಧಗಳನ್ನು ಹಂತ ಹಂತವಾಗಿ ಜಾರಿಗೊಳಿಸಲು ನಿರ್ಧರಿಸಲಾಗಿದೆ ಎಂದಿದ್ದಾರೆ. **ಸರಕು ವಾಹನಗಳಿಗೆ ನಿರ್ಬಂಧ ಮುಂದುವರಿಕೆ:** ಮೊದಲ ಹಂತದಲ್ಲಿ ಈಗಾಗಲೇ ಅಧಿಸೂಚನೆ ಮೂಲಕ ನಿಗದಿಪಡಿಸಿರುವ ಸಮಯದಲ್ಲಿ ಸರಕು ಸಾಗಣೆ ವಾಹನಗಳ ಮೇಲಿನ ನಿರ್ಬಂಧ ಮುಂದುವರಿಯಲಿದೆ. ಆದರೆ, ಪ್ರಸ್ತುತ ಹಂತದಲ್ಲಿ ದ್ವಿಚಕ್ರ ವಾಹನಗಳು ಹಾಗೂ ಆಟೋರಿಕ್ಷಾಗಳಿಗೆ ಎಲಿವೇಟೆಡ್ ಕಾರಿಡಾರ್ ಬಳಸಲು ಅವಕಾಶ ನೀಡಲಾಗುತ್ತದೆ. ದ್ವಿಚಕ್ರ ವಾಹನ ಸವಾರರು ಮುಖ್ಯವಾಗಿ ಎಡಭಾಗದ ಲೇನ್ ಬಳಸಬೇಕು, ಲೇನ್ ಶಿಸ್ತನ್ನು ಪಾಲಿಸಬೇಕು, ಅಪಾಯಕಾರಿ ಓವರ್‌ಟೇಕಿಂಗ್ ತಪ್ಪಿಸಬೇಕು ಹಾಗೂ ಗಂಟೆಗೆ 60 ಕಿ.ಮೀ. ಮೀರದ ಸುರಕ್ಷಿತ ವೇಗದಲ್ಲಿ ಸಂಚರಿಸಬೇಕು ಎಂದು ಸಂಚಾರ ಪೊಲೀಸರು ಸಲಹೆ ನೀಡಿದ್ದಾರೆ ಎಂಬ ಸಂಗತಿಯನ್ನು ಸಚಿವ ಪ್ರಿಯಾಂಕ್ ಖರ್ಗೆ ಸಾರ್ವಜನಿಕರ ಗಮನಕ್ಕೆ ತಂದಿದ್ದಾರೆ.

### ಸೆ.11ರಿಂದ ಎಲೆಕ್ಟ್ರಾನಿಕ್ ಸಿಟಿ ಎಲಿವೇಟೆಡ್ ಕಾರಿಡಾರ್‌ನಲ್ಲಿ ಜಾರಿ

ಇದೇ ರೀತಿಯ ಹಂತ ಹಂತದ ಕ್ರಮವನ್ನು ಸೆ. 11ರಿಂದ ಎಲೆಕ್ಟ್ರಾನಿಕ್ ಸಿಟಿ ಎಲಿವೇಟೆಡ್ ಕಾರಿಡಾರ್‌ನಲ್ಲೂ ಅನುಸರಿಸಲಾಗುವುದು. ಮೊದಲ ಹಂತದಲ್ಲಿ ಸರಕು ವಾಹನಗಳ ಮೇಲಿನ ನಿರ್ಬಂಧಗಳನ್ನು ಜಾರಿಗೊಳಿಸಲಾಗುತ್ತದೆ. ಪ್ರಸ್ತುತ ದ್ವಿಚಕ್ರ ವಾಹನಗಳಿಗೆ ಎಲಿವೇಟೆಡ್ ಕಾರಿಡಾರ್‌ನಲ್ಲಿ ಸಂಚರಿಸಲು ಅವಕಾಶ ಮುಂದುವರಿಯಲಿದೆ ಎಂದು ಗೃಹ ಸಚಿವರು ಹೇಳಿದ್ದಾರೆ. ಸಂಚಾರ ನಿರ್ಬಂಧಗಳ ಪರಿಣಾಮವನ್ನು ನಿರಂತರವಾಗಿ ಪರಿಶೀಲಿಸಿ, ಅದರ ಆಧಾರದ ಮೇಲೆ ಉಳಿದಿರುವ ಅಧಿಸೂಚಿತ ನಿರ್ಬಂಧಗಳನ್ನೂ ಹಂತ ಹಂತವಾಗಿ ಮತ್ತು ಸಮತೋಲಿತ ರೀತಿಯಲ್ಲಿ ಜಾರಿಗೊಳಿಸಲಾಗುವುದು ಎಂದಿರುವ ಸಚಿವರು, ಈ ಸಂದರ್ಭದಲ್ಲಿ ವಾಹನಗಳ ಸಂಚಾರದ ಹರಿವು, ರಸ್ತೆ ಸುರಕ್ಷತಾ ಪರಿಸ್ಥಿತಿ, ಪ್ರವೇಶ ಮಾರ್ಗಗಳಲ್ಲಿ ನಿರ್ಬಂಧಗಳನ್ನು ಕಾರ್ಯಗತಗೊಳಿಸುವ ಸಾಧ್ಯತೆ ಹಾಗೂ ಎಲಿವೇಟೆಡ್ ಕಾರಿಡಾರ್‌ಗೆ ಹೊಂದಿಕೊಂಡಿರುವ ಕೆಳಮಟ್ಟದ ರಸ್ತೆಗಳ ಮೇಲೆ ಉಂಟಾಗುವ ಪರಿಣಾಮಗಳನ್ನು ಪರಿಗಣಿಸಲಾಗುವುದು ಎಂದು ತಿಳಿಸಿದ್ದಾರೆ.

ಬೆಂಗಳೂರು ನಗರದ ಸಂಚಾರ ವ್ಯವಸ್ಥೆಯಲ್ಲಿ ಯಾವುದೇ ಬದಲಾವಣೆಯನ್ನು ಕೇವಲ ಆದೇಶದ ಆಧಾರದ ಮೇಲೆ ಜಾರಿಗೊಳಿಸುವ ಬದಲು, ಸ್ಥಳೀಯ ಸಂಚಾರ ಪರಿಸ್ಥಿತಿಯ ನೈಜ ಪರಿಣಾಮವನ್ನು ಪರಿಶೀಲಿಸಿ, ಸಾರ್ವಜನಿಕರಿಗೆ ಕನಿಷ್ಠ ಅನಾನುಕೂಲವಾಗುವ ರೀತಿಯಲ್ಲಿ ಹಂತ ಹಂತವಾಗಿ ಅನುಷ್ಠಾನಗೊಳಿಸುವುದು ನಮ್ಮ ಉದ್ದೇಶ. ರಸ್ತೆ ಸುರಕ್ಷತೆ ಮತ್ತು ಸುಗಮ ಸಂಚಾರ ಎರಡಕ್ಕೂ ಸಮಾನ ಆದ್ಯತೆ ನೀಡಲಾಗುವುದು ಎಂದು ಪ್ರಿಯಾಂಕ್ ಖರ್ಗೆ ಹೇಳಿದ್ದಾರೆ.

**ಈ ದಿನದ ದರ** ಪೆಟ್ರೋಲ್: 110.93₹/L ಡೀಸೆಲ್ : 98.80₹/L ಬಂಗಾರ: ₹ 15,535/Gram 24ct ₹ 14,240 /Gram 22ct ಬೆಳ್ಳಿ: ₹235.00/

# ಸರ್ಕಾರಕ್ಕೆ ಸಿಬ್ಬಂದಿ ಡೆಡ್‌ಲೈನ್; 3,500 ನೌಕರರಿಂದ ಸಾಮೂಹಿಕ ರಾಜೀನಾಮೆ ಎಚ್ಚರಿಕೆ!

• ಉದಯವಾಹಿನಿ, ಬೆಂಗಳೂರು

ವೇತನ ಪರಿಷ್ಕರಣೆ ಸೇರಿದಂತೆ ವಿವಿಧ ಬೇಡಿಕೆಗಳನ್ನು ಈಡೇರಿಸುವಂತೆ ಆಗ್ರಹಿಸಿ ರಾಜ್ಯ ಸರ್ಕಾರದ ಆರೋಗ್ಯ ಕವಚ ಯೋಜನೆಯಡಿ ಕಾರ್ಯನಿರ್ವಹಿಸುತ್ತಿರುವ 108 ಅಂಬುಲೆನ್ಸ್ ನೌಕರರು ಮುಷ್ಕರದ ಎಚ್ಚರಿಕೆ ನೀಡಿದ್ದಾರೆ. ಬೇಡಿಕೆಗಳ ಈಡೇರಿಕೆಗೆ ಸರ್ಕಾರಕ್ಕೆ 15 ದಿನಗಳ ಗಡುವು ನೀಡಲಾಗಿದ್ದು, ಸೆಪ್ಟೆಂಬರ್ 20 ರಿಂದ ಸಾಮೂಹಿಕ ರಾಜೀನಾಮೆ ನೀಡಿ ಹೋರಾಟಕ್ಕಿಳಿಯುವುದಾಗಿ ಸಂಘಟನೆಗಳು ತಿಳಿಸಿವೆ.

ಈ ಸಂಬಂಧ ಸುವರ್ಣ ಕರ್ನಾಟಕ ಆರೋಗ್ಯ ಕವಚ-108 ನೌಕರರ ಸಂಘ' ಹಾಗೂ ಕರ್ನಾಟಕ ರಾಜ್ಯ ಆರೋಗ್ಯ ಕವಚ ಅಂಬುಲೆನ್ಸ್ ನೌಕರರ ಸಂಘದ ಪದಾಧಿಕಾರಿಗಳು ಆರೋಗ್ಯ ಸಚಿವರು ಮತ್ತು




ಇಲಾಖೆಯ ಪ್ರಧಾನ ಕಾರ್ಯದರ್ಶಿಗೆ ಪತ್ರ ಬರೆದು ತಮ್ಮ ಅಳಲು ತೋಡಿಕೊಂಡಿದ್ದಾರೆ.

ಜಿವಿಕೆ ಸಂಸ್ಥೆಯ ಅಧೀನದಲ್ಲಿ ಸುಮಾರು 35,000 ಕಾರ್ಮಿಕರು ಕಾರ್ಯನಿರ್ವಹಿಸುತ್ತಿದ್ದಾರೆ ಎಂದು ಪತ್ರದಲ್ಲಿ ಉಲ್ಲೇಖಿಸಲಾಗಿದೆ. ವಲಯವಾರು ವಿಂಗಡಣೆ ಮಾಡಿ ನಿಗದಿ ಮಾಡಿರೋ ವೇತನ ರದ್ದುಪಡಿಸಿ ಏಕರೂಪ ವಲಯವಾಗಿ ಬದಲಾವಣೆ ಮಾಡಬೇಕು. ಅಪಘಾತದಲ್ಲಿ ಮೃತಪಟ್ಟವರ ಕುಟುಂಬಕ್ಕೆ 50 ಲಕ್ಷ ರು. ಪರಿಹಾರ, ಜೇಷ್ಠತೆ ಆಧಾರದ ಮೇಲೆ ಸಿಬ್ಬಂದಿಗೆ ವೇತನ ನಿಗದಿ ಮಾಡಬೇಕು. ಕಾರ್ಮಿಕ ಇಲಾಖೆ ಪ್ರಕಾರ ಪ್ರತಿ ತಿಂಗಳು 7ರ ಒಳಗೆ ವೇತನ ನೀಡಬೇಕು.

ಎಲ್ಲಾ ಕೆಲಸದ ಸ್ಥಳಗಳಲ್ಲಿ ಕಾರ್ಮಿಕರಿಗೆ ಶೌಚಾಲಯ, ವಿಶ್ರಾಂತಿ ಕೊಠಡಿ, ಅಂಬುಲೆನ್ಸ್ ಸ್ವಚ್ಛಗೊಳಿಸಲು ನೀರಿನ ವ್ಯವಸ್ಥೆ ಮಾಡಬೇಕು ಎಂದು ಆಗ್ರಹಿಸಿದೆ. 108 ಅಂಬುಲೆನ್ಸ್ ನೌಕರರ ಮುಷ್ಕರದಿಂದ ರೋಗಿಗಳಿಗೆ ಸಮಸ್ಯೆಯಾದರೆ ಸಂಬಂಧಿಸಿದವರ ವಿರುದ್ಧ ಮುಲಾಜಿಲ್ಲದೆ ಕಠಿಣ ಕ್ರಮ ಕೈಗೊಳ್ಳಲಾಗುವುದು. ಚಾಲಕರಿಗೆ ಯಾವುದೇ ಸಮಸ್ಯೆ ಇದ್ದಲ್ಲಿ ಕಂಪನಿಯೊಂದಿಗೆ ಮಾತುಕತೆ ನಡೆಸಬೇಕು.

**ಸೆ.4 ರಂದು ಪತ್ರ ಬರೆದಿರುವ ಸಂಘದ ಪದಾಧಿಕಾರಿಗಳು, 15 ದಿನಗಳ ಒಳಗಾಗಿ ಬೇಡಿಕೆ ಈಡೇರಿಸದದಿದ್ದರೆ ಸೆ.20 ರಿಂದ ಸಾಮೂಹಿಕ ರಾಜೀನಾಮೆ ನೀಡಿ ಹೋರಾಟ ನಡೆಸುತ್ತೇವೆ. ನಂತರದ ಪರಿಣಾಮಗಳಿಗೆ ಸರ್ಕಾರವೇ ಹೊಣೆ ಎಂದು ಎಚ್ಚರಿಸಿದ್ದಾರೆ.**

## 32 ಡಿಗ್ರಿ ದಾಟಿದ ತಾಪಮಾನ, ಸಿಲಿಕಾನ್ ಸಿಟಿ ಜನತೆ ಹೈರಾಣ..!

• ಉದಯವಾಹಿನಿ, ಬೆಂಗಳೂರು

ಸಿಲಿಕಾನ್ ಸಿಟಿ ಬೆಂಗಳೂರಿನಲ್ಲಿ ವಾತಾವರಣ ಸಂಪೂರ್ಣ ಬದಲಾಗಿದೆ. ಸಾಮಾನ್ಯವಾಗಿ ಸೆಪ್ಟೆಂಬರ್ ತಿಂಗಳಲ್ಲಿ ಮೋಡ ಕವಿದ ವಾತಾವರಣ, ಮಳೆ ಹಾಗೂ ತಂಪಾದ ಹವಾಮಾನದಿಂದ ಕೂಡಿರಬೇಕಾದ ಬೆಂಗಳೂರಿನಲ್ಲಿ ಈ ಬಾರಿ ಬೇಸಿಗೆಯ ವಾತಾವರಣ ಕಂಡುಬರುತ್ತಿದೆ. ತಾಪಮಾನ ಏರಿಕೆಯಾಗಿರುವ ಹಿನ್ನೆಲೆಯಲ್ಲಿ ಸೆಪ್ಟೆಂಬರ್ ತಿಂಗಳು ಏಪ್ರಿಲ್‌ನಂತೆ ಭಾಸವಾಗುತ್ತಿದೆ. ನಗರದಲ್ಲಿ ತಾಪಮಾನ ಗಣನೀಯವಾಗಿ ಏರಿಕೆಯಾಗಿದ್ದು, ಬಿಸಿಲಿನ ಬೇಗೆಯಿಂದ ಸಾರ್ವಜನಿಕರು ಹೈರಾಣಾಗಿದ್ದಾರೆ. ಬೆಂಗಳೂರಿನಲ್ಲಿ ಗರಿಷ್ಠ ತಾಪಮಾನ 32 ಡಿಗ್ರಿ ಸೆಲ್ಸಿಯಸ್‌ನ ಆಸುಪಾಸಿನಲ್ಲಿ ದಾಖಲಾಗುತ್ತಿದೆ. ಸೆಪ್ಟೆಂಬರ್‌ನಲ್ಲಿ ನಗರದ ಸಾಮಾನ್ಯ ಗರಿಷ್ಠ ತಾಪಮಾನ ಸುಮಾರು 28 ಡಿಗ್ರಿ ಸೆಲ್ಸಿಯಸ್ ಆಗಿರುತ್ತದೆ. ಭಾರತೀಯ ಹವಾಮಾನ ಇಲಾಖೆ ಅಂಕಿಅಂಶಗಳ ಪ್ರಕಾರ, ಸೋಮವಾರ ಬೆಂಗಳೂರಿನಲ್ಲಿ ಗರಿಷ್ಠ ತಾಪಮಾನ 31.9 ಡಿಗ್ರಿ ಸೆಲ್ಸಿಯಸ್ ದಾಖಲಾಗಿದ್ದರೆ, ಭಾನುವಾರ 32.2 ಡಿಗ್ರಿ ಸೆಲ್ಸಿಯಸ್ ದಾಖಲಾಗಿತ್ತು. ಕೆಂಪೇಗೌಡ ಅಂತಾರಾಷ್ಟ್ರೀಯ ವಿಮಾನ ನಿಲ್ದಾಣದಲ್ಲಿ ಸೋಮವಾರ 33.4 ಡಿಗ್ರಿ, ಭಾನುವಾರ 33.2 ಡಿಗ್ರಿ ಸೆಲ್ಸಿಯಸ್ ತಾಪಮಾನ ದಾಖಲಾಗಿದೆ.

## ವಾರಕ್ಕೆ 2 ದಿನ ಗ್ರಾಮಗಳಿಗೆ ಭೇಟಿ ನೀಡಿ, ಜನರ ಸಮಸ್ಯೆ ಸ್ಥಳದಲ್ಲೇ ಪರಿಹರಿಸಿ


ಉದಯವಾಹಿನಿ ಚಿತ್ರ


• ಉದಯವಾಹಿನಿ, ಬೆಂಗಳೂರು

ಜಿಲ್ಲಾ ಪಂಚಾಯಿತಿ ಮುಖ್ಯ ಕಾರ್ಯನಿರ್ವಹಣಾಧಿಕಾರಿಗಳು (ಸಿಇಒ) ವಾರದಲ್ಲಿ ಎರಡು ದಿನ ಕನಿಷ್ಠ ಗ್ರಾಮಗಳಿಗೆ ಅನಿರೀಕ್ಷಿತ ಭೇಟಿ ನೀಡಿ, ಅಭಿವೃದ್ಧಿ ಕಾಮಗಾರಿಗಳನ್ನು ಪರಿಶೀಲಿಸಬೇಕು ಎಂದು ಸಚಿವ ಈಶ್ವರ ಬಿ. ಖಂಡ್ರೆ ಸೂಚಿಸಿದ್ದಾರೆ.

ಈ ಸಂಬಂಧ ಸಿಇಒಗಳಿಗೆ ಪತ್ರ ಬರೆದಿರುವ ಅವರು, ಗ್ರಾಮಗಳಿಗೆ ಭೇಟಿ ನೀಡಿದ ಸಂದರ್ಭದಲ್ಲಿ ಪಂಚಾಯಿತಿ ಅಭಿವೃದ್ಧಿ ಅಧಿಕಾರಿಗಳು (ಪಿಡಿಒ) ಹಾಗೂ ತಾಲ್ಲೂಕು ಕಾರ್ಯನಿರ್ವಾಹಕ ಅಧಿಕಾರಿಗಳ ಹಾಜರಾತಿ ಮತ್ತು ಕಾರ್ಯನಿರ್ವಹಣೆಯನ್ನು ಪರಿಶೀಲಿಸಬೇಕು ಎಂದು ಹೇಳಿದ್ದಾರೆ. ಅಲ್ಲದೆ, ಗ್ರಾಮಸ್ಥರ ಅಹವಾಲುಗಳನ್ನು ಆಲಿಸಿ, ಸಾಧ್ಯವಾದಷ್ಟು ಸ್ಥಳದಲ್ಲೇ ಸಮಸ್ಯೆಗಳಿಗೆ ಪರಿಹಾರ ಕಲ್ಪಿಸಬೇಕು ಎಂದು ಸೂಚಿಸಿದ್ದಾರೆ.

ಸಿಇಒಗಳ ನಿಯಮಿತ ಗ್ರಾಮ ಭೇಟಿಯಿಂದ ಜಲ ಜೀವನ್ ಮಿಷನ್, ವಿಕಸಿತ ಭಾರತ ಉದ್ಯೋಗ ಮತ್ತು ಜೀವನೋಪಾಯ ಮಿಷನ್ (ಗ್ರಾಮೀಣ), ಪ್ರಧಾನ ಮಂತ್ರಿ ಆವಾಸ್ ಯೋಜನೆ (ಗ್ರಾಮೀಣ), ಪ್ರಧಾನ ಮಂತ್ರಿ ಗ್ರಾಮ ಸಡಕ್ ಯೋಜನೆ ಹಾಗೂ ಮುಖ್ಯಮಂತ್ರಿ ರಸ್ತೆ ಯೋಜನೆ ಸೇರಿದಂತೆ ವಿವಿಧ ಸರ್ಕಾರಿ ಯೋಜನೆಗಳ ಸಮರ್ಪಕ ಅನುಷ್ಠಾನಕ್ಕೆ ಸಹಕಾರಿಯಾಗಲಿದೆ ಎಂದು ತಿಳಿಸಿದ್ದಾರೆ. ಗ್ರಾಮ ಪಂಚಾಯಿತಿ ವ್ಯಾಪ್ತಿಯ ಕೆರೆಗಳು ಹಾಗೂ ಸರ್ಕಾರಿ ಜಮೀನುಗಳ ಮೇಲಿನ ಒತ್ತುವರಿಗಳನ್ನು ತೆರವುಗೊಳಿಸುವುದು, ಒಣ ಹಾಗೂ ಹಸಿ ತ್ಯಾಜ್ಯವನ್ನು ಸಮರ್ಪಕವಾಗಿ ವಿಲೇವಾರಿ ಮಾಡುವುದನ್ನು ಖಚಿತಪಡಿಸಿಕೊಳ್ಳುವಂತೆಯೂ ಸಿಇಒಗಳಿಗೆ ಸೂಚಿಸಲಾಗಿದೆ.

## ನಗರದಲ್ಲಿ ಅಕ್ರಮವಾಗಿ ನೆಲೆಸಿದ್ದ ಐವರು ವಿದೇಶಿಗರು ವಶಕ್ಕೆ, ಗಡೀಪಾರಿಗೆ ಕ್ರಮ..!



ಉದಯವಾಹಿನಿ ಚಿತ್ರ

• ಉದಯವಾಹಿನಿ, ಬೆಂಗಳೂರು

ರಾಜಧಾನಿ ಬೆಂಗಳೂರಿನಲ್ಲಿ ಅಕ್ರಮವಾಗಿ ನೆಲೆಸಿದ್ದ ಐವರು ವಿದೇಶಿ ಪ್ರಜೆಗಳನ್ನು ನಾರ್ಕೋಟಿಕ್ಸ್ ಕಂಟ್ರೋಲ್ ಬ್ಯೂರೋ ( ಮತ್ತು ಬೆಂಗಳೂರು ನಗರ ಪೊಲೀಸರು ಜಂಟಿ ಕಾರ್ಯಾಚರಣೆ ನಡೆಸಿ ವಶಕ್ಕೆ ಪಡೆದಿದ್ದಾರೆ. ಕೃಷ್ಣರಾಜಪುರಂ ಮತ್ತು ಕಮ್ಮನಹಳ್ಳಿ ಪ್ರದೇಶಗಳಲ್ಲಿ ಈ ಐವರು ವಾಸಿಸುತ್ತಿರುವ ಬಗ್ಗೆ ದೀರ್ಘಕಾಲ ನಿಗಾ ಇರಿಸಿ, ದಾಖಲೆಗಳ ಪರಿಶೀಲನೆ ನಡೆಸಿದ ಬಳಿಕ ಅವರು ಭಾರತದಲ್ಲಿ ಅಕ್ರಮವಾಗಿ ನೆಲೆಸಿರುವುದು ಪತ್ತೆಯಾಗಿದೆ.

ಬಳಿಕ ಅಗತ್ಯ ಕ್ರಮಕ್ಕಾಗಿ ಅವರನ್ನು ಸಂಬಂಧಪಟ್ಟ ಪೊಲೀಸರಿಗೆ ಹಸ್ತಾಂತರಿಸಲಾಗಿದ್ದು, ವಿದೇಶಿಗರ ಕಾಯ್ದೆಯಡಿ ಕ್ರಮ ಹಾಗೂ ಗಡೀಪಾರು ಪ್ರಕ್ರಿಯೆ ಆರಂಭಿಸಲಾಗಿದೆ. ಈ ವರ್ಷದ ಆರಂಭದಲ್ಲಿ ಎನ್‌ಸಿಬಿ ಬೆಂಗಳೂರು ಘಟಕವು ಇದೇ ರೀತಿಯಾಗಿ ಎಂಟು ವಿದೇಶಿ ಪ್ರಜೆಗಳನ್ನು ಪತ್ತೆಹಚ್ಚಿತ್ತು. ಅವರಲ್ಲಿ ಏಳು ಮಂದಿ ಆಫ್ರಿಕಾ ಮೂಲದವರು ಹಾಗೂ ಒಬ್ಬ ಯೆಮೆನ್ ಪ್ರಜೆ ಆಗಿದ್ದರು. ವೀಸಾ ನಿಯಮಗಳನ್ನು ಉಲ್ಲಂಘಿಸಿ ವಾಸಿಸುತ್ತಿದ್ದ ಅವರು ಮಾದಕವಸ್ತು ಸಾಗಾಟದಲ್ಲಿ ಭಾಗಿಯಾಗಿರುವ ಶಂಕೆಯೂ ವ್ಯಕ್ತವಾಗಿತ್ತು. ಅವರನ್ನು ಪೊಲೀಸರಿಗೆ ಒಪ್ಪಿಸಲಾಗಿದ್ದು, ಬಳಿಕ ಗಡೀಪಾರು ಮಾಡಲಾಗಿದೆ ಎಂದು ಎನ್‌ಸಿಬಿ ಸೋಮವಾರ ಬಿಡುಗಡೆ ಮಾಡಿರುವ ಪ್ರಕಟಣೆಯಲ್ಲಿ ತಿಳಿಸಿದೆ.

ಬೆಂಗಳೂರು ನಗರ ಪೊಲೀಸರು ಹಾಗೂ ಪೂರ್ವ ಮತ್ತು ವೈಟ್‌ಫೀಲ್ಡ್ ವಿಭಾಗದ ಉಪ ಪೊಲೀಸ್ ಆಯುಕ್ತರ ಸಹಕಾರದೊಂದಿಗೆ ಈ ವಿಶೇಷ ಕಾರ್ಯಾಚರಣೆ ನಡೆಸಲಾಗಿದೆ. ಶಂಕಿತ ವಿದೇಶಿಗರ ಮೇಲೆ ಆರಂಭದಲ್ಲಿ ರಹಸ್ಯವಾಗಿ ನಿಗಾ ಇರಿಸಲಾಗಿತ್ತು. ಅವರಿಗೆ ಯಾವುದೇ ಅಪರಾಧ ಹಿನ್ನೆಲೆ ಕಂಡುಬರದಿದ್ದರೂ, ಭಾರತದಲ್ಲಿ ಕಾನೂನುಬಾಹಿರವಾಗಿ ವಾಸಿಸುತ್ತಿರುವುದು ತನಿಖೆಯಲ್ಲಿ ಪತ್ತೆಯಾಗಿದೆ ಎಂದು ಎನ್‌ಸಿಬಿ ತಿಳಿಸಿದೆ.

## ಬೆಂಗಳೂರು ಕಾಲ್ತುಳಿತ ಪ್ರಕರಣದಲ್ಲಿ ಕ್ಲೀನ್‌ಚಿಟ್ ಬೆನ್ನಲ್ಲೇ ದಯಾನಂದ್‌ಗೆ ಹುದ್ದೆ..!

• ಉದಯವಾಹಿನಿ, ಬೆಂಗಳೂರು



ಉದಯವಾಹಿನಿ ಚಿತ್ರ

1994ನೇ ಬ್ಯಾಚ್‌ನ ಹಿರಿಯ ಐಪಿಎಸ್ ಅಧಿಕಾರಿ ಬಿ. ದಯಾನಂದ್ ಅವರನ್ನು ಪೊಲೀಸ್ ಮಹಾನಿರ್ದೇಶಕ (ಡಿಜಿಪಿ) ಹುದ್ದೆಗೆ ಬಡ್ತಿ ನೀಡಿ, ಆಂತರಿಕ ಭದ್ರತಾ ವಿಭಾಗದ (ಐಎಸ್‌ಡಿ) ಮುಖ್ಯಸ್ಥರನ್ನಾಗಿ ರಾಜ್ಯ ಸರ್ಕಾರ ನೇಮಕ ಮಾಡಿದೆ.

ಈ ಹಿಂದೆ ಪೊಲೀಸ್ ತರಬೇತಿ ವಿಭಾಗದ ಹೆಚ್ಚುವರಿ ಪೊಲೀಸ್ ಮಹಾನಿರ್ದೇಶಕರಾಗಿ ಕಾರ್ಯನಿರ್ವಹಿಸುತ್ತಿದ್ದ ದಯಾನಂದ್ ಅವರಿಗೆ 2025ರ ಸೆಪ್ಟೆಂಬರ್ 12ರಿಂದ ಅನ್ವಯವಾಗುವಂತೆ ಹಿಂಬಾಕಿ ಪರಿಣಾಮದೊಂದಿಗೆ ಹಂತ-16ರಲ್ಲಿ ಡಿಜಿಪಿ ಹುದ್ದೆಯ ಬಡ್ತಿ ನೀಡಲಾಗಿದೆ. ಅವರ ಹೊಸ ಹುದ್ದೆ ತಕ್ಷಣದಿಂದಲೇ ಜಾರಿಗೆ ಬರಲಿದೆ. ಇದರ ಜೊತೆಗೆ, ಐಪಿಎಸ್ (ವೇತನ) ನಿಯಮಗಳು, 2016ರ ಅನ್ವಯ ಡಿಜಿಪಿ, ಐಎಸ್‌ಡಿ ಹುದ್ದೆಯನ್ನು ಡಿಜಿಪಿ-ಸಿಐಡಿ ಹುದ್ದೆಗೆ ಸಮಾನ ಸ್ಥಾನಮಾನ ಮತ್ತು ಜವಾಬ್ದಾರಿಗಳಿರುವ ಹುದ್ದೆ ಎಂದು ಸರ್ಕಾರ ಘೋಷಿಸಿದೆ. 2025ರ ಜೂನ್ 4ರಂದು ಬೆಂಗಳೂರಿನ ಎಂ. ಚಿನ್ನಸ್ವಾಮಿ ಕ್ರೀಡಾಂಗಣದಲ್ಲಿ ನಡೆದ ಕಾಲ್ತುಳಿತ ಪ್ರಕರಣದ ಹಿನ್ನೆಲೆಯಲ್ಲಿ ಆರಂಭಿಸಲಾಗಿದ್ದ ಇಲಾಖಾ ವಿಚಾರಣೆಯಿಂದ ದಯಾನಂದ್ ಅವರನ್ನು ದೋಷಮುಕ್ತಗೊಳಿಸಿದ ಕೆಲವೇ ದಿನಗಳ ಬಳಿಕ ಈ ಬಡ್ತಿ ದೊರೆತಿದೆ. ರಾಯಲ್ ಚಾಲೆಂಜರ್ಸ್ ಬೆಂಗಳೂರು ತಂಡದ ಗೆಲುವಿನ ಸಂಭ್ರಮಾಚರಣೆ ವೇಳೆ ಸಂಭವಿಸಿದ ಕಾಲ್ತುಳಿತದ ಸಮಯದಲ್ಲಿ ದಯಾನಂದ್ ಅವರು ಬೆಂಗಳೂರು ನಗರ ಪೊಲೀಸ್ ಆಯುಕ್ತರಾಗಿದ್ದರು. ಘಟನೆಯ ಬಳಿಕ ಅವರನ್ನು ಅಮಾನತುಗೊಳಿಸಲಾಗಿತ್ತು. ಇತರ ಅಧಿಕಾರಿಗಳೊಂದಿಗೆ ಅವರ ವಿರುದ್ಧವೂ ಇಲಾಖಾ ವಿಚಾರಣೆ ನಡೆಸಲಾಗಿತ್ತು.

## ಸಾರ್ವಜನಿಕ ಸೇವಾ ಆಯೋಗಗಳು ಜಾತಿ ರಾಜಕೀಯದ ಗುಹೆಗಳು

• ಉದಯವಾಹಿನಿ, ಬೆಂಗಳೂರು


ಉದಯವಾಹಿನಿ ಚಿತ್ರ

ದೇಶಾದ್ಯಂತ ಇರುವ ರಾಜ್ಯ ಸಾರ್ವಜನಿಕ ಸೇವಾ ಆಯೋಗಗಳನ್ನು ಸ್ವಚ್ಛಗೊಳಿಸಿ ಮರುಸಂಘಟಿಸುವ ಸಮಯ ಬಂದಿದೆ ಎಂದು ಬಿಜೆಪಿ ರಾಜ್ಯಸಭಾ ಸದಸ್ಯ ಲಹರ್ ಸಿಂಗ್ ಸಿರೋಯಾ ಹೇಳಿದರು.

ರಾಷ್ಟ್ರದ ವಿವಿಧ ಭಾಗಗಳಲ್ಲಿ ವಿದ್ಯಾರ್ಥಿಗಳ ಪ್ರತಿಭಟನೆಗಳು ರೋಗ ಗ್ರಸ್ತ ವ್ಯವಸ್ಥೆಯ ಲಕ್ಷಣ ತೋರಿಸುತ್ತಿವೆ. ರಾಜ್ಯ ಸಾರ್ವಜನಿಕ ಸೇವಾ ಆಯೋಗಗಳು ಈ ಕಾಯಿಲೆಗೆ ಗಣನೀಯವಾಗಿ ಕೊಡುಗೆ ನೀಡುತ್ತಿವೆ ಎಂದು ಅವರು ಹೇಳಿದರು. ವಿಶ್ವಾಸಾರ್ಹತೆಯ ಬಿಕ್ಕಟ್ಟನ್ನು ಕೊನೆಗೊಳಿಸಲು ನೀತಿ ಅಥವಾ ಶಾಸಕಾಂಗ ಪರಿಹಾರವನ್ನು ತರಲು ರಾಜ್ಯವು ಕೇಂದ್ರದೊಂದಿಗೆ ಕೆಲಸ ಮಾಡಬೇಕು ಎಂದು ಸಂಸದರು ಹೇಳಿದರು. ರಾಜ್ಯ ಸಾರ್ವಜನಿಕ ಸೇವಾ ಆಯೋಗಗಳಲ್ಲಿ ರಾಜಕೀಯ ಹಸ್ತಕ್ಷೇಪವು ಬಹಿರಂಗ ರಹಸ್ಯವಾಗಿದೆ. ಒಂದು ಗೋಚರ ಮಾದರಿ ಇದೆ. ಒತ್ತಡದಲ್ಲಿದ್ದಾಗ, ಸರ್ಕಾರಗಳು ಸ್ವಚ್ಛತಾ ಸಮಿತಿಗಳನ್ನು ನೇಮಿಸುತ್ತವೆ ಮತ್ತು ಒತ್ತಡ ಕಡಿಮೆಯಾದಾಗ ಅದು ನಿರ್ಲಕ್ಷ್ಯಕ್ಕೊಳಗಾಗುತ್ತದೆ.

ಹೋಟಾ ಸಮಿತಿ ತನ್ನ ವರದಿಯನ್ನು ಸಲ್ಲಿಸಿದ ಒಂದೆರಡು ವರ್ಷಗಳಲ್ಲಿ ಕರ್ನಾಟಕದಲ್ಲೂ ಇದೇ ಪರಿಸ್ಥಿತಿ ಇತ್ತು. ಭ್ರಷ್ಟಾಚಾರದ ಈ ಚಕ್ರವನ್ನು ಮುರಿಯಲು ರಾಜಕೀಯ ಇಚ್ಛಾಶಕ್ತಿಯ ಕೊರತೆಯಿದೆ. ಈ ಆಯೋಗಗಳು ಜಾತಿ ರಾಜಕೀಯದ ಗುಹೆಯಾಗಿ ಮಾರ್ಪಟ್ಟಿವೆ ಎಂದು ಅವರು ಹೇಳಿದರು.

# ಎಪಿಎಂಸಿಯಲ್ಲಿ ಬಾಲ ಕಾರ್ಮಿಕ ಪದ್ಧತಿ ತಕ್ಷಣ ನಿಲ್ಲಿಸದಿದ್ದರೇ ಬಂಧನ

## ಯಶವಂತಪುರ ಎಪಿಎಂಸಿಗೆ ಮಂಗಳವಾರ ದಿಢೀರ್ ಭೇಟಿ ನೀಡಿ ರೈತರೊಂದಿಗೆ ಚರ್ಚಿಸಿದ ನಂತರ ಮಾಧ್ಯಮಗಳಿಗೆ ಪ್ರತಿಕ್ರಿಯೆ ನೀಡಿದರು

• ಉದಯವಾಹಿನಿ, ಬೆಂಗಳೂರು

**1** ಎಪಿಎಂಸಿ ಮಾರುಕಟ್ಟೆಯಲ್ಲಿ ಸಿಎಂ
**2** ರೈತರ ಕಷ್ಟಗಳನ್ನು ಅರಿಯುವುದು
**3** ವ್ಯವಸ್ಥೆಗಳನ್ನು ಗಮನಿಸಿದ್ದೇನೆ

ಯಶವಂತಪುರ ಎಪಿಎಂಸಿಯಲ್ಲಿ ಬಾಲ ಕಾರ್ಮಿಕ ಪದ್ಧತಿಯನ್ನು ತಕ್ಷಣದಿಂದಲೇ ನಿಲ್ಲಿಸುವಂತೆ ಸೂಚಿಸಲಾಗಿದೆ. ಬಾಲಕಾರ್ಮಿಕರಿಂದ ದುಡಿಸುತ್ತಿರುವವರನ್ನು ತಕ್ಷಣವೇ ಬಂಧಿಸಿ ಪ್ರಕರಣ ದಾಖಲಿಸಲು ಜಿಲ್ಲಾಧಿಕಾರಿ ಹಾಗೂ ಪೊಲೀಸರಿಗೆ ಸೂಚನೆ ನೀಡಿದ್ದೇನೆ ಎಂದು ಸಿಎಂ ಡಿ. ಕೆ. ಶಿವಕುಮಾರ್ ತಿಳಿಸಿದರು.

ಯಶವಂತಪುರ ಎಪಿಎಂಸಿಗೆ ಮಂಗಳವಾರ ದಿಢೀರ್ ಭೇಟಿ ನೀಡಿ ರೈತರೊಂದಿಗೆ ಚರ್ಚಿಸಿದ ನಂತರ ಮಾಧ್ಯಮಗಳಿಗೆ ಪ್ರತಿಕ್ರಿಯೆ ನೀಡಿದರು. ಸಣ್ಣ ಮಕ್ಕಳಿಂದ ಕೆಲಸ ಮಾಡಿಸುವುದನ್ನು ತಕ್ಷಣದಿಂದಲೇ ನಿಲ್ಲಿಸಬೇಕು. ರಾಜ್ಯದ ಇತರೆ ಎಪಿಎಂಸಿಗಳಿಗೆ ಸಚಿವರುಗಳು ಭೇಟಿ ನೀಡಿ ಸಮಸ್ಯೆ ಹಾಗೂ ದೂರುಗಳನ್ನು ಸರಿಪಡಿಸಲು ಸೂಚಿಸಲಾಗುವುದು ಎಂದು ಹೇಳಿದರು.ಎಪಿಎಂಸಿ ಮಾರುಕಟ್ಟೆ ರೈತರು ಹಾಗೂ ವ್ಯಾಪಾರಸ್ಥರ ನಡುವಿನ ಕೊಂಡಿ. ಬೇರೆ ಯಾವುದೇ ಮಾರುಕಟ್ಟೆಗಿಂತಲೂ ಬೆಂಗಳೂರಿನ ಮಾರುಕಟ್ಟೆಯ ಬಗ್ಗೆ ರೈತರು ಸಂತುಷ್ಟರಾಗಿದ್ದಾರೆ. ಮಧ್ಯಪ್ರದೇಶದ ಇಂದೋರ್ ಸೇರಿದಂತೆ ದೇಶದ ವಿವಿಧ ಮಾರುಕಟ್ಟೆಗಳಿಂದ ಈರುಳ್ಳಿ, ಆಲೂಗಡ್ಡೆ ಮುಂತಾದ ಕೃಷಿ ಉತ್ಪನ್ನಗಳು ಇಲ್ಲಿಗೆ ಬರುತ್ತಿದ್ದು ಇಲ್ಲಿನ ಉತ್ಪನ್ನಗಳಿಗೂ ಬೇರೆ ಉತ್ಪನ್ನಗಳಿಗೂ ಗುಣಮಟ್ಟದಲ್ಲಿ ಹಾಗೂ ರುಚಿಯಲ್ಲಿ ಸಾಕಷ್ಟು ವ್ಯತ್ಯಾಸವಿದೆ. ಹಲವು ಉತ್ಪನ್ನಗಳು ಮೂರು ತಿಂಗಳವರೆಗೆ ಹಾಳಾಗದೆ ಉಳಿದರೆ, ಇನ್ನು ಕೆಲವು ಒಂದು ತಿಂಗಳು ಉಳಿಯುವುದಿಲ್ಲ ಎಂದರು.

ಉತ್ತರ ಭಾರತದ ಕೆಲವು ಮಾದರಿಯ ಆಲೂಗಡ್ಡೆ ಸಿಹಿಯಾಗಿದ್ದರೆ ಕೆಲವು ಸಾಮಾನ್ಯವಾಗಿವೆ. ಇಲ್ಲಿಂದ ತಮಿಳುನಾಡು, ಕೇರಳ ಸೇರಿದಂತೆ ದೆಹಲಿಗೂ ಹೋಗುತ್ತದೆ ಎಂದರು. ರೈತರ ಅಹವಾಲು ಆಲಿಸಿದ ಡಿಕೆ ಶಿವಕುಮಾರ್, ರೈತರ ಸಮಸ್ಯೆಗಳ ಬಗ್ಗೆ ಚರ್ಚಿಸಿದ್ದು, ದಲ್ಲಾಳಿ,


ಉದಯವಾಹಿನಿ ಚಿತ್ರ

ವರ್ತಕರು ಪಡೆಯುತ್ತಿರುವ ಕಮಿಷನ್ ಬಗ್ಗೆ ಪರಿಶೀಲನೆ ಮಾಡಲಾಗುವುದು ಎಂದು ತಿಳಿಸಿದರು.

ಎಪಿಎಂಸಿ ಮಾರುಕಟ್ಟೆಗಳು ಸಂಪೂರ್ಣ ನಂಬಿಕೆಯನ್ನು ಆಧರಿಸಿ ನಡೆಯುತ್ತಿವೆ, ಇಲ್ಲಿನ ವ್ಯಾಪಾರವು ಸಂಪೂರ್ಣವಾಗಿ ನಂಬಿಕೆಯ ಮೇಲೆ ಆಧರಿಸಿದ್ದು. ಉತ್ತರ ಭಾರತದಿಂದಲೂ ಕೂಡ ಕೃಷಿ ಉತ್ಪನ್ನಗಳನ್ನು ನಂಬಿಕೆ ಆಧಾರದ ಮೇಲೆಯೇ ಕಳುಹಿಸಲಾಗುತ್ತಿದೆ. ಆರ್ ಟಿಜಿಎಸ್ ಮೂಲಕ ಹಣ ಪಾವತಿಯಾಗುತ್ತಿದೆ.

ಬೀದಿಬದಿ ವ್ಯಾಪಾರಿಗಳು ಇಲ್ಲಿಂದಲೇ ತರಕಾರಿ ಹಣ್ಣುಗಳನ್ನು ಕೊಂಡುಕೊಳ್ಳುತ್ತಿದ್ದು, 1-2 ರೂ. ಲಾಭ ಇಟ್ಟುಕೊಂಡು ಮಾರಾಟ ಮಾಡುತ್ತಿದ್ದಾರೆ ಎಂದರು.

**ಬರದ ಸಂಕಷ್ಟದಲ್ಲಿರುವ ರೈತರೊಂದಿಗೆ ಸರ್ಕಾರವಿದೆ:** ಸಿಎಂ ಡಿ.ಕೆ ಶಿವಕುಮಾರ್ ಭರವಸೆ! ರೈತರು ಹಾಗೂ ವ್ಯಾಪಾರಿಗಳಿಗೆ ನ್ಯಾಯ ದೊರಕಿಸುವುದು ಸರ್ಕಾರದ ಆದ್ಯತೆ ಮಾರುಕಟ್ಟೆ ಸ್ಥಳಾಂತರದ ಬಗ್ಗೆ ಪರಿಶೀಲಿಸಲಾಗುವುದು. ರೈತರು, ವ್ಯಾಪಾರಿಗಳಿಗೆ, ಕೆಲಸ ಮಾಡುವವರಿಗೆ ನ್ಯಾಯ ದೊರಕಿಸುವುದು ಸರ್ಕಾರದ ಆದ್ಯತೆ ಎಂದರು. ಯಶವಂತಪುರ ಎಪಿಎಂಸಿಗೆ ಬರುವ ರೈತರು , ಮಧ್ಯವರ್ತಿಗಳು, ವರ್ತಕರು ಇಲ್ಲಿ ಕೂಲಿಕಾರರಾಗಿ ಕೆಲಸ ಮಾಡುತ್ತಿರುವ ಮಹಿಳೆಯರೊಂದಿಗೂ ಮಾತನಾಡಿದ್ದೇನೆ. ಉಪಹಾರ ಸೇವಿಸಿ, ಇಲ್ಲಿನ ಶೌಚಾಲಯ ವ್ಯವಸ್ಥೆ ಸೇರಿದಂತೆ ಮೂಲಭೂತ ಸೌಲಭ್ಯಗಳನ್ನು ಪರಿಶೀಲಿಸಿದ್ದೇನೆ.

ಬಿಜಾಪುರ, ಗುಲ್ಬರ್ಗ ಸೇರಿದಂತೆ ಎಪಿಎಂಸಿ ಮಾರುಕಟ್ಟೆಗಳಲ್ಲಿ ಆಗುತ್ತಿರುವ ಅನ್ಯಾಯಗಳನ್ನು ಆಲಿಸಿದ್ದೇನೆ. ರೈತರು ತಾವು ಬೆಳೆದ ಬೆಳೆಗಳನ್ನು ಯಾವ ಕಾರಣಕ್ಕಾಗಿ ಬೆಂಗಳೂರಿನ ಎಪಿಎಂಸಿ ಮಾರುಕಟ್ಟೆ ತಂದು ಮಾರುತ್ತಿದ್ದಾರೆ ಎಂದು ಅರಿತಿದ್ದೇನೆ. ರೈತರು ನೀಡುತ್ತಿರುವ ಕಮೀಷನ್ ಬಗ್ಗೆಯೂ ಮಾಹಿತಿ ಪಡೆದುಕೊಂಡಿದ್ದೇನೆ ಎಂದರು.

### ಸೂಕ್ತ ಮಾರ್ಗದರ್ಶನ

**ರಾಜ್ಯದ ಎಲ್ಲಾ ಎಪಿಎಂಸಿ ಮಾರುಕಟ್ಟೆಗಳಿಗೆ ಸಚಿವರು ಭೇಟಿ ನೀಡಿ ಪರಿಶೀಲಿಸಿ, ರೈತರಿಗೆ ಹಾಗೂ ವರ್ತಕರಿಗೆ ನ್ಯಾಯ ಒದಗಿಸಬೇಕು. ಎಪಿಎಂಸಿ ಯವರಿಗೆ ಈ ಬಗ್ಗೆ ಸೂಕ್ತ ಮಾರ್ಗದರ್ಶನ ನೀಡಲಾಗುವುದು. ರೈತರಿಗೆ ಹಾಗೂ ವರ್ತಕರಿಗೆ ನ್ಯಾಯ ಒದಗಿಸಲು ನನ್ನದೇ ರೂಪುರೇಷೆಗಳಿವೆ ಎಂದರು.**

**ಎಪಿಎಂಸಿ ಮಾರುಕಟ್ಟೆಗಳಲ್ಲಿ ಪಾರ್ಕಿಂಗ್ ವ್ಯವಸ್ಥೆ ಬಗ್ಗೆ ಮಾಧ್ಯಮದವರ ಪ್ರಶ್ನೆಗೆ ಉತ್ತರಿಸಿ, ಪಾರ್ಕಿಂಗ್ ವ್ಯವಸ್ಥೆಗೆ ಕರೆಯಲಾಗಿದ್ದ ಟೆಂಡರ್‌ಗೆ ಯಾರೂ ಅರ್ಜಿ ಸಲ್ಲಿಸಿಲ್ಲವೆಂದು ತಿಳಿದುಬಂದಿದೆ. ಈ ಬಗ್ಗೆ ಕ್ರಮ ವಹಿಸಲಾಗುವುದು.** ಡಿಕೆಶಿ ಸಿಎಂ

**ಎಪಿಎಂಸಿಯಲ್ಲಿ ಕೂಲಿ ಕಾರ್ಮಿಕರು, ರೈತರು, ವ್ಯಾಪಾರಿಗಳ ಜೊತೆ ನಡೆಸಿದ ಚರ್ಚೆ ವೇಳೆ ಹಲವು ಸಲಹೆಗಳನ್ನು ನೀಡಿದ್ದಾರೆ. ಜೊತೆಗೆ ದೂರುಗಳೂ ಇವೆ. ರಾಜ್ಯದ ಮುಖ್ಯಸ್ಥನಾಗಿ ಇಲ್ಲಿನ ಸಮಸ್ಯೆಗಳು ಹಾಗೂ ರೈತರ ಕಷ್ಟ ತಿಳಿದುಕೊಳ್ಳುವುದು ನನ್ನ ಕರ್ತವ್ಯವಾಗಿದೆ.** ಡಿಕೆಶಿ ಸಿಎಂ

## ಡಿಜಿಟಲ್ ವ್ಯವಸ್ಥೆ ಮೂಲಕ ಕಟ್ಟುನಿಟ್ಟಿನ ನಿಗಾ; ಹೈಕೋರ್ಟ್ ಮಹತ್ವದ ಆದೇಶ..!

• ಉದಯವಾಹಿನಿ, ಬೆಂಗಳೂರು

ರಾಜ್ಯದ ಎಲ್ಲಾ ದೇವಸ್ಥಾನಗಳ ಹಣ, ಕಾಣಿಕೆ ಹಾಗೂ ಆಸ್ತಿಪಾಸ್ತಿಗಳನ್ನು ಸಮರ್ಪಕವಾಗಿ ಲೆಕ್ಕಕ್ಕೆ ತೆಗೆದುಕೊಂಡು ಸಂರಕ್ಷಿಸುವುದು, ಕಳ್ಳತನ, ದುರ್ಬಳಕೆ ಮತ್ತು ಹಣದ ದುರುಪಯೋಗವನ್ನು ಆರಂಭದಲ್ಲೇ ತಡೆಯುವ ಉದ್ದೇಶದಿಂದ ಹೈಕೋರ್ಟ್ ಮಹತ್ವದ ನಿರ್ದೇಶನಗಳನ್ನು ನೀಡಿದೆ.

ಹಿಂದೂ ಧಾರ್ಮಿಕ ಸಂಸ್ಥೆಗಳು ಮತ್ತು ದತ್ತಿಗಳ ಇಲಾಖೆಯ ಆಯುಕ್ತರಿಗೆ ಈ ನಿರ್ದೇಶನಗಳನ್ನು ನೀಡಲಾಗಿದ್ದು, ರಾಜ್ಯದ ಎಲ್ಲಾ ದೇವಸ್ಥಾನಗಳಲ್ಲಿ ಅವುಗಳನ್ನು ಜಾರಿಗೆ ತರಲು ಸೂಚಿಸಲಾಗಿದೆ. ಪ್ರಧಾನ ಕಾರ್ಯದರ್ಶಿ, ಇ-ಆಡಳಿತ ಇಲಾಖೆಯ ಸಹಕಾರದೊಂದಿಗೆ ಮಾರ್ಗಸೂಚಿಗಳನ್ನು ಅನುಷ್ಠಾನಗೊಳಿಸುವಂತೆ ಕೋರ್ಟ್ ಸೂಚಿಸಿದೆ.

ಮಾರ್ಗಸೂಚಿಗಳ ಪ್ರಕಾರ, ಸಾಧ್ಯವಾದಷ್ಟು ಎಲ್ಲಾ ರೀತಿಯ ಪಾವತಿಗಳಿಗೆ ವಿದ್ಯುನ್ಮಾನ ಪಾವತಿ ವ್ಯವಸ್ಥೆ ಕಲ್ಪಿಸಬೇಕು. ಹುಂಡಿ ಕಾಣಿಕೆ, ಕಾಣಿಕೆ, ಅರ್ಚನೆ, ಸೇವಾ ಟಿಕೆಟ್, ವಸತಿ ಶುಲ್ಕ, ವಾಹನ ನಿಲುಗಡೆ ಶುಲ್ಕ, ದೇಣಿಗೆ,



ಉದಯವಾಹಿನಿ ಚಿತ್ರ

ಪ್ರಸಾದ ಮಾರಾಟ, ಪ್ರಕಟಣೆಗಳ ಮಾರಾಟ ಸೇರಿದಂತೆ ದೇವಸ್ಥಾನಕ್ಕೆ ಪಾವತಿಸುವ ಪ್ರತಿಯೊಂದು ಮೊತ್ತಕ್ಕೂ ಡಿಜಿಟಲ್ ಪಾವತಿ ವ್ಯವಸ್ಥೆ ಇರಬೇಕು. ಅಗತ್ಯವಿರುವ ಸ್ಥಳಗಳಲ್ಲಿ ಡಿಜಿಟಲ್ ಕಿಯೋಸ್ಕ್‌ಗಳು ಹಾಗೂ ಸ್ವಯಂ ಸೇವಾ ಪಾವತಿ ಯಂತ್ರಗಳನ್ನು ಅಳವಡಿಸಬಹುದಾಗಿದೆ.

ಪ್ರತಿಯೊಂದು ರಸೀದಿಯ ಮೇಲೂ ಮುದ್ರಿತ ಕ್ಯೂ ಆರ್ ಕೋಡ್ ಇರಬೇಕು. ಭಕ್ತರು ಅದನ್ನು ಸ್ಕ್ಯಾನ್ ಮಾಡುವ ಮೂಲಕ ರಸೀದಿ ನೈಜವಾಗಿದೆಯೇ ಮತ್ತು ವಿಶಿಷ್ಟವಾಗಿದೆಯೇ ಎಂಬುದನ್ನು ಕೇಂದ್ರ ಸರ್ವರ್ ಮೂಲಕ ಪರಿಶೀಲಿಸಲು ಸಾಧ್ಯವಾಗಬೇಕು. ಇದರಿಂದ ನಕಲಿ ಅಥವಾ ನಕಲು ರಸೀದಿಗಳನ್ನು ಕೌಂಟರ್‌ನಲ್ಲೇ ಪತ್ತೆಹಚ್ಚಲು ಸಾಧ್ಯವಾಗಲಿದೆ ಎಂದು ಹೇಳಿದೆ.

ಮಾಹಿತಿ ತಂತ್ರಜ್ಞಾನ ನಿರ್ವಾಹಕರ ಬಳಕೆದಾರ ಹೆಸರು ಮತ್ತು ಗುಪ್ತಪದವನ್ನು ದುರುಪಯೋಗಪಡಿಸಿಕೊಂಡು ಭಕ್ತರಿಗೆ ನಕಲಿ ರಸೀದಿಗಳನ್ನು ನೀಡಿದ್ದ ಆರೋಪ ಅವರ ಮೇಲಿತ್ತು.

ಇದು ನಂಬಿಕೆ ದ್ರೋಹ ಹಾಗೂ ಹಣದ ದುರುಪಯೋಗಕ್ಕೆ ಸಮಾನವಾಗಿದೆ ಎಂದು ಕೋರ್ಟ್ ಅಭಿಪ್ರಾಯಪಟ್ಟಿದೆ.

### ರಾಜೇಶ್ ನಾಯಕ್ ಅವರನ್ನು ವಜಾ

**ಇದೇ ವೇಳೆ 2020ರಲ್ಲಿ ಉಡುಪಿ ಜಿಲ್ಲೆಯ ಶ್ರೀ ದುರ್ಗಾಪರಮೇಶ್ವರಿ ದೇವಸ್ಥಾನದಲ್ಲಿ ದ್ವಿತೀಯ ದರ್ಜೆ ಸಹಾಯಕರಾಗಿದ್ದ ರಾಜೇಶ್ ನಾಯಕ್ ಅವರನ್ನು ವಜಾಗೊಳಿಸಿರುವ ಕ್ರಮವನ್ನು ಹೈಕೋರ್ಟ್ ಎತ್ತಿಹಿಡಿದಿದೆ.**

## ಮಾತ್ರೆ ನೀಡಿ ಪ್ರಜ್ಞೆ ತಪ್ಪಿಸಿ ನರ್ಸ್ ಮೇಲೆ ಅತ್ಯಾಚಾರ

• ಉದಯವಾಹಿನಿ, ಬೆಂಗಳೂರು

ನರ್ಸ್ ಒಬ್ಬರಿಗೆ ಮಾತ್ರೆ ನೀಡಿ ಪ್ರಜ್ಞೆ ತಪ್ಪಿಸಿ ಅತ್ಯಾಚಾರ ಎಸಗಿದ, ಆದೃಶಗಳನ್ನು ವಿಡಿಯೋ ಮಾಡಿ ಬ್ಲ್ಯಾಕ್ ಮೇಲ್ ಮಾಡಿದ ಹಾಗೂ ಜಾತಿ ನಿಂದನೆ ಮಾಡಿದ ಗಂಭೀರ ಆರೋಪದ ಮೇಲೆ 42 ವರ್ಷದ ರೇಡಿಯಾಲಜಿಸ್ಟ್ ಮತ್ತು ಡಯಾಗ್ನಾಸ್ಟಿಕ್ ಸೆಂಟರ್ ಮಾಲೀಕನೊಬ್ಬನನ್ನು ಬೆಂಗಳೂರಿನ ಕೊಡಿಗೆಹಳ್ಳಿ ಪೊಲೀಸರು ಬಂಧಿಸಿದ್ದಾರೆ.

ಡಯಾಗ್ನಾಸ್ಟಿಕ್ ಸೆಂಟರ್‌ನಲ್ಲಿ ಕೆಲಸ ಮಾಡುತ್ತಿದ್ದ 30 ವರ್ಷದ ಮಹಿಳೆ ನೀಡಿದ ದೂರಿನ ಆಧಾರದ ಮೇಲೆ ಪ್ರಕರಣ ದಾಖಲಾಗಿದ್ದು, ದೂರು ಆಧರಿಸಿ ಕೊಡಿಗೆಹಳ್ಳಿ ಪೊಲೀಸರು ಭಾರತೀಯ ನ್ಯಾಯ ಸಂಹಿತೆ (ಬಿಎನ್‌ಎಸ್)ಯ ವಿವಿಧ ಸಂಬಂಧಿತ ಸೆಕ್ಷನ್‌ಗಳ ಅಡಿಯಲ್ಲಿ ಅತ್ಯಾಚಾರ ಪ್ರಕರಣ ದಾಖಲಿಸಿಕೊಂಡಿದ್ದು, ರೇಡಿಯಾಲಜಿಸ್ಟ್‌ನನ್ನು ವಿಚಾರಣೆಗಾಗಿ ವಶಕ್ಕೆ ಪಡೆದಿದ್ದಾರೆ. ಮಹಿಳೆ ನೀಡಿರುವ ದೂರಿನ ಪ್ರಕಾರ, ಡಿಸೆಂಬರ್ 15, 2025ರಂದು ಡಯಾಗ್ನಾಸ್ಟಿಕ್ ಸೆಂಟರ್ ಮಾಲೀಕ ಕೆಲಸ ಮಾಡುತ್ತಿದ್ದ ವೇಳೆ ಮಾತ್ರೆಗಳನ್ನು ನೀಡಿದ್ದು, ಇದರಿಂದ ಆಕೆ ಪ್ರಜ್ಞೆ ಕಳೆದುಕೊಂಡಿದ್ದೆ. ಬಳಿಕ ಪ್ರಜ್ಞೆ ಮರಳಿದಾಗ ಬಟ್ಟೆಯಿಲ್ಲದೆ ಇರುವುದನ್ನು ಗಮನಿಸಿ ವೈದ್ಯರನ್ನು ಪ್ರಶ್ನಿಸಿದ್ದಾಗಿ ದೂರಿನಲ್ಲಿ ತಿಳಿಸಿದ್ದಾರೆ.

ಇದೇ ವೇಳೆ ವೈದ್ಯರು ಆ ಘಟನೆಯ ವಿಡಿಯೋ ಚಿತ್ರೀಕರಿಸಿಕೊಂಡಿದ್ದರು ಎಂದು ಮಹಿಳೆ ಆರೋಪಿಸಿದ್ದಾರೆ. ವಿಡಿಯೋವನ್ನು ಸಾಮಾಜಿಕ ಜಾಲತಾಣಗಳಲ್ಲಿ ಅಪ್‌ಲೋಡ್ ಮಾಡುವುದಾಗಿ ಬೆದರಿಕೆ ಹಾಕಿದ್ದಾಗಿ ಮಹಿಳೆ ದೂರಿನಲ್ಲಿ ತಿಳಿಸಿದ್ದಾರೆ.

ಬಳಿಕ ಆ ವಿಡಿಯೋ ಬಳಸಿ ಬ್ಲ್ಯಾಕ್‌ಮೇಲ್ ಮಾಡಿ, ಮುಂದಿನ ಕೆಲವು ತಿಂಗಳುಗಳಲ್ಲಿ ಮದುವೆಯಾಗುವುದಾಗಿ ಭರವಸೆ ನೀಡಿ, ಹಲವು ಬಾರಿ ಲೈಂಗಿಕ ದೌರ್ಜನ್ಯ ಎಸಗಿದ್ದಾರೆ ಎಂದು ಆರೋಪಿಸಿದ್ದಾರೆ. ದೂರು ಆಧರಿಸಿ ಕೊಡಿಗೆಹಳ್ಳಿ ಪೊಲೀಸರು ಭಾರತೀಯ ನ್ಯಾಯ ಸಂಹಿತೆ ಆರೋಪಿ ಅಮೃತನಗರದಲ್ಲಿ ಮಹಿಳೆಗಾಗಿ ಬಾಡಿಗೆ ಮನೆಯನ್ನು ವ್ಯವಸ್ಥೆ ಮಾಡಿಕೊಟ್ಟಿದ್ದು, ಅಲ್ಲಿಯೂ ಹಲವು ಬಾರಿ ಲೈಂಗಿಕ ದೌರ್ಜನ್ಯ ಎಸಗಿದ್ದಾಗಿ ಮಹಿಳೆ ಆರೋಪಿಸಿದ್ದಾರೆ.

## ಹಲಸೂರು ಕೆರೆ ಕಲ್ಯಾಣಿಗೆ ಸಚಿವ ರಿಜ್ವಾನ್ ಅರ್ಷದ್ ಭೇಟಿ, ಸಿದ್ಧತೆ ಪರಿಶೀಲನೆ..!

• ಉದಯವಾಹಿನಿ, ಬೆಂಗಳೂರು


ಉದಯವಾಹಿನಿ ಚಿತ್ರ

ಗಣೇಶ ಮೂರ್ತಿ ವಿಸರ್ಜನೆಗೆ ಹಲಸೂರು ಕೆರೆ ಕಲ್ಯಾಣಿಯಲ್ಲಿ ಎಲ್ಲಾ ಸಿದ್ಧತೆಗಳನ್ನು ಕೈಗೊಳ್ಳಲಾಗಿದ್ದು, ಸಿಸಿಟಿವಿ ಅಳವಡಿಕೆಯಿಂದ ಹಿಡಿದು ಕೆರೆಯ ನಾಲ್ಕು ಮೂಲೆಗಳಲ್ಲಿ ಸಂಚಾರಿ ವಿಸರ್ಜನಾ ಟ್ಯಾಂಕರ್‌ಗಳ ನಿಯೋಜನೆಯವರೆಗೆ ಅಗತ್ಯ ಕ್ರಮಗಳನ್ನು ಕೈಗೊಳ್ಳಲಾಗಿದೆ ಎಂದು ಸಚಿವ ರಿಜ್ವಾನ್ ಅರ್ಷದ್ ಅವರು ಸೋಮವಾರ ಹೇಳಿದ್ದಾರೆ. ಗಣೇಶ ಹಬ್ಬಕ್ಕೆ ಇನ್ನೇನು ಒಂದು ವಾರ ಬಾಕಿಯಿದ್ದು, ಸಾವಿರಾರು ಗಣೇಶ ಮೂರ್ತಿಗಳು ವಿಸರ್ಜನೆಗೆ ಆಗಮಿಸುವ ನಿರೀಕ್ಷೆಯಿದೆ. ಈ ಹಿನ್ನೆಲೆಯಲ್ಲಿ ಹಳೆಯ ಮದ್ರಾಸ್ ರಸ್ತೆಯಲ್ಲಿರುವ ಎಂಇಜಿ ಮತ್ತು ಮೆಟಲ್ ಲ್ಯಾಂಪ್ಸ್ ಸಂಪರ್ಕಿಸುವ ಕೆನ್ಸಿಂಗ್ಟನ್ ರಸ್ತೆಯನ್ನು ಬಂದ್ ಮಾಡಲು ಬೆಂಗಳೂರು ಕೇಂದ್ರ ನಗರ ಪಾಲಿಕೆ ನಿರ್ಧರಿಸಿದೆ.

ಗಣೇಶ ಮೂರ್ತಿಗಳನ್ನು ಸಾಗಿಸುವ ವಾಹನಗಳಿಗೆ ಮಾತ್ರ ಈ ರಸ್ತೆಯಲ್ಲಿ ಸಂಚರಿಸಲು ಅವಕಾಶ ನೀಡಲಾಗುತ್ತದೆ. ಕೆರೆ ಸುತ್ತಲಿನ ನಾಲ್ಕು ಮೂಲೆಗಳಲ್ಲಿ ಸಂಚಾರಿ ವಿಸರ್ಜನಾ ಟ್ಯಾಂಕ್‌ಗಳನ್ನು ನಿಯೋಜಿಸಲು ಅಧಿಕಾರಿಗಳು ಯೋಜನೆ ರೂಪಿಸಿದ್ದಾರೆ. ಭಕ್ತರ ಹಿತದೃಷ್ಟಿಯಿಂದ ಹಾಗೂ ಹೆಚ್ಚಿನ ಸಂಖ್ಯೆಯಲ್ಲಿ ಸಣ್ಣ ಗಣೇಶ ಮೂರ್ತಿಗಳು ವಿಸರ್ಜನೆಗೆ ಬರುವ ನಿರೀಕ್ಷೆ ಇರುವುದರಿಂದ ಸಂಚಾರಿ ಟ್ಯಾಂಕರ್‌ಗಳ ಸಾಮರ್ಥ್ಯವನ್ನು ದ್ವಿಗುಣಗೊಳಿಸಲಾಗುವುದು. ಇದರಿಂದ ಕಲ್ಯಾಣಿಯಲ್ಲಿ ಜನದಟ್ಟಣೆ ಕಡಿಮೆಯಾಗಲಿದ್ದು, ಸುರಕ್ಷತೆ ಹೆಚ್ಚಲಿದೆ ಎಂದು ಸಚಿವರು ಹೇಳಿದ್ದಾರೆ.

## ಯು-ಟರ್ನ್ ಸರ್ಕಾರ ಎಂದ ಪ್ರತಿಪಕ್ಷಗಳು!

• ಉದಯವಾಹಿನಿ, ಬೆಂಗಳೂರು


ಉದಯವಾಹಿನಿ ಚಿತ್ರ

ಮುಖ್ಯಮಂತ್ರಿ ಡಿ.ಕೆ.ಶಿವಕುಮಾರ್ ನೇತೃತ್ವದ ಸರಕಾರ ಸೆಪ್ಟೆಂಬರ್ 10 ರಂದು ಶತದಿನ ಪೂರೈಸುತ್ತಿದ್ದು, ಸಂಭ್ರಮಾಚರಣೆಗೆ ಸಿದ್ಧತೆ ಮಾಡಿಕೊಳ್ಳಲಾಗುತ್ತಿದೆ. 1980 ರ ದಶಕದಲ್ಲಿ ಆರ್. ಗುಂಡೂರಾವ್ ಅವರಿಂದ ಹಿಡಿದು ರಾಮಕೃಷ್ಣ ಹೆಗಡೆ, ಎಸ್. ಬಂಗಾರಪ್ಪ, ವೀರಪ್ಪ ಮೊಯ್ಲಿ, ಎಚ್.ಡಿ. ದೇವೇಗೌಡ, ಎಚ್.ಡಿ. ಕುಮಾರಸ್ವಾಮಿ, ಸಿದ್ದರಾಮಯ್ಯ, ಡಿ.ವಿ. ಸದಾನಂದ ಗೌಡ, ಜಗದೀಶ್ ಶೆಟ್ಟರ್ ಮತ್ತು ಬಸವರಾಜ ಬೊಮ್ಮಾಯಿ ಅವರವರೆಗೆ ಸತತ ಕರ್ನಾಟಕದ ಮುಖ್ಯಮಂತ್ರಿಗಳೆಲ್ಲರೂ ತಮ್ಮ ಸರ್ಕಾರ 100 ದಿನ ಪೂರೈಸಿದ ಹಿನ್ನೆಲೆಯಲ್ಲಿ ಹಲವು ಆಚರಣೆಗಳನ್ನು ಆಯೋಜಿಸಿದ್ದರು.

ಏಕೆಂದರೆ ಶತ ದಿನೋತ್ಸವ ಎಂಬುದು ಮೈಲಿಗಲ್ಲಾಗಿದೆ.ಕುಣಿಗಲ್ ಶಾಸಕ ಎಚ್.ಡಿ. ರಂಗನಾಥ್ ಸರ್ಕಾರವು ಏನು ಪ್ಲಾನ್ ಮಾಡಿದೆ ಎಂಬುದರ ಮುನ್ನೋಟವನ್ನು ನೀಡಿದರು. ರೈತರಿಗೆ ಪ್ರಮುಖ ಘೋಷಣೆಗಳು ಇರುತ್ತವೆ ಎಂದು ಅವರು ಹೇಳಿದರು, ಶಿಕ್ಷಣ ಸಂಬಂಧಿತ ಆಚರಣೆಗಳು ಮತ್ತು ಆರೋಗ್ಯ ಕ್ಷೇತ್ರದಲ್ಲಿಯೂ ಸಹ ಕೆಲವು ಪ್ರಮುಖ ಘೋಷಣೆಗಳು ಬರುವ ನಿರೀಕ್ಷೆಯಿದೆ ಎಂದು ಹೇಳಿದರು. ಈ ಮೈಲಿಗಲ್ಲು ಗಣನೀಯ ಪರಿಹಾರವನ್ನು ನೀಡುತ್ತದೆಯೇ ಅಥವಾ ಹೆಚ್ಚಾಗಿ ಔಪಚಾರಿಕವಾಗಿ ಉಳಿಯುತ್ತದೆಯೇ ಎಂಬುದನ್ನು ಕಾದು ನೋಡಬೇಕು. ಶಾಸಕ ಸುದ್ದಂ ದಾಸ್ ಪರಿಶಿಷ್ಟ ಜಾತಿ ಮತ್ತು ಪರಿಶಿಷ್ಟ ಪಂಗಡದ ಉಪ-ಯೋಜನೆಯ (ಎಸ್‌ಸಿಪಿ-ಟಿಎಸ್‌ಪಿ) ಪ್ರಶ್ನೆ ಎತ್ತಿದ್ದಾರೆ.

ದಲಿತ ಸಮುದಾಯವು ಸರ್ಕಾರಕ್ಕೆ ಮತದಾರರ ಯಾವುದೇ ಇತರ ವರ್ಗಕ್ಕಿಂತ ಹೆಚ್ಚಿನ ಬೆಂಬಲವನ್ನು ನೀಡಿದೆ ಎಂದು ವಾದಿಸಿದರು. ಎಸ್‌ಸಿಪಿ-ಟಿಎಸ್‌ಪಿ ನಿಧಿಗಳಿಗೆ ಸರ್ಕಾರವು ತನ್ನ ಬದ್ಧತೆಯನ್ನು ಬರವಣಿಗೆಯ ಜೊತೆಗೆ ಕಾರ್ಯ ರೂಪಕ್ಕೂ ತರಬೇಕು ಎಂದು ಅವರು ಹೇಳಿದರು.

## ಇಸ್ರೋ ಸಾಧನೆ ದೇಶದ ಹೆಮ್ಮೆ, ರಾಜ್ಯದಲ್ಲಿ ಬಾಹ್ಯಾಕಾಶ ತಂತ್ರಜ್ಞಾನ ಅಭಿವೃದ್ಧಿಗೆ ಕರ್ನಾಟಕದಿಂದ ಸಂಪೂರ್ಣ ಸಹಕಾರ: ಡಾ. ಅಜಯ್ ಸಿಂಗ್

• ಉದಯವಾಹಿನಿ, ಬೆಂಗಳೂರು

ಇಸ್ರೋದ ಸಾಧನೆ ದೇಶದ ಹೆಮ್ಮೆ, ಕರ್ನಾಟಕದ ಹೆಮ್ಮೆ. ಬಾಹ್ಯಾಕಾಶ ವಿಜ್ಞಾನ, ಸಂಶೋಧನೆ, ಸ್ಟಾರ್ಟ್‌ಅಪ್‌ಗಳು ಮತ್ತು ಹೊಸ ತಂತ್ರಜ್ಞಾನಗಳ ಅಭಿವೃದ್ಧಿಗೆ ಕರ್ನಾಟಕ ಸರ್ಕಾರ ಅಗತ್ಯವಿರುವ ಎಲ್ಲಾ ರೀತಿಯ ಸಹಕಾರ ನೀಡಲು ಸಿದ್ಧವಾಗಿದೆ ಎಂದು ಸಣ್ಣ ನೀರಾವರಿ ಹಾಗೂ ವಿಜ್ಞಾನ ಮತ್ತು ತಂತ್ರಜ್ಞಾನ ಸಚಿವ ಡಾ. ಅಜಯ್ ಧರಂ ಸಿಂಗ್ ಹೇಳಿದ್ದಾರೆ.

ಇತ್ತೀಚಿನ ಯಶಸ್ವಿ ಉಡಾವಣೆ ಹಿನ್ನೆಲೆ ಅಜಯ್‌ಸಿಂಗ್ ಅವರು ಮಂಗಳವಾರ ಬೆಂಗಳೂರಿನಲ್ಲಿ ಇಸ್ರೋ ಅಧ್ಯಕ್ಷ ಹಾಗೂ ಬಾಹ್ಯಾಕಾಶ ಇಲಾಖೆಯ ಕಾರ್ಯದರ್ಶಿ ಡಾ. ವಿ. ನಾರಾಯಣನ್ ಅವರನ್ನು ಭೇಟಿ ಮಾಡಿ ಅಭಿನಂದಿಸಿದರು. ಇಸ್ರೋದ ವಿಜ್ಞಾನಿಗಳು, ಎಂಜಿನಿಯರ್‌ಗಳು ಮತ್ತು ತಾಂತ್ರಿಕ ತಂಡದ ಸಾಧನೆಯನ್ನು ಶ್ಲಾಘಿಸಿದ ಸಚಿವರು, ಈ ಯಶಸ್ಸು ಭಾರತದ ವೈಜ್ಞಾನಿಕ ಹಾಗೂ ತಾಂತ್ರಿಕ ಸಾಮರ್ಥ್ಯಕ್ಕೆ ಮತ್ತೊಂದು ಮಹತ್ವದ ಮೈಲಿಗಲ್ಲಾಗಿದೆ ಎಂದು ಹೇಳಿದರು. ಭೇಟಿಯ ವೇಳೆ ಮುಖ್ಯಮಂತ್ರಿ ಡಿ.ಕೆ. ಶಿವಕುಮಾರ್ ಅವರು ದೂರವಾಣಿ ಮೂಲಕ ಇಸ್ರೋ ಅಧ್ಯಕ್ಷರಾದ ಡಾ. ವಿ. ನಾರಾಯಣನ್ ಅವರೊಂದಿಗೆ ಮಾತುಕತೆ ನಡೆಸಿದರು.

ಇತ್ತೀಚಿನ ಯಶಸ್ವಿ ಉಡಾವಣೆಗೆ ಇಸ್ರೋ ಅಧ್ಯಕ್ಷರು ಹಾಗೂ ಇಡೀ ತಂಡವನ್ನು ಮುಖ್ಯಮಂತ್ರಿ ಅಭಿನಂದಿಸಿದರು. ಇಸ್ರೋ ಮತ್ತು ಕರ್ನಾಟಕ ಸರ್ಕಾರದ ನಡುವಿನ ವಿಜ್ಞಾನ ಮತ್ತು ತಂತ್ರಜ್ಞಾನ ಸಹಕಾರವನ್ನು ಇನ್ನಷ್ಟು ಬಲಪಡಿಸುವ ಅಗತ್ಯವಿದೆ ಎಂದು ಸಚಿವರು ಹೇಳಿದರು. ಕರ್ನಾಟಕವು ಇಸ್ರೋದ ಐತಿಹಾಸಿಕ ತವರು. ಭಾರತದ ಮುಂದಿನ ಮತ್ತುಬೆಳವಣಿಗೆಯಲ್ಲೂ ಕರ್ನಾಟಕ ಮುಂಚೂಣಿಯಲ್ಲಿ ಇರಬೇಕು. ಈ ದಿಸೆಯಲ್ಲಿ ಇಸ್ರೋದ ಮಾರ್ಗದರ್ಶನ ಮತ್ತು ಸಹಕಾರ ಅತ್ಯಂತ ಮಹತ್ವದ್ದು, ಎಂದು ಹೇಳಿದರು. ಇದೇ ವೇಳೆ, ಈ ತಿಂಗಳ ಕೊನೆಯ ವಾರದಲ್ಲಿ ಮುಖ್ಯಮಂತ್ರಿಗಳೊಂದಿಗೆ ಸಭೆ ಆಯೋಜಿಸುವುದಾಗಿ ತಿಳಿಸಿದರು.

# ಅವಧಿ ಮೀರಿದ, ತಪ್ಪು ಲೇಬಲ್ ಆಹಾರ ಪದಾರ್ಥಗಳು ವಶಕ್ಕೆ

## ದಾಖಲೆಗಳ ಆಧಾರದ ಮೇಲೆ ಆಹಾರ ಸಂಗ್ರಹಣೆ ಮತ್ತು ಪೂರೈಕೆ ಕೇಂದ್ರಗಳನ್ನು ಅಧಿಕಾರಿಗಳು ಪರಿಶೀಲಿಸಿದರು.

• ಉದಯವಾಹಿನಿ, ಬೆಂಗಳೂರು

**1** ಅವಧಿ ಮೀರಿದ ಉತ್ಪನ್ನಗಳು ಪತ್ತೆ
**2** 56 ಲಕ್ಷ ಮೌಲ್ಯದ ಉತ್ಪನ್ನಗಳು
**3** ಇನ್‌ಸ್ಟಾಮಾರ್ಟ್ ಕೇಂದ್ರ ಬಂದ್

ಆಹಾರ ಸುರಕ್ಷತೆ ಮತ್ತು ಔಷಧ ಆಡಳಿತ ಇಲಾಖೆ ವಿಶೇಷ ಜಾರಿ ಕಾರ್ಯಾಚರಣೆ ನಡೆಸಿ, ಬೆಂಗಳೂರಿನ ಅಮೆಜಾನ್ ಮತ್ತು ಸ್ವಿಗ್ಗಿ ಇನ್‌ಸ್ಟಾಮಾರ್ಟ್ ಕೇಂದ್ರಗಳಿಂದ ಅವಧಿ ಮೀರಿದ ಹಾಗೂ ಸರಿಯಾಗಿ ಲೇಬಲ್ ಮಾಡದ ಆಹಾರ ಉತ್ಪನ್ನಗಳನ್ನು ವಶಪಡಿಸಿಕೊಂಡಿದೆ.ಆಹಾರ ಸುರಕ್ಷತೆ ಮತ್ತು ಗುಣಮಟ್ಟ ಕಾಯ್ದೆ, 2006 ಹಾಗೂ ಔಷಧ ಮತ್ತು ಸೌಂದರ್ಯವರ್ಧಕಗಳ ಕಾಯ್ದೆ, 1940ರ ಅಡಿಯಲ್ಲಿ ನೇಮಕಗೊಂಡ ಅಧಿಕಾರಿಗಳು ಹಾಗೂ ಆಹಾರ ಸುರಕ್ಷತಾ ಅಧಿಕಾರಿಗಳು ಈ ತಪಾಸಣೆ ನಡೆಸಿದರು.

ಬೆಂಗಳೂರಿನಲ್ಲಿ ಆಯೋಜಿಸಲಾಗಿದ್ದ 'ಪೆಪ್ಪೈಡ್ ಪಾರ್ಟಿ'ಗೆ ಸಂಬಂಧಿಸಿದಂತೆ ಸಲ್ಲಿಸಲಾಗಿದ್ದ ದಾಖಲೆಗಳ ಆಧಾರದ ಮೇಲೆ ಆಹಾರ ಸಂಗ್ರಹಣೆ ಮತ್ತು ಪೂರೈಕೆ ಕೇಂದ್ರಗಳನ್ನು ಅಧಿಕಾರಿಗಳು ಪರಿಶೀಲಿಸಿದರು. ಆನ್‌ಲೈನ್ ಮತ್ತು ಇ-ಕಾಮರ್ಸ್ ವೇದಿಕೆಗಳ ಮೂಲಕ ಮಾರಾಟವಾಗುವ ಉತ್ಪನ್ನಗಳ ಲೇಬಲಿಂಗ್, ತಯಾರಿಕೆ ಹಾಗೂ ಮುಕ್ತಾಯ ದಿನಾಂಕ, ಬಳಕೆಯ ಅವಧಿ ಮತ್ತು ಇತರ ಆಹಾರ ಸುರಕ್ಷತಾ ಮಾನದಂಡಗಳ ಕುರಿತು ತಪಾಸಣೆ ನಡೆಸಲಾಯಿತು. ಅಗತ್ಯ ಪರವಾನಗಿ ಇಲ್ಲದೆ ಔಷಧಗಳನ್ನು ಸಂಗ್ರಹಿಸಿರುವ ಬಗ್ಗೆಯೂ ಪರಿಶೀಲನೆ ನಡೆಸಲಾಯಿತು. ದೇವನಹಳ್ಳಿಯ ಹೈಟೆಕ್ ಡಿಫೆನ್ಸ್ ಅಂಡ್ ಏರೋಸ್ಪೇಸ್ ಪಾರ್ಕ್‌ನಲ್ಲಿರುವ ಅಮೆಜಾನ್‌ನ


ಉದಯವಾಹಿನಿ ಚಿತ್ರ

**ಆವರಣದಲ್ಲಿ ಸುಮಾರು 56 ಲಕ್ಷ ರೂ ಮೌಲ್ಯದ ಆಹಾರ ಉತ್ಪನ್ನಗಳನ್ನು ಸಂಗ್ರಹಿಸಲಾಗಿತ್ತು ಎಂದು ಮಾಲೀಕರು ತಿಳಿಸಿದ್ದಾರೆ. ಈ ಹಿನ್ನೆಲೆಯಲ್ಲಿ ಆವರಣದ ವಿರುದ್ಧ ಕ್ರಮ ಕೈಗೊಳ್ಳಲಾಗಿದೆ ಎಂದು ಇಲಾಖೆ ತಿಳಿಸಿದೆ.**

ಕೇಂದ್ರದಲ್ಲಿ ತಪ್ಪು ಅಥವಾ ಅಪೂರ್ಣ ಲೇಬಲಿಂಗ್ ಹೊಂದಿದ್ದ 14 ಲಕ್ಷ ರೂ ಮೌಲ್ಯದ ಆಹಾರ ಉತ್ಪನ್ನಗಳು ಹಾಗೂ 10 ಲಕ್ಷ ರೂ ಮೌಲ್ಯದ ಅವಧಿ ಮೀರಿದ ಆಹಾರ ಉತ್ಪನ್ನಗಳನ್ನು ಅಧಿಕಾರಿಗಳು ವಶಪಡಿಸಿಕೊಂಡರು. ಒಟ್ಟು 24 ಲಕ್ಷ ರೂ ಮೌಲ್ಯದ ಆಹಾರ ಉತ್ಪನ್ನಗಳನ್ನು ವಶಪಡಿಸಿಕೊಳ್ಳಲಾಗಿದೆ. ಅಗತ್ಯ ಪರವಾನಗಿ ಇಲ್ಲದೆ ಸಂಗ್ರಹಿಸಲಾಗಿದ್ದ

ಈ ಕೇಂದ್ರದಲ್ಲಿ ಸುಮಾರು 1 ಕೋಟಿ ರೂ ಮೌಲ್ಯದ ಅವಧಿ ಮೀರಿದ ಹಾಗೂ ಸರಿಯಾಗಿ ಲೇಬಲ್ ಮಾಡದ ಉತ್ಪನ್ನಗಳು ಪತ್ತೆಯಾಗಿದ್ದು, ತನಿಖೆ ಮುಂದುವರಿದಿದೆ ಎಂದು ಇಲಾಖೆ ತಿಳಿಸಿದೆ.

### ಉತ್ಪನ್ನಗಳನ್ನು ವಶ

**ಬೆಂಗಳೂರು ಗ್ರಾಮಾಂತರ ಜಿಲ್ಲೆಯ ಹೊಸಕೋಟೆಯಲ್ಲಿರುವ ಸ್ವಿಗ್ಗಿ ಇನ್ ಸ್ಟಾಮಾರ್ಟ್ ಕೇಂದ್ರವನ್ನೂ ಇಲಾಖೆ ಪರಿಶೀಲಿಸಿತು. ಇಲ್ಲಿ 42 ಲಕ್ಷ ರೂ ಮೌಲ್ಯದ ಅವಧಿ ಮೀರಿದ ಆಹಾರ ಉತ್ಪನ್ನಗಳನ್ನು ವಶಪಡಿಸಿಕೊಳ್ಳಲಾಗಿದೆ.**

ಆರೋಪದ ಮೇರೆಗೆ 2.45 ಲಕ್ಷ ರೂ ಮೌಲ್ಯದ ಔಷಧಗಳನ್ನೂ ವಶಪಡಿಸಿಕೊಳ್ಳಲಾಯಿತು.ಆನೆಕಲ್ ತಾಲ್ಲೂಕಿನಲ್ಲಿ ಇರುವ ಅಮೆಜಾನ್‌ನ ಕೇಂದ್ರದಲ್ಲಿ ತಪ್ಪು ಅಥವಾ ಅಪೂರ್ಣ ಲೇಬಲಿಂಗ್ ಹೊಂದಿದ್ದ 19 ಲಕ್ಷ ರೂ ಮೌಲ್ಯದ ಆಹಾರ ಉತ್ಪನ್ನಗಳು ಹಾಗೂ 13 ಲಕ್ಷ ರೂ ಮೌಲ್ಯದ ಅವಧಿ ಮೀರಿದ ಉತ್ಪನ್ನಗಳನ್ನು ವಶಪಡಿಸಿಕೊಳ್ಳಲಾಗಿದೆ. ಒಟ್ಟು 32 ಲಕ್ಷ ರೂ ಮೌಲ್ಯದ ಆಹಾರ ಉತ್ಪನ್ನಗಳನ್ನು ವಶಪಡಿಸಿಕೊಳ್ಳಲಾಗಿದೆ. ಅಗತ್ಯ ಪರವಾನಗಿ ಇಲ್ಲದೆ ಸಂಗ್ರಹಿಸಲಾಗಿದ್ದ 1.57 ಲಕ್ಷ ರೂ ಮೌಲ್ಯದ ಔಷಧಗಳನ್ನೂ ವಶಪಡಿಸಿಕೊಳ್ಳಲಾಗಿದೆ. ಲಿಂಗರಾಜಪುರಂನ ಲಿಯೋ 7 ಎಂಟರ್‌ಪ್ರೈಸಸ್‌ನಲ್ಲಿ ಅಧಿಕಾರಿಗಳು ಅವಧಿ ಮೀರಿದ ಹಾಗೂ ಮುಕ್ತಾಯದ ಹಂತದಲ್ಲಿದ್ದ ಆಹಾರ ಉತ್ಪನ್ನಗಳನ್ನು ಪತ್ತೆಹಚ್ಚಿದ್ದಾರೆ. ಇವುಗಳಲ್ಲಿ ಪೌಷ್ಟಿಕಾಂಶಯುಕ್ತ ಉತ್ಪನ್ನಗಳು, ಪಾನೀಯಗಳು, ಚಾಕೊಲೇಟ್‌ಗಳು, ಸಿಹಿತಿಂಡಿಗಳು, ತುಪ್ಪ, ನಟ್ಸ್ ಮತ್ತು ಬೀಜಗಳು ಸೇರಿವೆ.

# ರಾಜಕೀಯಕ್ಕೆ ಕುಟುಂಬವನ್ನು ಎಳೆಯಬೇಡಿ - ಜೆಡಿಎಸ್ ಆಗ್ರಹ

• ಉದಯವಾಹಿನಿ, ರಾಮನಗರ

ಜನರು ಉತ್ತಮ ಕೆಲಸ ಮಾಡಲೆಂದು ಶಾಸಕರನ್ನು ಆಯ್ಕೆಮಾಡಿದ್ದಾರೆ. ಆದರೆ ಜನರ ವಿರೋಧದಿಂದ ತಪ್ಪಿಸಿಕೊಳ್ಳಲು ವಿನಾಕಾರಣ ಜೆಡಿಎಸ್ ಮುಖಂಡರನ್ನು ಮತ್ತು ವೈಯಕ್ತಿಕ ವಿಚಾರಗಳನ್ನು ವಿರೋಧ ಮಾಡುವುದರಲ್ಲಿ ಕಾಲ ಕಳೆಯುತ್ತಿದ್ದಾರೆ ಎಂದು ಪುರಸಭೆ ಸದಸ್ಯ ದೇವರಾಜ್ ಕಿಡಿಕಾರಿದರು. ಬಿಡದಿಯಲ್ಲಿ ಸುದ್ದಿಗೋಷ್ಠಿಯಲ್ಲಿ ಮಾತನಾಡಿದ ಅವರು, ಸರ್ಕಾರದ ಜನ ವಿರೋಧಿ ನೀತಿಯಿಂದ ತಪ್ಪಿಸಿಕೊಳ್ಳಲು ವಿನಾಕಾರಣ ಕುಮಾರಸ್ವಾಮಿ ವಿರುದ್ಧ ಮಾತನಾಡುತ್ತಿದ್ದಾರೆ. ಕುಮಾರಸ್ವಾಮಿ ಸಿಎಂ ಆಗಿದ್ದಾಗ ಬಿಡದಿ ಪಟ್ಟಣದಲ್ಲಿ ಯುಜಿಡಿ ಕೆಲಸ ಪ್ರಾರಂಭಿಸಲಾಯಿತು. ಇದನ್ನು ಪೂರ್ಣಗೊಳಿಸಲು ಆಗುತ್ತಿಲ್ಲ. ಬೈರಮಂಗಲ ಎಡದಂಡೆ, ಬಲದಂಡೆ ಕಾಮಗಾರಿ



ಪ್ರಾರಂಭಿಸಿದ್ದು ಎ.ಮಂಜು ಶಾಸಕರಾಗಿದ್ದ ಅವಧಿಯಲ್ಲಿ ಎಂದರು. ಕುಮಾರಸ್ವಾಮಿ ಸಿಎಂ ಆಗಿದ್ದಾಗ ಕೇತುಗಾನಹಳ್ಳಿ ಅಭಿವೃದ್ಧಿಗೆ ಬಂದಿದ್ದ 10 ಕೋಟಿ ಅನುದಾನದಲ್ಲಿ 4 ಕೋಟಿ ಅನುದಾನವನ್ನು ಹಿಂದಕ್ಕೆ ಪಡೆಯಲಾಗಿದೆ. ಅಭಿವೃದ್ಧಿ ಕುಂಟಿತವಾಗುತ್ತಿರುವುದು ಯಾರಿಂದ ಎಂದು ಜನರಿಗೆ ಗೊತ್ತಿದೆ. ಇತ್ತೀಚೆಗೆ ಇಲ್ಲಿನ ಕೆಲವು ಕಾಂಗ್ರೆಸ್ ಮುಖಂಡರು ವೈಯಕ್ತಿಕವಾಗಿ ಕುಟುಂಬದ ಹೆಸರಿಗೆ ಕಳಂಕ ತರುವ ಕೆಲಸ ನಡೆಯುತ್ತಿದ್ದು ಇದು ರಾಜಕಾರಣದಲ್ಲಿ ಉತ್ತಮ ಬೆಳವಣಿಗೆ ಅಲ್ಲ ಎಂದರು.ಎ.ಮಂಜು ಅವರನ್ನು ತಿರಸ್ಕರಿಸಿರುವುದನ್ನು ನಾವು ಒಪ್ಪಿಕೊಳ್ಳುತ್ತೇವೆ. ನಿಮ್ಮನ್ನು ಆಯ್ಕೆ ಮಾಡಿದ ಜನರಿಗೆ ಕಳೆದ ಮೂರುವರೆ ವರ್ಷಗಳಿಂದ ಕ್ಷೇತ್ರದಲ್ಲಿ ಏನು ಅಭಿವೃದ್ಧಿ ಆಗಿದೆ ಎಂಬುದನ್ನು ತಿಳಿಸಿ ಎಂದು ಪ್ರಶ್ನಿಸಿದರು.

ಮುಖಂಡ ಇಟ್ಟಮಡು ಗೋಪಾಲ್ ಮಾತನಾಡಿ, ಮಾಗಡಿ ಕ್ಷೇತ್ರದ ಮತದಾರರು ಈಗಾಗಲೆ ಬದಲಾವಣೆಗೆ ತೀರ್ಮಾನ ಮಾಡಿದ್ದಾರೆ. 2028 ರ ಚುನಾವಣೆಯಲ್ಲಿ ಎ.ಮಂಜು ಅವರ ಗೆಲುವನ್ನು ತಪ್ಪಿಸಲು ಯಾರಿಂದಲೂ ಸಾಧ್ಯವಿಲ್ಲ. ಜಿಬಿಡಿಎ ಅಧ್ಯಕ್ಷ ನಟರಾಜ್ ಅವರು ಕಾಂಗ್ರೆಸ್ ಮುಖಂಡರನ್ನು ಮೆಚ್ಚಿಸಲು ಜೆಡಿಎಸ್ ಮುಖಂಡರ ಬಗ್ಗೆ ತುಚ್ಚವಾಗಿ ಟೀಕೆ ಮಾಡುವುದನ್ನು ಕೂಡಲೆ ನಿಲ್ಲಿಸಬೇಕೆಂದು ಆಗ್ರಹಿಸಿದರು.

ಪುರಸಭೆ ಮಾಜಿ ಅಧ್ಯಕ್ಷ ಹರಿಪ್ರಸಾದ್ ಮಾತನಾಡಿ, ಶಾಸಕ ಬಾಲಕೃಷ್ಣ ಅವರ ಬಗ್ಗೆ ಎಲ್ಲಿಯೂ ವೈಯಕ್ತಿಕ ವಿರೋಧ ಮಾಡಿಲ್ಲ. ತಾವು ಅಧ್ಯಕ್ಷರಾಗಿದ್ದ ಸಂದರ್ಭದಲ್ಲಿ ಅವರ ಗಮನಕ್ಕೆ ಬರದೆ ಯಾವುದೆ ಕೆಲಸಗಳನ್ನು ಮಾಡಿಲ್ಲ.

ಪಟ್ಟಣದ ಅಭಿವೃದ್ಧಿಗೆ ವಿಚಾರದಲ್ಲಿ ಎಂದಿಗೂ ರಾಜಕಾರಣ ಮಾಡಿಲ್ಲ. ಇದೆ ರೀತಿ ಅವರು ಸಹ ನಡೆದುಕೊಳ್ಳಬೇಕು ಎಂದರು.ಪುರಸಭೆ ಮಾಜಿ ಸದಸ್ಯ ಕುಮಾರ್, ಪ್ರಮುಖರಾದ ರಾಜೇಶ್, ರಾಜಣ್ಣ, ಮುನಿತಿಮ್ಮಣ್ಣ, ಧನಂಜಯ ಮತ್ತಿತರರು ಇದ್ದರು.

# ಅ.24 ಮತ್ತು 25 ರಂದು ಚಾ.ನಗರದಲ್ಲಿ ಅಂತರರಾಷ್ಟ್ರೀಯ ಬೌದ್ಧ ಮಹಾಸಮ್ಮೇಳನ

## ನಾಲ್ಕು ರಥಗಳಲ್ಲಿ ಬೌದ್ಧ ಭಿಕ್ಕು, ಉಪಾಸಕರು, ಸಂಚಾಲಕರು ಸಕ್ರಿಯವಾಗಿ ಭಾಗವಹಿಸಲಿದ್ದಾರೆ

• ಉದಯವಾಹಿನಿ, ಚಾಮರಾಜನಗರ

1 ಬುದ್ಧ ಪ್ರಚಾರ ರಥಗಳ ಚಾಲನೆ
2 ಸಂಘಂ ನವಮಿ ವಿಂಗಡಣೆ
3 109 ಹಳ್ಳಿಗಳನ್ನು 26 ದಿನಗಳು

ಅಂತರರಾಷ್ಟ್ರೀಯ ಬೌದ್ಧ ಮಹಾಸಮ್ಮೇಳನ-2026 ಚಾಮರಾಜನಗರದಲ್ಲಿ ಅ. 24 ಮತ್ತು 25 ರಂದು ಎರಡು ದಿನಗಳ ಅದ್ದೂರಿಯಾಗಿ ನಡೆಯಲಿದ್ದು, ಇಂದಿನಿಂದ ಜಿಲ್ಲೆಯಾದ್ಯಂತ ಪ್ರಚಾರ ರಥಗಳು ಚಾಲನೆ ಗೊಳ್ಳಲಿದೆ ಎಂದು ಅಂತರರಾಷ್ಟ್ರೀಯ ಬೌದ್ಧ ಮಹಾಸಮ್ಮೇಳನ ಅಚರಣಾ ಸಮಿತಿಯ ಅಧ್ಯಕ್ಷರು ಅದ ಕೊಳ್ಳೇಗಾಲ ಕ್ಷೇತ್ರದ ಶಾಸಕ ಎ.ಆರ್. ಕೃಷ್ಣಮೂರ್ತಿ ತಿಳಿಸಿದರು. ನಗರದ ಜಿಲ್ಲಾ ಕಾರ್ಯನಿರತ ಪತ್ರಕರ್ತರ ಭವನದಲ್ಲಿ ಕರೆದಿದ್ದ ಪತ್ರಿಕಾಗೋಷ್ಠಿಯಲ್ಲಿ ಮಾತನಾಡಿದ ಅವರು, ಪ್ರಥಮ ಸಮ್ಮೇಳನವು ಮೈಸೂರಿನಲ್ಲಿ ಬಹಳ ಯಶಸ್ವಿಯಾಗಿ ನಡೆಯಿತು.

ಎರಡನೇ ಸಮ್ಮೇಳವವನ್ನು ಚಾಮರಾಜನಗರದಲ್ಲಿ ಮಾಡುವಂತೆ ಅಂದು ನಾನು ಸೇರಿದಂತೆ ಸಚಿವರಾದ ಸಿ. ಪುಟ್ಟರಂಗಶೆಟ್ಟಿ, ಮುಖಂಡರಾದ ವೆಂಕಟರಮಣಸ್ವಾಮಿ ಅವರಿಗೆ ಬುದ್ಧ ಧ್ವಜವನ್ನು ಹಸ್ತಾಂತರ ಮಾಡಲಾಯಿತು. ಅಂದಿನಿಂದ ಸಮ್ಮೇಳನ ಪೂರ್ವ ಸಿದ್ದತೆಗಾಗಿ ಸಭೆಗಳನ್ನು ಆಯೋಜನೆ ಮಾಡಿ, ಸಮಿತಿ, ಉಪ ಸಮಿತಿ ಹಾಗೂ ತಾಲ್ಲೂಕು ಸಮಿತಿಗಳನ್ನು ರಚನೆ ಮಾಡಿಕೊಂಡು ಕಾರ್ಯಕ್ರಮದ ಯಶಸ್ವಿಗಾಗಿ ಪಕ್ಷಾತೀತವಾಗಿ ಎಲ್ಲಾ ಮುಖಂಡರು ಶ್ರಮಿಸುತ್ತಿದ್ದೇವೆ ಎಂದರು.

**ಇಂದಿನಿಂದ ಬುದ್ಧ ಪ್ರಚಾರ ರಥಗಳ ಚಾಲನೆ :** ಜಿಲ್ಲೆಯ ಐದು ತಾಲ್ಲೂಕು ಕೇಂದ್ರಗಳಲ್ಲಿ ಇಂದಿನಿಂದ ಬುದ್ಧ ರಥ ಚಾಲನೆಗೊಳ್ಳಲಿದೆ ಜಿಲ್ಲೆಯ ವ್ಯಾಪ್ತಿಯ 403 ಗ್ರಾಮಗಳನ್ನು ಸಂಪರ್ಕ ಮಾಡಲಿದ್ದು, ನಾಲ್ಕು ರಥಗಳಲ್ಲಿ ಬೌದ್ಧ ಭಿಕ್ಕು, ಉಪಾಸಕರು, ಸಂಚಾಲಕರು ಸಕ್ರಿಯವಾಗಿ ಭಾಗವಹಿಸಲಿದ್ದಾರೆ. ಆಯಾ ಗ್ರಾಮಗಳಿಗೆ ರಥಗಳು ಆಗಮಿಸುತ್ತಿದ್ದಂತೆ, ಸ್ವಾಗತಿಸಿ, ಕಾರ್ಯಕ್ರಮದ ಬಗ್ಗೆ ಮಾಹಿತಿ ಹಾಗೂ ಬುದ್ಧ ಧಮ್ಮ ದೀಕ್ಷೆ ಪಡೆದು ಗೌರವಯುತವಾಗಿ ಅಯಾ ಗ್ರಾಮಗಳ ಮುಖಂಡರು, ಸಂಘ ಸಂಸ್ಥೆಗಳ ಮುಖಂಡರು ಬಿಳ್ಕೊಡಲಿದ್ದಾರೆ. ಚಾ.ನಗರ ತಾಲ್ಲೂಕಿನಲ್ಲಿ 130 ಹಳ್ಳಿಗಳನ್ನು 32 ದಿನಗಳು ಸಂಚಾರ, ಗುಂಡ್ಲುಪೇಟೆ ತಾಲ್ಲೂಕಿನಲ್ಲಿ 109 ಹಳ್ಳಿಗಳನ್ನು 26 ದಿನಗಳು, ಕೊಳ್ಳೇಗಾಲ ತಾಲ್ಲೂಕಿನ 89 ಹಳ್ಳಿಗಳಲ್ಲಿ 15 ದಿನಗಳು, ಯಳಂದೂರು ತಾಲ್ಲೂಕಿನ 30 ಹಳ್ಳಿಗಳಿಗೆ 8 ದಿನಗಳು ಹಾಗೂ ಹನೂರು ತಾಲ್ಲೂಕಿನಲ್ಲಿ 55 ಗ್ರಾಮಗಳಲ್ಲಿ 13 ದಿನಗಳ ಕಾಲ ಬುದ್ಧ ರಥ ಪ್ರಚಾರ ಮಾಡಲಿದೆ.


ಉದಯವಾಹಿನಿ ಚಿತ್ರ

ಆಯಾ ಕ್ಷೇತ್ರಗಳ ಶಾಸಕರು, ಮುಖಂಡರು ಚಾಲನೆ ನೀಡಲಿದ್ದು, ಜಿಲ್ಲೆಯಾದ್ಯಂತ ಬುದ್ಧ ರಥ ಆಗಮಿಸಿದಾಗ ಎಲ್ಲಾ ವರ್ಗದವರು, ಸರ್ವ ಧರ್ಮದವರು ಭಾಗವಹಿಸುವುದರ ಜೊತೆಗೆ ಸಮ್ಮೇಳನ ಯಶಸ್ವಿಗೆ ಧಮ್ಮ ದಾನ ಮಾಡಬೇಕೆಂದು ಎ.ಆರ್.ಕೃಷ್ಣಮೂರ್ತಿ ಮನವಿ ಮಾಡಿದರು. ಪತ್ರಿಕಾಗೋಷ್ಠಿಯಲ್ಲಿ ಸಮಿತಿಯ ಸಂಚಾಲಕರಾದ ವೆಂಕಟರಮಣಸ್ವಾಮಿ (ಪಾಪು) ಮುಳ್ಳೂರು ಶಿವಮಲ್ಲು, ಕೋಡಿಉಗನೆ ಮಂಜುನಾಥ್, ಸಿದ್ದರಾಜು, ಯಳಂದೂರು ಸಿದ್ದರಾಜು, ಎನ್. ನಾಗಯ್ಯ, ಸುಭಾಶ್ ಮಾಡ್ರಹಳ್ಳಿ ಇದ್ದರು.

**ಅನೇಕ ಗಣ್ಯರು ಭಾಗಿ**

ಸಮ್ಮೇಳನವು ನಗರದ ಡಾ. ಬಿ.ಆರ್. ಅಂಬೇಡ್ಕರ್ ಕ್ರೀಡಾಂಗಣದಲ್ಲಿ ನಡೆಯಲಿದ್ದು, ಅಂತರರಾಷ್ಟ್ರೀಯ ಭೌದ್ಧ ಬಿಕ್ಕು, ರಾಷ್ಟ್ರೀಯ ಬೌದ್ಧ ಧರ್ಮ ಪ್ರಚಾರಕರು, ಡಾ.ಬಿ.ಆರ್. ಅಂಬೇಡ್ಕರ್ ಅವರು ಮೊಮ್ಮಗ ಯಶವಂತ್ ರಾವ್ ಅಂಬೇಡ್ಕರ್ ಸೇರಿದಂತೆ ಅನೇಕ ಗಣ್ಯರು ಭಾಗವಹಿಸಲಿದ್ದಾರೆ.

**ಎರಡು ದಿನಗಳ ಕಾಲ ನಡೆಯುವ ಸಮ್ಮೇಳನದಲ್ಲಿ ಬುದ್ಧ ನವಮಿ, ಧಮ್ಮ ನವಮಿ, ಸಂಘಂ ನವಮಿ ಎಂದು ವಿಂಗಡಣೆ ಮಾಡಿಕೊಳ್ಳಲಾಗುತ್ತದೆ. ಸಂಪೂರ್ಣವಾಗಿ ಬುದ್ಧನ ವಿಚಾರಧಾರೆಗಳು ಹಾಗೂ ಬುದ್ಧ ಪಂಚ ಶೀಲ ತತ್ವಗಳ ಪಾಲನೆ ಅಂಬೇಡ್ಕರ್ ಅವರು ಬುದ್ಧನಡೆಗೆ ಕುರಿತು ಕಾರ್ಯಕ್ರಮಗಳು ಅರ್ಥಪೂರ್ಣವಾಗಿ ನಡೆಯಲಿದೆ. -ಶಾಸಕ ಎ.ಆರ್. ಕೃಷ್ಣಮೂರ್ತಿ**

# ಗುಣಮಟ್ಟದ ಹಾಲು ಸರಬರಾಜು ಮಾಡಿ ಡೈರಿ ಉಳಿಸಿ: ಡಾಲು ರವಿ

• ಉದಯವಾಹಿನಿ, ಕೆ.ಆರ್.ಪೇಟೆ

ಹಾಲು ಉತ್ಪಾದಕರಿಗೆ ಮಂಡ್ಯ ಹಾಲು ಒಕ್ಕೂಟ ನೂರಾರು ಸವಲತ್ತುಗಳನ್ನು ನೀಡುತ್ತಿದ್ದು ಅವುಗಳನ್ನು ಸದ್ಬಳಕೆ ಮಾಡಿಕೊಂಡು ಗುಣಮಟ್ಟದ ಹಾಲನ್ನು ಡೈರಿಗೆನೀಡುವ ಮೂಲಕ ಸಂಘವನ್ನು ಪ್ರಗತಿ ಕಡೆಗೆ ಕೊಂಡೊಯ್ಯಬೇಕು ಎಂದು ಮನ್ ಮುಲ್ ನಿರ್ದೇಶಕ ಡಾಲುರವಿ ಅಭಿಪ್ರಾಯಪಟ್ಟರು.

ಅವರು ತಾಲ್ಲೂಕಿನ ಶೀಳನೆರೆ ಹೋಬಳಿಯ ಚನ್ನಾಪುರ ಗ್ರಾಮದಲ್ಲಿ ಏರ್ಪಡಿಸಿದ್ದ ಹಾಲು ಉತ್ಪಾದಕರ ಮಹಿಳಾ ಸಹಕಾರ ಸಂಘಧ 2025-26ನೇ ಸಾಲಿನ ಸರ್ವಸದಸ್ಯರ ವಾರ್ಷಿಕ ಮಹಾಸಭೆಯನ್ನು ಉದ್ದೇಶಿಸಿ ಮಾತನಾಡಿದರು.

ರೈತರು ಆಧುನಿಕ ಹೈನುಗಾರಿಕಾ ಪದ್ದತಿಗಳನ್ನು ಅಳವಡಿಸಿಕೊಂಡು ಹಾಲು ಉತ್ಪಾದನೆಯನ್ನು ಹೆಚ್ಚಿಸಬೇಕು. ಒಕ್ಕೂಟವು ಉತ್ಪಾದಕರಿಗೆ ಕ್ಷೀರ ಸಂಜೀವಿನಿ ಮೂಲಕ ಮತ್ತು ಸದಸ್ಯರ ಅಕಾಲಿಕ ಮರಣಕ್ಕೆ 30000 ಆರ್ಥಿಕ ಸಹಾಯ. ಕಟ್ಟಡ ನಿರ್ಮಾಣಕ್ಕೆ ಒಕ್ಕೂಟದಿಂದ ನೆರವು.


ಉದಯವಾಹಿನಿ ಚಿತ್ರ

ವಿಮೆ ಮಾಡಿಸಿದ ರೈತರುಗಳ ರಾಸುಗಳಿಗೆ ಪರಿಹಾರದ ಹಣ ಹಾಗೂ ವೈದ್ಯಕೀಯ ಸೀಟು ತೆಗೆದುಕೊಂಡರೆ ಐವತ್ತು ಸಾವಿರ. ಡೆಂಟಲ್ ಡಾಕ್ಟರ್ ಓದುವ ಸದಸ್ಯರ ಮಕ್ಕಳಿಗೆ ನಲವತ್ತು ಸಾವಿರ ಹಣ. ಬಿಎಸ್‌ಸಿ ಅಗ್ರಿಕಲ್ಚರ್ ಅರಣ್ಯ. ಮೀನುಗಾರಿಕೆ. ರೇಷ್ಮೆ. ತೋಟಗಾರಿಕೆ. ಶಿಕ್ಷಣ ಪಡೆಯುವ ಹಾಲು ಉತ್ಪಾದಕರ ಮಕ್ಕಳಿಗೆ ನಲವತ್ತು ಸಾವಿರ ಹಣವನ್ನು ಒಕ್ಕೂಟದಿಂದ ನೀಡಲಾಗುತ್ತದೆ. ಹಾಲು ಕರೆಯುವ ಯಂತ್ರ. ಶೈಲೇಜ್‌ಬ್ಯಾಗ್. ಮ್ಯಾಟ್‌ಗಳು. ಮುಂತಾದ ಸವಲತ್ತುಗಳನ್ನು ನೀಡುತ್ತಿದೆ. ಎಮ್ಮೆ ಹಾಲಿಗೆ ಅರವತ್ತು ರೂಪಾಯಿ ನೀಡಲಿದೆ.

ಪರಿಶುದ್ಧ ಹಾಲಿಗೆ ಉತ್ತಮ ಬೆಲೆ ನೀಡಲಾಗುತ್ತದೆ. ಆದ್ದರಿಂದ ಹಾಲು ಉತ್ಪಾದಕರು ಗುಣಮಟ್ಟದ ಹಾಲನ್ನು ಡೈರಿಗೆ ಸರಬರಾಜು ಮಾಡಬೇಕು. ನಿಮ್ಮ ಸಂಘದಲ್ಲಿ ಆರು ಲಕ್ಷ ಹಣವಿದೆ. ಚನ್ನಾಪುರ ಗ್ರಾಮದ ಡೈರಿ ಒಂದು ವರ್ಷದಲ್ಲಿ ಐವತ್ತನಾಲ್ಕು ಲಕ್ಷಕ್ಕೂ ಅಧಿಕ ಮೌಲ್ಯದ ಖರೀದಿ ಮಾಡಲಾಗಿದೆ.

**ಅಭಿವೃದ್ದಿಗೊಳಿಸಲು ಶ್ರಮಿಸಿ**

**ಮಾರಾಟ ಐವತ್ತೊಂಭತ್ತು ಲಕ್ಷ ಆಗಿದೆ ಮೂರುಲಕ್ಷದ ಎಂಭತ್ತು ಸಾವಿರ ಆದಾಯ ಬಂದಿದೆ. ಇದರಲ್ಲಿ ಖರ್ಚು ತೆಗೆದು ಒಂದುವರೆ ಲಕ್ಷಕ್ಕೂ ಹೆಚ್ಚು ಲಾಭ ಬಂದಿರುತ್ತದೆ. ಇದೇ ರೀತಿ ಹೆಚ್ಚುಹೆಚ್ಚು ಹಾಲು ಪೂರೈಸಿ ಸಂಘವನ್ನು ಅಭಿವೃದ್ದಿಗೊಳಿಸಲು ಶ್ರಮಿಸಿ ಎಂದರು.**

# ಲಲಿತಾದ್ರಿಪುರ ರಸ್ತೆಯಲ್ಲಿ ಕಸದ ರಾಶಿ: ಸ್ಥಳಕ್ಕೆ ಉಸ್ತುವಾರಿ ಸಚಿವ ಯತೀಂದ್ರ ಭೇಟಿ

• ಉದಯವಾಹಿನಿ, ಮೈಸೂರು


ಉದಯವಾಹಿನಿ ಚಿತ್ರ

ಚಾಮುಂಡಿ ಬೆಟ್ಟದ ಸಮೀಪದ ಸಕಳ್ಳಿ-ಲಲಿತಾದ್ರಿಪುರ ಮುಖ್ಯ ರಸ್ತೆ ಕಸದ ಡಂಪಿಂಗ್ ಯಾರ್ಡ್ ಆಗಿ ಮಾರ್ಪಟ್ಟಿರುವ ಹಿನ್ನೆಲೆಯಲ್ಲಿ ಗ್ರಾಮಸ್ಥರ ಮನವಿಗೆ ಸ್ಪಂದಿಸಿ ಜಿಲ್ಲಾ ಉಸ್ತುವಾರಿ ಸಚಿವ ಡಾ. ಯತೀಂದ್ರ ಸಿದ್ದರಾಮಯ್ಯ ಅವರು ಸ್ಥಳಕ್ಕೆ ಭೇಟಿ ನೀಡಿ ಪರಿಶೀಲನೆ ನಡೆಸಿದರು. ಈ ರಸ್ತೆಯಲ್ಲಿ ಹಾರನಹಳ್ಳಿ ಸೇರಿದಂತೆ ಸುತ್ತಮುತ್ತಲಿನ ಪ್ರದೇಶಗಳಿಂದ ತಂದು ಎಲ್ಲೆಂದರಲ್ಲಿ ಕಸ ಸುರಿಯಲಾಗುತ್ತಿದೆ ಎಂಬುದು ಗ್ರಾಮಸ್ಥರ ಆರೋಪ. ಈ ಕುರಿತು ಸದ್ಯದಲ್ಲೇ ಅಧಿಕಾರಿಗಳ ಸಭೆ ಕರೆದು ಸೂಕ್ತ ಕ್ರಮ ಕೈಗೊಳ್ಳಲಾಗುವುದು ಎಂದು ಸಚಿವರು ತಿಳಿಸಿದರು. ಸ್ಥಳಕ್ಕೆ ತಾಲ್ಲೂಕು ಪಂಚಾಯಿತಿ ಕಾರ್ಯನಿರ್ವಹಣಾಧಿಕಾರಿ ಕೃಷ್ಣ, ಪಾಲಿಕೆ ಆಯುಕ್ತೆ ಸವಿತಾ ಸೇರಿದಂತೆ ಅಧಿಕಾರಿಗಳೊಂದಿಗೆ ಭೇಟಿ ನೀಡಿದ ಸಚಿವರು, ರಸ್ತೆ ಬದಿಯ ಕಸದ ರಾಶಿ ಕಂಡು ಅಧಿಕಾರಿಗಳನ್ನು ತರಾಟೆಗೆ ತೆಗೆದುಕೊಂಡು ಕೂಡಲೇ ಕ್ರಮಕ್ಕೆ ಸೂಚಿಸಿದರು. ಕಸ ಸುರಿಯುವವರ ವಿರುದ್ಧ ಕಠಿಣ ಕ್ರಮ ಹಾಗೂ ನಿಗಾವಹಿಸಲು ಅಳವಡಿಸಲಾಗುವುದು. ರಸ್ತೆಯಲ್ಲಿ ಬಿದ್ದಿರುವ ಕಸವನ್ನು ಶೀಘ್ರ ತೆರವುಗೊಳಿಸಲಾಗುವುದು ಎಂದು ಅವರು ಭರವಸೆ ನೀಡಿದರು.

# ಕೀಲುಕೋಟೆಯಲ್ಲಿ ಕೃಷ್ಣನ ಪಲ್ಲಕ್ಕಿ ಉತ್ಸವ

• ಉದಯವಾಹಿನಿ, ಕೋಲಾರ

ತ್ರೈತಸಿದ್ಧಾಂತ ಅಡಿಯಲ್ಲಿ ಪ್ರಬೋಧ ಸೇವಾ ಸಮಿತಿ ಮತ್ತು ಇಂದೂಜ್ಞಾನ ವೇದಿಕೆ ಸಮಿತಿಯ ವತಿಯಿಂದ ನಾಲ್ಕು ದಿನಗಳ ಕಾಲ ಶ್ರೀಕೃಷ್ಣ ಜನ್ಮಾಷ್ಟಮಿ ಮಹೋತ್ಸವ ಕಾರ್ಯಕ್ರಮ ನಡೆದಿದ್ದು, ನಾಲ್ಕನೇ ದಿನವಾದ ಸೋಮವಾರ ಪ್ರಮುಖ ಹಾದಿ ಬೀದಿಗಳಲ್ಲಿ ಕೋಲಾಟ ಮತ್ತು ತಲಾ ತಂಡಗಳೊಂದಿಗೆ ಶ್ರೀ ಕೃಷ್ಣ ಪಲ್ಲಕ್ಕಿ ಉತ್ಸವ ನಡೆಯಿತು. ನಗರದ ಕೀಲುಕೋಟೆಯಲ್ಲಿ ಪ್ರಬೋಧ ಸೇವಾ ಸಮಿತಿ ಪ್ರತಿವರ್ಷದಂತೆ ಈ ಬಾರಿಯೂ ಶ್ರೀಕೃಷ್ಣ ಜನ್ಮಾಷ್ಟಮಿಯನ್ನು ಅತ್ಯಂತ ಅದ್ದೂರಿಯಾಗಿ ನಡೆಸಿದ್ದು, ಕೊನೆ ದಿನ ಭಗವದ್ಗೀತಾ ಶೋಭಾ ಯಾತ್ರೆ ಹಮ್ಮಿಕೊಳ್ಳಲಾಗಿತ್ತು.

ಕಾರ್ಯಕ್ರಮದಲ್ಲಿ ನಾಗರಿಕರು ಭಕ್ತಾದಿಗಳು ಹಾಗೂ ಪ್ರಬೋಧ ಸೇವಾ ಸಮಿತಿಯ ಬೆಂಗಳೂರು ಕುಪ್ಪಂ ಬಂಗಾರು ಪಾಳ್ಯ ಮುಳಬಾಗಿಲು ನೆಲಮಂಗಲ ವಿಕೋಟ ಇತ್ಯಾದಿ ಪ್ರಾಂತ್ಯದ ಸರ್ವ ಸದಸ್ಯರು ಪಾಲ್ಗೊಂಡಿದ್ದರು. ಮೊದಲನೇ ದಿನ ಊರಿನ ಗ್ರಾಮಸ್ಥರು ಭಕ್ತಾದಿಗಳು ಆಧ್ಯಾತ್ಮಿಕ ಪ್ರಿಯರು ಜ್ಞಾನ ಜಿಜ್ಞಾಸುಗಳು ಕಾರ್ಯಕ್ರಮದಲ್ಲಿ ಪಾಲ್ಗೊಂಡಿದ್ದರು. ಬಂದಂತಹ ಮಹಿಳೆಯರಿಗೆ ಅರಿಶಿನ ಕುಂಕುಮ ಮತ್ತು ದೈವ ಗ್ರಂಥ ಸೇವ ರೂಪದಲ್ಲಿ ಕೊಡಲಾಯಿತು. ಕನ್ನಡ ಮತ್ತು ಸಂಸ್ಕೃತಿ ಇಲಾಖೆಯ ಉಪನಿರ್ದೇಶಕಿ ವಿಜಯಲಕ್ಷ್ಮಿ ಕಾರ್ಯಕ್ರಮಕ್ಕೆ ಭೇಟಿಕೊಟ್ಟು ಪೂಜೆಯಲ್ಲಿ ಪಾಲ್ಗೊಂಡಿದ್ದರು ಹಾಗೂ ಶ್ರೀ ಕೃಷ್ಣ ಜನ್ಮಾಷ್ಟಮಿಯ ವಿಶಿಷ್ಟತೆ ಗೀತೆಯ ಮಹತ್ವದ ಬಗ್ಗೆ ಬಂದಂತಹ ಭಕ್ತಾದಿಗಳಿಗೆ ಉಪನ್ಯಾಸ ನೀಡಲಾಯಿತು. ತ್ರೈತ ಸಿದ್ಧಾಂತ ಆದಿಕರ್ತ ಶ್ರೀ ಆಚಾರ್ಯ ಪ್ರಬೋದಾನಂದ ಯೋಗೀಶ್ವರರು ರಚಿಸಿರುವ ಆಧ್ಯಾತ್ಮಿಕ ತ್ರಿಮತ ರಚನೆಗಳನ್ನು ಪ್ರದರ್ಶನಕ್ಕೆ ಇರಿಸಲಾಗಿತ್ತು, ಭಕ್ತಾದಿಗಳು ಗ್ರಂಥಗಳನ್ನು ನೋಡಿ ಶ್ರದ್ಧಾಪೂರ್ವಕವಾಗಿ ತೆಗೆದುಕೊಂಡರು.

# ಗರ್ಭಿಣಿ ಸ್ತ್ರೀಯರಿಗೆ ಸಾಮೂಹಿಕ ಸೀಮಂತ ಕಾರ್ಯಕ್ರಮ



• ಉದಯವಾಹಿನಿ, ಚಿಕ್ಕಬಳ್ಳಾಪುರ

ಸಮಾಜದಲ್ಲಿ ಶ್ರೀಮಂತರು ಉದಾರ ಮನಸ್ಸು ಉಳ್ಳವರಾಗಿ ಸಾಮಾಜಿಕ ಸೇವಾ ಕಾರ್ಯಗಳಲ್ಲಿ ತಮ್ಮನ್ನು ತಾವು ತೊಡಗಿಸಿಕೊಂಡರೆ ಆರೋಗ್ಯವಂತ ಉತ್ತಮ ಸಮಾಜ ನಿರ್ಮಾಣವಾಗಲು ಸಾಧ್ಯವಾಗುತ್ತದೆ ಎಂದು ಆದಿಚುಂಚನಗಿರಿ ಮಹಾ ಸಂಸ್ಥಾನದ ಚಿಕ್ಕಬಳ್ಳಾಪುರ ಶಾಖ ಮಠದ ಶ್ರೀ ಮಂಗಳನಾಥ ಸ್ವಾಮೀಜಿ ತಿಳಿಸಿದರು. ನಗರದ ಗುರುರಾಜ ಕಲ್ಯಾಣ ಮಂಟಪದಲ್ಲಿ ಯಲವ ಹಳ್ಳಿ ಎನ್ ರಮೇಶ್ ಸಮಾನ ಮನಸ್ಕರ ಸಂಸ್ಥೆ ವತಿಯಿಂದ ರಾಜ್ಯ ಒಕ್ಕಲಿಗರ ಸಂಘದ ನಿರ್ದೇಶಕ ಹಾಗೂ ಕರ್ನಾಟಕ ಗ್ಯಾರಂಟಿ ಯೋಜನೆ, ಜಿಲ್ಲಾಧ್ಯಕ್ಷ ಎನ್. ರಮೇಶ್ ನೇತೃತ್ವದಲ್ಲಿ ಏರ್ಪಡಿಸಿದ್ದ ಗರ್ಭಿಣಿ ಸ್ತ್ರೀಯರಿಗೆ ಸಾಮೂಹಿಕ ಸೀಮಂತ ಕಾರ್ಯಕ್ರಮ ಜ್ಯೋತಿ ಬೆಳಗಿಸುವ ಮೂಲಕ ಉದ್ಘಾಟಿಸಿ ಅವರು ಮಾತನಾಡಿದರು.

ಗರ್ಭಿಣಿ ಸ್ತ್ರೀಯರು ಮಾನಸಿಕವಾಗಿ ಸದೃಢ ಆಗಿರಬೇಕು ಹಾಗೂ ದೈಹಿಕವಾಗಿ ತಜ್ಞರ ಮಾರ್ಗದರ್ಶನದಂತೆ ವ್ಯಾಯಾಮದಲ್ಲಿ ತೊಡಗಿ ಕೊಳ್ಳಬೇಕು ಯಾವುದೇ ರೀತಿಯ ಆತಂಕ ಇಲ್ಲದೆ ಶಿಶುವಿಗೆ ಜನ್ಮ ನೀಡಬೇಕು ಎಂದು ಕರೆ ನೀಡಿದರು.

ಗರ್ಭಿಣಿಯರ ಗರ್ಭವಸ್ಥೆ ಸಮಯದಲ್ಲಿ ಸದಾಕಾಲ ಅವರು ನಿರಾತಂಕವಾಗಿ ನಿರ್ಮಲ ಮನಸ್ಸು ಉಳ್ಳವರಾಗಿ ಉತ್ತಮ ವಿಚಾರಗಳನ್ನು ಕೇಳುವಂತಹ ವಾತಾವರಣದಲ್ಲಿ ಇರಬೇಕು ಹಾಗೂ ವೈದ್ಯರ ಸೂಚನೆಯಂತೆ ಕಾಲಕಾಲಕ್ಕೆ ಅವರು ತಮ್ಮ ದೇಹವನ್ನು ವೈದ್ಯಕೀಯ ಪರೀಕ್ಷೆಗೆ ಒಳಪಡಿಸಿಕೊಳ್ಳಬೇಕು ಎಂದು ಕಿವಿ ಮತ್ತು ಹೇಳಿದರು. ಇದೇ ಸಂದರ್ಭದಲ್ಲಿ ಗುರುರಾಜ ಕಲ್ಯಾಣ ಮಂಟಪದಲ್ಲಿ ಕೆಂಪೇಗೌಡ ವೈದ್ಯಕೀಯ ಕೇಂದ್ರದ ವೈದ್ಯರುಗಳು ಆಗಮಿಸಿ ಮಹಿಳೆಯರಿಗೆ ಆರೋಗ್ಯ ತಪಾಸಣೆ ಮಾಡಿ ಅವರು ಯಾವ ರೀತಿ ತಮ್ಮ ದಿನ ನಿತ್ಯದ ಚಟುವಟಿಕೆಗಳನ್ನು ಆರೋಗ್ಯವಂತವಾಗಿ ರೂಪಿಸಿಕೊಳ್ಳಬೇಕು ಎಂದು ಅರಿವು ಮೂಡಿಸಿದರು.

# ರೈತರ ಮೇಲೆ ಅರಣ್ಯ ಇಲಾಖೆ ದಬ್ಬಾಳಿಕೆ-ಡಿಎಫ್‌ಒ ಅಮಾನತಿಗೆ ಒತ್ತಾಯ

• ಉದಯವಾಹಿನಿ, ಕೋಲಾರ

ಜಿಲ್ಲೆಯ ಶ್ರೀನಿವಾಸಪುರ ತಾಲ್ಲೂಕಿನ ರೈತರ ಭೂಮಿಯನ್ನು ಮರುವಶ ಪಡೆಯಲು ಆದೇಶ ಹೊರಡಿಸಿ ವಾಟ್ಸಫ್ ಸಂದೇಶದ ಮೂಲಕ ಭಯಭೀತಗೊಳಿಸಲು ಯತ್ನಿಸಿರುವ ಜಿಲ್ಲಾ ಉಪ ಅರಣ್ಯಾಧಿಕಾರಿ ಸಕ್ರೀನ ಸಿಕ್ಕಲೀಗಾರ್ ಮೇಲೆ ಸೂಕ್ತ ಕಾನೂನು ಕ್ರಮ ಕೈಗೊಂಡು ಅಮಾನತು ಮಾಡಬೇಕೆಂದು ಆಗ್ರಹಿಸಿ ನಗರದ ಉಪ ಅರಣ್ಯಾಧಿಕಾರಿಗಳ ಕಚೇರಿ ಆವರಣದಲ್ಲಿ ರೈತರು ಬೃಹತ್ ಪ್ರತಿಭಟನೆ ನಡೆಸಿ ಜಿಲ್ಲಾಧಿಕಾರಿಗಳಿಗೆ ಮನವಿ ಸಲ್ಲಿಸಿದರು.

ಈ ವೇಳೆ ಕೋಮುಲ್ ನಿರ್ದೇಶಕ ಕೆ.ಕೆ.ಮಂಜು ಮಾತನಾಡಿ, ಶ್ರೀನಿವಾಸಪುರ ತಾಲ್ಲೂಕಿನ ಕೇತಗಾನಹಳ್ಳಿ ರೈತರ ಜಮೀನನ್ನು ಅರಣ್ಯ ಅಧಿಕಾರಿಗಳು ಮರುವಶ ಪಡೆದುಕೊಳ್ಳಲು ಡಿಎಫ್‌ಒ ಆದೇಶಿಸಿರುವ ವಿರುದ್ಧ ನಾವು ಪ್ರತಿಭಟನೆ ಮಾಡುತ್ತಿದ್ದೇವೆ. ಆಯ ಕಾಲಾನುಸಾರ ನ್ಯಾಯಾಲಯ ಆದೇಶಗಳನ್ನು ಧಿಕ್ಕರಿಸಿರುವ ಈ ಅಧಿಕಾರಿ ವರ್ತನೆ ಖಂಡನೀಯ ಎಂದು ತಿಳಿಸಿ, ಕಂದಾಯ ಇಲಾಖೆಯವರೇ ಸಾಗುವಳಿ ಚೀಟಿ ನೀಡಿದ್ದು ಆ ಭೂಮಿಯಲ್ಲಿ ಬೆಳೆ ಬೆಳೆಯುತ್ತಿದ್ದೇವೆ. ಅರಣ್ಯಕ್ಕೆ ಸೇರಿದ್ದು ಎಂದು ಅಧಿಕಾರಿಗಳು ರೈತರ ಮೇಲೆ ದೌರ್ಜನ್ಯ ನಡೆಸಿ ಬಂದೂಕು ತೋರಿಸಿ ಪ್ರಾಣ ಬೆದರಿಕೆ ಮಾಡುತ್ತಿದ್ದು ತಕ್ಷಣ ಡಿಎಫ್‌ಒ ಅವರ ಮೇಲೆ ಕಾನೂನು ಕ್ರಮ ಕೈಗೊಳ್ಳಬೇಕೆಂದು ಆಗ್ರಹಿಸಿದರು. ಜಿಲ್ಲಾ ಕಾಂಗ್ರೆಸ್ ಎಸ್ಟಿ ಘಟಕದ ಅಧ್ಯಕ್ಷ ಅಂಬರೀಷ್, ಮಾತನಾಡಿ, ಶ್ರೀನಿವಾಸಪುರ ತಾಲ್ಲೂಕಿನಲ್ಲಿ ಅರಣ್ಯ ಭೂಮಿ ಒತ್ತುವರಿ ತೆರವು ಕಾರ್ಯಾಚರಣೆ ಹೆಸರಿನಲ್ಲಿ ಅರಣ್ಯ ಇಲಾಖೆಯ ಸಿಬ್ಬಂದಿಯನ್ನು ಶಸ್ತ್ರಾಸ್ತ್ರಗಳೊಂದಿಗೆ ನಿಯೋಜಿಸುವಂತೆ ಸೂಚಿಸಿರುವುದಾಗಿ ಹೇಳಲಾದ ವಾಟ್ಸಾಪ್ ಸಂದೇಶದ ಕುರಿತು ಟೀಕಿಸಿದ ಅವರು ಇದೇನು ಪ್ರಜಾಪ್ರಭುತ್ವ ರಾಷ್ಟ್ರವಾ ಅಥವಾ ಸರ್ವಾಧಿಕಾರಿ ಆಡಳಿತವಾ ಎಂದು ಪ್ರಶ್ನಿಸಿದರು.

# ಬಿಡದಿ ಟೌನ್‌ಶಿಪ್ ಪರಿಹಾರಕ್ಕೆ ನಕಲಿ ದಾಖಲೆ ಸೃಷ್ಟಿ - ಸಿಐಡಿ ತನಿಖೆಗೆ ಆಗ್ರಹ


## ಸಮಗ್ರವಾದ ತನಿಖೆ ಅಗತ್ಯವಾಗಿರುವುದರಿಂದ ಸಿಐಡಿ ಅರ್ಥಿಕ ಅಪರಾಧಗಳ ವಿಭಾಗದಿಂದ ನ್ಯಾಯಾಂಗ ಉಸ್ತುವಾರಿಯಲ್ಲಿ ತನಿಖೆ ನಡೆಸಬೇಕು

• ಉದಯವಾಹಿನಿ, ರಾಮನಗರ

1 ಬಿಡದಿ ಟೌನ್ ಶಿಪ್ ಹಣ ದೋಚಲು ನಕಲಿ ದಾಖಲಾತಿ
2 ಮುಖಂಡ ಕುಮಾರಸ್ವಾಮಿ ಒತ್ತಾಯಿಸಿದರು.
3 ನಕಲಿ ದಾಖಲಾತಿಗಳು ಜಿಬಿಡಿಎ ಕಛೇರಿಗೆ ಸಲ್ಲಿಕೆ

ಬಿಡದಿ ಟೌನ್ ಶಿಪ್ ಪರಿಹಾರದ ಹಣ ದೋಚಲು ನಕಲಿ ದಾಖಲಾತಿ ಸೃಷ್ಟಿಸಿ ರೈತರನ್ನು ಹಾಗೂ ಸರ್ಕಾರವನ್ನು ವಂಚಿಸಿರುವ ಪ್ರಕರಣವು ತುಂಬಾ ವ್ಯವಸ್ಥಿತ ಹಾಗೂ ಸಂಘಟಿತ ಕೃತ್ಯವಾಗಿದ್ದು ಪ್ರಕರಣವನ್ನು ಸಿಐಡಿ ತನಿಖೆಗೆ ಒಳಪಡಿಸಬೇಕೆಂದು ಕರ್ನಾಟಕ ರಾಜ್ಯ ರೈತ ಸಂಘದ ಮುಖಂಡ ಕುಮಾರಸ್ವಾಮಿ ಒತ್ತಾಯಿಸಿದರು.

ನಗರದ ಎಪಿಎಂಸಿ ಸಭಾಂಗಣದಲ್ಲಿರುವ ರೈತ ಸಭಾಂಗಣದಲ್ಲಿ ನಡೆದ ಸುದ್ದಿಗೋಷ್ಠಿಯಲ್ಲಿ ಮಾತನಾಡಿದ ಅವರು, ಬಿಡದಿ ಟೌನ್‌ಷಿಪ್ ಭೂ ಸ್ವಾಧೀನಕ್ಕೆ ಸಂಬಂಧಿಸಿದಂತೆ ಜಿಬಿಡಿಎ ಅಧಿಕಾರಿಗಳು ಹಾಗೂ ರಿಯಲ್ ಎಸ್ಟೇಟ್ ದಲ್ಲಾಳಿಗಳು ಜಂಟಿ ಪಿತೂರಿ ನಡೆಸುತ್ತಿದ್ದು, ಈ ಬಗ್ಗೆ ಆಳವಾದ ಹಾಗೂ ಸಮಗ್ರವಾದ ತನಿಖೆ ಅಗತ್ಯವಾಗಿರುವುದರಿಂದ ಸಿಐಡಿ ಅರ್ಥಿಕ ಅಪರಾಧಗಳ ವಿಭಾಗದಿಂದ ನ್ಯಾಯಾಂಗ ಉಸ್ತುವಾರಿಯಲ್ಲಿ


ಉದಯವಾಹಿನಿ ಚಿತ್ರ

ತನಿಖೆ ನಡೆಸಬೇಕು ಎಂದರು.

ಜಿಬಿಡಿಎ ಕಛೇರಿಯು ರಿಯಲ್ ಎಸ್ಟೇಟ್ ದಲ್ಲಾಳಿಗಳ ಕಾರ್ಯ ಸ್ಥಾನವಾಗಿ ಬದಲಾಗಿದೆ ಎಂದು ಆರೋಪಿಸಿದ ಅವರು, ಬಿಡದಿ ಟೌನ್‌ಶಿಪ್ ಭೂ ಸ್ವಾಧೀನಕ್ಕೆ ಇದುವರೆಗೂ ಯಾವುದೇ ಅಂತಿಮ ದರ ನಿಗದಿ ಐತೀರ್ಪು ಪ್ರಕಟ ಮಾಡಿಲ್ಲ ಎಂದು ಸ್ವತಃ ರಾಜ್ಯ ಸರ್ಕಾರವೇ ಹೈಕೋರ್ಟ್‌ಗೆ ಪ್ರಮಾಣಪತ್ರ ಸಲ್ಲಿಸಿದೆ.

ಅಂತಿಮ ಅಧಿಸೂಚನೆ ಹೊರಡಿಸಿದ ಯಾವುದೇ ಭೂಮಿಗೆ ಸಕ್ಷಮ ಭೂ ಬೆಲೆ ನಿಗದಿ ಪ್ರಾಧಿಕಾರ ಅವಾರ್ಡ್ ಐ ತೀರ್ಪು ಹೊರಡಿಸದೇ ಭೂ ಸ್ವಾಧೀನ ಪ್ರಕ್ರಿಯೆ ನಡೆಸುವಂತಿಲ್ಲ ಎಂದು ಹಲವಾರು ಹೈಕೋರ್ಟ್ ಹಾಗೂ ಸುಪ್ರೀಂ ಕೋರ್ಟ್ ತೀರ್ಪುಗಳು ಇವೆ. ಭೂ ಸ್ವಾಧೀನ ಕಾಯ್ದೆಯ ಅಡಿಯಲ್ಲಿ ಅಧಿಕೃತವಾಗಿ ಐತೀರ್ಪು ಹೊರಡಿಸದೇ ಮತ್ತು ಕಾನೂನುಬದ್ಧವಾಗಿ ಪರಿಹಾರ ನೀಡದೇ ಖಾಸಗಿ ಜಮೀನನ್ನು ವಶಪಡಿಸಿಕೊಳ್ಳುವುದು ಸಂಪೂರ್ಣವಾಗಿ ಅಕ್ರಮ ಮತ್ತು ಕಾನೂನುಬಾಹಿರವಾಗಿದೆ ಎಂದು ಆಪಾದಿಸಿದರು.

**ರಾಜ್ಯ ಸರ್ಕಾರ ಹಾಗೂ ಗ್ರೇಟರ್ ಬೆಂಗಳೂರು ಅಭಿವೃದ್ಧಿ ಪ್ರಾಧಿಕಾರ ಕಾನೂನು ಬಾಹಿರ ಹಾಗೂ ಅಕ್ರಮಗಳಲ್ಲಿ ತೊಡಗಿಸಿಕೊಂಡಿರುವುದು ಮಾತ್ರವಲ್ಲ, ಕೃಷಿ ಭೂಮಿ ರಕ್ಷಣೆಗಾಗಿ ಹಾಗೂ ಬಲವಂತ ಹಾಗೂ ಅನ್ಯಾಯದ ಭೂ ಸ್ವಾಧೀನದ ವಿರುದ್ಧ ಹೋರಾಡುತ್ತಿರುವ ರೈತರನ್ನು ಬೆದರಿಸಲು ನಕಲಿ ದಾಖಲಾತಿ ಸೃಷ್ಟಿಸಿ ಪರಿಹಾರ ದೋಚುವ ಕೃತ್ಯದಲ್ಲಿ ತೊಡಗಿದೆ.**
**ಯಶವಂತ್‌ಕರ್ನಾಟಕ ಪ್ರಾಂತ ರೈತ ಸಂಘದ ರಾಜ್ಯ ಪ್ರಧಾನ ಕಾರ್ಯದರ್ಶಿ**

ಈ ಬಗ್ಗೆ ಆಳವಾದ ಹಾಗೂ ಸಮಗ್ರವಾದ ತನಿಖೆ ನಡೆಸಬೇಕು. ಜಿಬಿಡಿಎ ಅಧಿಕಾರಿಗಳು ಹಾಗೂ ದಲ್ಲಾಳಿಗಳ ಜಂಟಿ ಪಾತ್ರವನ್ನು ಬಯಲುಗೊಳಿಸಬೇಕು ಎಂದರು.

ರೈತರ ಜಮೀನಿನ ಪಹಣಿ, ಆಧಾರ್ ಕಾರ್ಡ್ ,ಬ್ಯಾಂಕ್ ಖಾತೆ, ಮೊಬೈಲ್ ನಂಬರ್, ವಂಶವೃಕ್ಷ ಮುಂತಾದ ದಾಖಲಾತಿಗಳನ್ನು ಡಿಜಿಟಲ್ ಸಂಗ್ರಹದಲ್ಲಿ ಪರಿಶೀಲನೆ ಮಾಡಿಕೊಳ್ಳುವ ಸುಲಭ ಅವಕಾಶ ಇರುವಾಗಲೂ ಹೇಗೆ ನಕಲಿ ದಾಖಲಾತಿಗಳು ಜಿಬಿಡಿಎ ಕಛೇರಿಗೆ ಸಲ್ಲಿಕೆಯಾಗುತ್ತವೆ. ಜಿಬಿಡಿಎ ಅಧ್ಯಕ್ಷರು, ನಿರ್ದೇಶಕರು ಹಾಗೂ ಭೂ ಸ್ವಾಧೀನ ಅಧಿಕಾರಿಗಳ ಬೆಂಬಲ ಹಾಗೂ ಸಹಕಾರ ಇಲ್ಲದೇ ಇಂತಹ ಪ್ರಯತ್ನ ಮಾಡುವುದು ಸಾಧ್ಯವಿಲ್ಲ. ಜಂಟಿಯಾಗಿ ನಡೆಸಿದ ಕೃತ್ಯದಿಂದ ತಮ್ಮನ್ನು ರಕ್ಷಿಸಿಕೊಳ್ಳಲು ಜಿಬಿಡಿಎ ಅಧಿಕಾರಿಗಳು ದೂರು ನೀಡುವ ನಾಟಕವಾಡಿದ್ದಾರೆ ಎಂದರು. ರಾಜ್ಯ ರೈತ ಸಂಘದ ಜಿಲ್ಲಾ ಪ್ರಧಾನ ಕಾರ್ಯದರ್ಶಿ ನಾಗರಾಜು ಮಾತನಾಡಿ, ಭೂ ಸ್ವಾಧೀನಕ್ಕೆ ಸಂಬಂಧಿಸಿದಂತೆ ಇದುವರೆಗೆ ಪರಿಹಾರ ಪಡೆದಿರುವ ಎಲ್ಲಾ ರೈತರ ಪಟ್ಟಿಯನ್ನು ಬಿಡುಗಡೆ ಮಾಡಿ ಪರಿಹಾರ ವಿತರಣೆ ಸಂಬಂಧ ಜಮೀನು ಮಾಲೀಕರಿಂದ ಆಕ್ಷೇಪಣೆ ಆಹ್ವಾನಿಸಬೇಕು ಎಲ್ಲಾ ದಾಖಲಾತಿಗಳನ್ನು ಸಮಗ್ರ ಪರಿಶೀಲನೆ ಮಾಡಬೇಕು. ಬಿಡದಿ ಟೌನ್ ಶಿಪ್ ಯೋಜನೆಯ ಸಮಗ್ರ ಪರಿಶೀಲನೆಗಾಗಿ ರಾಜ್ಯ ಸರ್ಕಾರ ಪ್ರಕಟಿಸಿರುವ ನ್ಯಾಯಮೂರ್ತಿ ಗುಹನಾಥನ್ ನರೇಂದರ್ ನೇತೃತ್ವದ ಸಮಿತಿ ಯನ್ನು ಕೂಡಲೇ ಅಸ್ತಿತ್ವಕ್ಕೆ ತರಬೇಕು ಎಂದು ಆಗ್ರಹ ಪಡಿಸಿದರು.



## ಮಿನಿ ನ್ಯೂಸ್

### ತೆರಿಗೆ ಬಾಕಿದಾರರ ವಿರುದ್ಧ ಕಠಿಣ ಕ್ರಮಕ್ಕೆ ಸೂಚನೆ: ಪಾಲಿಕೆ ಆಯುಕ್ತೆ ಸವಿತಾ


ಉದಯವಾಹಿನಿ ಚಿತ್ರ

• ಉದಯವಾಹಿನಿ, ಮೈಸೂರು

ಮೈಸೂರು ಮಹಾನಗರ ಪಾಲಿಕೆ ವ್ಯಾಪ್ತಿಯ ತೆರಿಗೆ ಬಾಕಿದಾರರ ಕುರಿತು ಮೈಸೂರು ಮಹಾನಗರ ಪಾಲಿಕೆ ಆಯುಕ್ತರಾದ ಶ್ರೀಮತಿ ಸವಿತಾ ಅವರ ಅಧ್ಯಕ್ಷತೆಯಲ್ಲಿ, ಹೆಚ್ಚುವರಿ ಆಯುಕ್ತರಾದ ವೀಣಾರವರು ಉಪ ಆಯುಕ್ತರು (ಕಂದಾಯ) ಸೋಮಶೇಖರ್ ಹಾಗೂ ವಲಯಾಧಿಕಾರಿಗಳು, ಕಂದಾಯ ಅಧಿಕಾರಿಗಳು ಹಾಗೂ ಕಂದಾಯ ನಿರೀಕ್ಷಕರೊಂದಿಗೆ ಇಂದು ವಿಶೇಷ ಪರಿಶೀಲನಾ ಸಭೆ ನಡೆಯಿತು. ಸಭೆಯಲ್ಲಿ ಪಾಲಿಕೆ ವ್ಯಾಪ್ತಿಯ ಪ್ರತಿಯೊಂದು ವಾರ್ಡ್‌ನ ತೆರಿಗೆ ಬಾಕಿದಾರರ ವಿವರಗಳನ್ನು ಪ್ರತ್ಯೇಕವಾಗಿ ಪರಿಶೀಲಿಸಿ, ದೀರ್ಘಕಾಲದಿಂದ ತೆರಿಗೆ ಪಾವತಿಸದೆ ಬಾಕಿ ಉಳಿಸಿಕೊಂಡಿರುವ ಆಸ್ತಿಗಳ ಕುರಿತು ಕೈಗೊಳ್ಳಬೇಕಾದ ಕ್ರಮಗಳ ಬಗ್ಗೆ ಸಮಗ್ರವಾಗಿ ಚರ್ಚಿಸಲಾಯಿತು. ಸರ್ಕಾರದ ನಿಯಮಗಳು ಹಾಗೂ 2025ರ ರಾಜ್ಯಪತ್ರ ಅಧಿಸೂಚನೆಯನ್ವಯ, ತೆರಿಗೆ ಬಾಕಿದಾರರಿಗೆ ನಿಗದಿತ ಕಾನೂನು ಪ್ರಕ್ರಿಯೆಯಂತೆ ಮೊದಲನೇ ನೋಟಿಸ್, ಎರಡನೇ ನೋಟಿಸ್ ಹಾಗೂ ಮೂರನೇ ನೋಟಿಸ್ ಜಾರಿಗೊಳಿಸಬೇಕು. ಈ ನೋಟಿಸ್‌ಗಳನ್ನು ಜಾರಿಗೊಳಿಸಿದ ನಂತರವೂ ಬಾಕಿ ತೆರಿಗೆಯನ್ನು ಪಾವತಿಸದಿದ್ದಲ್ಲಿ, ಅನ್ವಯಿಸುವ ಕಾನೂನು ನಿಯಮಗಳನ್ವಯ ಆಸ್ತಿಯನ್ನು ಜಪ್ತಿ ಮಾಡುವುದೂ ಸೇರಿದಂತೆ ಮುಂದಿನ ಕಾನೂನು ಕ್ರಮಗಳನ್ನು ಕೈಗೊಳ್ಳಲು ಅವಕಾಶವಿದೆ.

ತೆರಿಗೆ ಬಾಕಿ ಇರುವ ಪ್ರಕರಣಗಳಲ್ಲಿ ನೋಟಿಸ್ ಜಾರಿ ಪ್ರಕ್ರಿಯೆಯನ್ನು ಇದೇ ತಿಂಗಳ ಅಂತ್ಯದೊಳಗೆ ಪೂರ್ಣಗೊಳಿಸುವಂತೆ ಸಂಬಂಧಪಟ್ಟ ಅಧಿಕಾರಿಗಳಿಗೆ ಕಟ್ಟುನಿಟ್ಟಿನ ಸೂಚನೆ ನೀಡಲಾಗಿದೆ. ನಿಗದಿತ ಅವಧಿಯಲ್ಲಿಯೂ ತೆರಿಗೆ ಪಾವತಿಸದ ಪ್ರಕರಣಗಳಲ್ಲಿ ನಿಯಮಾನುಸಾರ ಮುಂದಿನ ಕಾನೂನು ಕ್ರಮ ಕೈಗೊಳ್ಳಲಾಗುವುದು.

### ರುದ್ರಭೂಮಿ ಇಲ್ಲದೆ ಹಳ್ಳದ ದಂಡೆಯಲ್ಲೇ ಅಂತ್ಯಸಂಸ್ಕಾರ


ಉದಯವಾಹಿನಿ ಚಿತ್ರ

• ಉದಯವಾಹಿನಿ, ಹನೂರು

ತಾಲ್ಲೂಕಿನ ಅಜ್ಜೀಪುರ ಗ್ರಾಮ ಪಂಚಾಯಿತಿ ವ್ಯಾಪ್ತಿಯ ಅಂಬಿಕಾಪುರ ಗ್ರಾಮದಲ್ಲಿ ಸ್ವಂತ ರುದ್ರಭೂಮಿ ಇಲ್ಲದೆ ಮೃತರ ಅಂತ್ಯ ಸಂಸ್ಕಾರವನ್ನು ಹಳ್ಳದ ದಂಡೆಯಲ್ಲೇ ನೆರವೇರಿಸುವ ಅಮಾನವೀಯ ಪರಿಸ್ಥಿತಿ ನಿರ್ಮಾಣವಾಗಿದೆ. ಅಧಿಕಾರಿಗಳ ಈ ನಿರ್ಲಕ್ಷ್ಯ ಧೋರಣೆಯನ್ನು ಖಂಡಿಸಿ ಸ್ಥಳೀಯ ಗ್ರಾಮಸ್ಥರು ಹಾಗೂ ರೈತ ಸಂಘದ ಮುಖಂಡರು ಪ್ರತಿಭಟನೆ ನಡೆಸಿ ತೀವ್ರ ಆಕ್ರೋಶ ವ್ಯಕ್ತಪಡಿಸಿದ್ದಾರೆ. ಕಳೆದ 70 ವರ್ಷಗಳಿಂದ ಈ ಗ್ರಾಮದಲ್ಲಿ ನೆಲೆಸಿರುವ ಒಬಿಸಿ ಸಮುದಾಯಕ್ಕೆ ಸರ್ಕಾರದಿಂದ ಸಾರ್ವಜನಿಕ ಬಳಕೆಗಾಗಿ ಮಂಜೂರಾಗಿದ್ದ 0.44 ಸೆಂಟ್ ಸ್ಮಶಾನದ ಜಾಗವಿದೆ. ಆದರೆ ಈ ಜಾಗಕ್ಕೆ ಮತ್ತೊಂದು ಸಮುದಾಯದವರು ಬೋರ್ಡ್ ಹಾಕಿ ತಮ್ಮದೆಂದು ಹೇಳಿಕೊಳ್ಳುತ್ತಿದ್ದಾರೆ ಎಂಬುದು ಗ್ರಾಮಸ್ಥರ ಆರೋಪ. ಈ ಅಕ್ರಮ ಬೋರ್ಡ್‌ಗಳನ್ನು ತೆರವುಗೊಳಿಸುವಂತೆ ತಾಲ್ಲೂಕು ಆಡಳಿತ ಮತ್ತು ಕಂದಾಯ ಇಲಾಖೆಗೆ ಗ್ರಾಮಸ್ಥರು ಈವರೆಗೆ ನಾಲ್ಕು ಬಾರಿ ಲಿಖಿತ ಮನವಿ ಸಲ್ಲಿಸಿದ್ದಾರೆ. ಆದರೂ ಅಧಿಕಾರಿಗಳು ಯಾವುದೇ ಕ್ರಮ ಕೈಗೊಂಡಿಲ್ಲ. ಪರಿಣಾಮವಾಗಿ ಒಬಿಸಿ ಸಮುದಾಯದ ಜನರು ಶವಸಂಸ್ಕಾರಕ್ಕೂ ಪರದಾಡುವಂತಾಗಿದ್ದು, ಅನಿವಾರ್ಯವಾಗಿ ಉಡುತುರೆ ಹಳ್ಳದ ದಂಡೆಯಲ್ಲೇ ಅಂತ್ಯಸಂಸ್ಕಾರ ನೆರವೇರಿಸಲಾಯಿತು. ಸಂಬಂಧಪಟ್ಟ ಅಧಿಕಾರಿಗಳು ತಕ್ಷಣ ಸ್ಥಳಕ್ಕೆ ಭೇಟಿ ನೀಡಿ ತನಿಖೆ ನಡೆಸಬೇಕು.

ಸ್ಮಶಾನದ ಜಾಗದಲ್ಲಿ ಹಾಕಿರುವ ಅಕ್ರಮ ಬೋರ್ಡ್‌ಗಳನ್ನು ಕೂಡಲೇ ತೆರವುಗೊಳಿಸಿ, ಮಂಜೂರಾದ ಜಾಗವನ್ನು ಎಲ್ಲಾ ಸಮುದಾಯದವರಿಗೂ ಲಭ್ಯವಾಗುವಂತೆ ಮಾಡಬೇಕು.

### ಪ್ರಜಾ ಸೇವೆ ಅಭಿಯಾನಕ್ಕೆ ಉತ್ತಮ ಸ್ಪಂದನೆ 2969 ಅರ್ಜಿಗಳು ಸಲ್ಲಿಕೆ



ಉದಯವಾಹಿನಿ ಚಿತ್ರ

• ಉದಯವಾಹಿನಿ, ಕೋಲಾರ

ಕೋಲಾರ ಜಿಲ್ಲೆಯಲ್ಲಿ ಸೆಪ್ಟೆಂಬರ್ 5ರಂದು ನಡೆದ ಪ್ರಜಾಸೇವೆ ಆಂದೋಲನ ಸಾರ್ವಜನಿಕರಿಂದ ಅಭೂತಪೂರ್ವ ಸ್ಪಂದನೆ ವ್ಯಕ್ತವಾಗಿದೆ. ಅರಣ್ಯ, ಜೀವಿಶಾಸ್ತ್ರ ಮತ್ತು ಪರಿಸರ ಸಚಿವರು ಹಾಗೂ ಜಿಲ್ಲಾ ಉಸ್ತುವಾರಿ ಸಚಿವರಾದ ರಾಮಲಿಂಗರೆಡ್ಡಿ ಅಧ್ಯಕ್ಷತೆಯಲ್ಲಿ ನಡೆದ ಈ ಅಭಿಯಾನದಲ್ಲಿ ಒಟ್ಟು 2969 ಅರ್ಜಿಗಳು ಸಲ್ಲಿಕೆಯಾಗಿದ್ದು, ಈ ಪೈಕಿ 135 ಅರ್ಜಿಗಳನ್ನು ಅದೇ ದಿನ ಸ್ಥಳದಲ್ಲಿಯೇ ಇತ್ಯರ್ಥಪಡಿಸಲಾಗಿದೆ. ತಾಲ್ಲೂಕುವಾರು ವರದಿಯ ಅನ್ವಯ, ಕೋಲಾರ ತಾಲ್ಲೂಕಿನಲ್ಲಿ ಅತಿ ಹೆಚ್ಚು ಅಂದರೆ 1580 ಅರ್ಜಿಗಳು ಸಲ್ಲಿಕೆಯಾಗಿದ್ದು, 66 ಅರ್ಜಿಗಳನ್ನು ಇತ್ಯರ್ಥಪಡಿಸಲಾಗಿದೆ (1514 ಬಾಕಿ). ಅದೇ ರೀತಿ ಬಂಗಾರಪೇಟೆಯ 510 ಅರ್ಜಿಗಳು (20 ಇತ್ಯರ್ಥ, 490 ಬಾಕಿ), ಮಾಲೂರಿನ 498 ಅರ್ಜಿಗಳು (3 ಇತ್ಯರ್ಥ, 495 ಬಾಕಿ), ಕೆ.ಜಿ.ಎಫ್ ನ 197 ಅರ್ಜಿಗಳು (23 ಇತ್ಯರ್ಥ, 174 ಬಾಕಿ), ಶ್ರೀನಿವಾಸಪುರದ 137 ಅರ್ಜಿಗಳು (22 ಇತ್ಯರ್ಥ, 115 ಬಾಕಿ) ಹಾಗೂ ಮುಳಬಾಗಿಲಿನ 31 ಅರ್ಜಿಗಳು (1 ಇತ್ಯರ್ಥ, 30 ಬಾಕಿ) ಸಲ್ಲಿಕೆಯಾಗಿವೆ.ಆಡಳಿತವನ್ನು ನೇರವಾಗಿ ಜನರ ಮನೆ ಬಾಗಿಲಿಗೆ ಕೊಂಡೊಯ್ಯುವ ಉದ್ದೇಶದಿಂದ ಹಮ್ಮಿಕೊಂಡಿದ್ದ ಈ 'ಪ್ರಜಾ ಸೇವಾ ಅಭಿಯಾನ'ವು ಜನಸಾಮಾನ್ಯರಲ್ಲಿ ಹೊಸ ವಿಶ್ವಾಸ ಮೂಡಿಸಿದೆ. ಸರ್ಕಾರಿ ಕಚೇರಿಗಳಿಗೆ ಅಲೆದು ಹೈರಾಣಾಗಿದ್ದ ಜನತೆಗೆ, ಒಂದೇ ಸೂರಿನಡಿ ತಮ್ಮ ಸಮಸ್ಯೆಗಳಿಗೆ ತ್ವರಿತ ಮುಕ್ತಿ ದೊರಕಿಸಿಕೊಡುವ ಭರವಸೆಯ ಬೆಳಕಾಗಿ ಈ ಆಂದೋಲನ ಯಶಸ್ವಿಯಾಗಿದೆ ಎಂದು ಜಿಲ್ಲಾ ತಿಳಿಸಿದೆ.

### ಭ್ರಷ್ಟಾಚಾರ ದೇಶದ ಪ್ರಗತಿಗೆ ದೊಡ್ಡ ಅಡ್ಡಿ

• ಉದಯವಾಹಿನಿ, ಕನಕಪುರ

ಭ್ರಷ್ಟಾಚಾರವು ಯಾವುದೇ ದೇಶದ ಆರ್ಥಿಕ, ಸಾಮಾಜಿಕ ಮತ್ತು ಆಡಳಿತಾತ್ಮಕ ಪ್ರಗತಿಗೆ ದೊಡ್ಡ ಅಡ್ಡಿಯಾಗಿದೆ ಎಂದು ವಿಶ್ರಾಂತ ಪ್ರಧಾನ ಜಿಲ್ಲಾ ಮತ್ತು ಸತ್ರ ನ್ಯಾಯಾಧೀಶರಾದ ಬಿ. ಶಿವಲಿಂಗೇಗೌಡ ಹೇಳಿದ್ದಾರೆ.

ನಗರದ ರೋಟರಿ ಭವನದಲ್ಲಿ ನಡೆದ ರಾಷ್ಟ್ರೀಯ ಭ್ರಷ್ಟಚಾರ ನಿರ್ಮೂಲನೆ ಹಾಗೂ ಕಾರ್ಯಚರಣೆ ಸಮಿತಿ ಇಂಡಿಯಾದ ಬೆಂಗಳೂರು ದಕ್ಷಿಣ ಜಿಲ್ಲಾ ಸಮಾವೇಶ ಹಾಗೂ ಕನಕಪುರ ತಾಲ್ಲೂಕು ಘಟಕದ ಉದ್ಘಾಟನೆ ಮಾಡಿ ಮಾತನಾಡಿದರು

ಸಾರ್ವಜನಿಕ ಸೇವೆಗಳನ್ನು ಪ್ರಾಮಾಣಿಕವಾಗಿ ಒದಗಿಸಬೇಕಾದ ಸಂದರ್ಭದಲ್ಲಿ ಲಂಚ, ಸ್ವಜನಪಕ್ಷಪಾತ, ಅಧಿಕಾರದ ದುರುಪಯೋಗ, ಅಕ್ರಮ ಹಣದ ವ್ಯವಹಾರ ಸೇರಿದಂತೆ ವಿವಿಧ ರೀತಿಯ ಭ್ರಷ್ಟಾಚಾರಗಳು ನಡೆಯುವುದರಿಂದ ದೇಶದ ಅಭಿವೃದ್ದಿಗೆ ಮೀಸಲಾದ ಸಂಪನ್ಮೂಲ ದುರುಪಯೋಗವಾಗುತ್ತದೆ ಎಂದು ತಿಳಿಸಿದರು. ಆದಿಚುಂಚನಗಿರಿಯ ರಾಮನಗರ ಶಾಖಾ ಮಠಗಳ ಕಾರ್ಯದರ್ಶಿ ಅನ್ನದಾನೇಶ್ವರನಾಥಸ್ವಾಮಿಗಳು ಮಾತನಾಡಿ ಮನುಷ್ಯ ತನ್ನ ಅತಿಯಾದ ಆಸೆಯಿಂದ ನಿರಂತರವಾಗಿ ತಪ್ಪುಗಳನ್ನು ಮಾಡುತ್ತ ಹೋಗುತ್ತಾನೆ ಎಂದರು.

ತನ್ನ ಆಸೆಯನ್ನು ಈಡೇರಿಸಿಕೊಳ್ಳುವ ಭರದಲ್ಲಿ ಸಮಾಜದ ಎಲ್ಲಾ ರಂಗಗಳಲ್ಲಿ ಲಂಚವು ತಾಂಡವವಾಡಲು ಕಾರಣವಾಗಿದ್ದಾನೆ ಇದನ್ನು ಹೋಗಲಾಡಿಸುವುದು ಒಬ್ಬರಿಂದ ಸಾಧ್ಯವಿಲ್ಲ ನಾವು ನೀವೆಲ್ಲರೂ ಒಗ್ಗಟ್ಟಿನಿಂದ ಮನಸ್ಸು ಮಾಡಿದಾಗ ಮಾತ್ರ ಸಾಧ್ಯವಾಗುತ್ತದೆ ಎಂಬ ಆಶಯವನ್ನು ವ್ಯಕ್ತಪಡಿಸಿದರು.

ಬೆಂಗಳೂರು ದಕ್ಷಿಣ ಜಿಲ್ಲಾಧ್ಯಕ್ಷ ನಾರಾಯಣ್ ಮಾತನಾಡಿ,ಮುಂದಿನ ದಿನಗಳ ಬ್ರಷ್ಟಾಚಾರದ ವಿರುದ್ದ ನಿಮ್ಮ ಹೋರಾಟವು ಒಗ್ಗಟ್ಟಿನಿಂದ ಕೂಡಿರಬೇಕಾಗಿದೆ ನಿಮ್ಮ ಹಾಗೂ ಸಾರ್ವಜನಿಕರ ಕೆಲಸ ಕಾರ್ಯಗಳನ್ನು ಮಾಡುವಲ್ಲಿ ಸಂಘಟನೆಯು ಜನಮನ್ನಣೆ ಗಳಿಸುವಂತೆ ಕರೆ ನೀಡಿದರು.

